ಸಂಪುಟ: 04 ಸಂಚಿಕೆ: 129 ಪುಟಗಳು: 08 ಸೋಮವಾರ 22 ಜುಲೈ 2024 www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**

ಅವಕಾಶಗಳು ಸೂರ್ಯೋದಯವಿದ್ದಂತೆ. ಸ್ವೀಕರಿಸುವುದೋ ಬೇಡವೋ ಎಂದು ಯೋಚಿಸುತ್ತ ಕುಳಿತರೆ ಸೂರ್ಯಾಸ್ತ ಆಗಿಬಿಡುತ್ತದೆ.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಶಿರೂರು ಬಳಿ ಗುಡ್ಡ ಕುಸಿತ ಸ್ಥಳಕ್ಕೆ ಸಿಎಂ ಸಿದ್ದರಾಮಯ್ಯ ಭೇಟಿ

• ಉದಯವಾಹಿನಿ, ಉತ್ತರಕನ್ನಡ

ಉತ್ತರ ಕನ್ನಡ ಜಿಲ್ಲೆಯ ಅಂಕೋಲಾ ತಾಲ್ಲೂಕಿನ ಶಿರೂರು ಬಳಿ ಗುಡ್ಡ ಕುಸಿತ ಸ್ಥಳಕ್ಕೆ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭೇಟಿ ನೀಡಿದರು. ಶಿರೂರು ಬಳಿ ಗುಡ್ಡ ಕುಸಿತ ಸ್ಥಳಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಭೇಟಿ ನೀಡಿದ್ದು, ಈ ವೇಳೆ ಅಧಿಕಾರಿಗಳಿಂದ ಸಿದ್ದರಾಮಯ್ಯ ಮಾಹಿತಿ ಪಡೆದುಕೊಂಡರು. ಈಗಾಗಲೇ ಗುಡ್ಡ ಕುಸಿತದಲ್ಲಿ ಸಾವನ್ನಪ್ಪಿರುವವರನ್ನು ರಕ್ಷಣಾ ಸಿಬ್ಬಂದಿ ಹೊರ ತೆಗೆದಿದ್ದು ಇನ್ನೂ ಹಲವರು ಸಿಲುಕಿರುವ ಶಂಕೆ ವ್ಯಕ್ತವಾಗಿದೆ.

ಗುಡ್ಡ ಕುಸಿತ ಸ್ಥಳಕ್ಕೆ ಸಿಎಂ ಸಿದ್ದರಾಮಯ್ಯ ಆಗಮಿಸಿದ್ದು ರಕ್ಷಣಾ ಕಾರ್ಯಚರಣೆಯನ್ನು ಸಿದ್ದರಾಮಯ್ಯನವರು ವೀಕ್ಷಿಸುತ್ತಿದ್ದು ಅವರ ಜೊತೆಗೆ ಸಚಿವರಾದ ಕೃಷ್ಣ ಭೈರೇಗೌಡ, ಆರ್.ವಿ ದೇಶಪಾಂಡೆ, ಶಾಸಕ ಮಂಕಾಳು ವೈದ್ಯ ಸಾತ್ ನೀಡಿದ್ದಾರೆ. ಸ್ಥಳಕ್ಕೆ ಈಗಾಗಲೇ ಹಲವು ಸಚಿವರು, ಶಾಸಕರುಗಳು ಭೇಟಿ ನೀಡಿದ್ದು, ಮಣ್ಣು ತೆರುವು ಕಾರ್ಯಾಚರಣೆ ಹಾಗೂ ಮಣ್ಣಿನಲ್ಲಿ ಸಿಲುಕಿರುವ ಇನ್ನೂ ಹಲವರ ಮೃತದೇಹಗಳನ್ನು ಹೊರ ತೆಗೆಯುವ ಕುರಿತು ರಕ್ಷಣಾ ಕಾರ್ಯಾಚರಣೆ ಮುಂದುವರಿದಿದೆ. ಈಗಾಗಲೇ ಬೆಳಗಾವಿಯಿಂದ ಮಿಲಿಟರಿ ಪಡೆ ಕೂಡ ಕಾರ್ಯಾಚರಣೆ ನಡೆಸಲು ಆಗಮಿಸಿದೆ ಎಂದು ತಿಳಿದುಬಂದಿದೆ.

## ಭೂಕುಸಿತದ ಸ್ಥಳಗಳ ಗುರುತು ಕಾರ್ಯ: ಸಚಿವ ಕೃಷ್ಣ ಬೈರೇಗೌಡ

• ಉದಯವಾಹಿನಿ, ಶಿರೂರು

ಉತ್ತರ ಕನ್ನಡ ಜಿಲ್ಲೆಯ ಕರಾವಳಿಯಲ್ಲಿ ಹಾದುಹೋದ ರಾಷ್ಟ್ರೀಯ ಹೆದ್ದಾರಿ ಅಂಚಿನ ಗುಡ್ಡಗಳ ಬಗ್ಗೆ ಜಿಯಾಲಾಜಿಕಲ್ ಸರ್ವೆ ಆಫ್ ಇಂಡಿಯಾದಿಂದ ಸರ್ವೆ ನಡೆಸಿ, ಸುರಕ್ಷತಾ ಕ್ರಮಕ್ಕೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರಕ್ಕೆ ವರದಿ ಸಲ್ಲಿಸಲಾಗುವುದು ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಹೇಳಿದರು. ಇಲ್ಲಿನ ಗುಡ್ಡ ಕುಸಿತದಿಂದ ಅವಘಡ ಸಂಭವಿಸಿದ ಸ್ಥಳಕ್ಕೆ ಭಾನುವಾರ ಭೇಟಿ ನೀಡಿದ ಅವರು ರಕ್ಷಣಾ ಕಾರ್ಯಾಚರಣೆ ಪರಿಶೀಲಿಸಿ, ಬಳಿಕ ಮಾಧ್ಯಮದವರೊಡನೆ ಮಾತನಾಡಿದರು. 'ಗುಡ್ಡ ಕುಸಿದ ಸ್ಥಳ ಮತ್ತು ಅಕ್ಕಪಕ್ಕದಲ್ಲಿರುವ ಗುಡ್ಡ ಕೆಸರು ರೂಪದಲ್ಲಿದೆ. ಉಳಿದ ಗುಡ್ಡವೂ ಕುಸಿಯುವ ಆತಂಕವನ್ನು ತಜ್ಞರು ವ್ಯಕ್ತಪಡಿಸಿದ್ದಾರೆ. ಸಾಕಷ್ಟು ಸುರಕ್ಷತಾ ಕ್ರಮದೊಂದಿಗೆ ಮಣ್ಣು ತೆರವು ಕಾರ್ಯ ನಡೆದಿದೆ' ಎಂದರು. 'ಸಂತ್ರಸ್ತ ಕುಟುಂಬಗಳಿಗೆ ಶಾಶ್ವತ ನೆಲೆ ಕಲ್ಪಿಸುವ ಬಗ್ಗೆ ಯೋಚಿಸಲಾಗುವುದು. ಈಗಾಗಲೇ ಮೃತಪಟ್ಟವರ ಕುಟುಂಬಕ್ಕೆ ಪರಿಹಾರ ನೀಡಲಾಗಿದೆ' ಎಂದರು.

ರಾಜ್ಯ ಸರ್ಕಾರದಿಂದ ಈಗಾಗಲೇ ಸಾಧ್ಯವಾದಷ್ಟು ಪರಿಹಾರ ನೀಡಲಾಗಿದೆ. ಇನ್ನೂ ಹೆಚ್ಚಿನ ಪರಿಹಾರ ಕೊಡಿಸಲು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ಪ್ರಯತ್ನಿಸಲಿ' ಎನ್ನುವ ಮೂಲಕ 'ರಾಜ್ಯ ಸರ್ಕಾರ ಸಂತ್ರಸ್ತರಿಗೆ ಇನ್ನಷ್ಟು ಪರಿಹಾರ ಒದಗಿಸಲಿ' ಎಂಬ ಆಗ್ರಹಕ್ಕೆ ತಿರುಗೇಟು ನೀಡಿದರು. ಅಧ್ಯಕ್ಷ ಆರ್.ವಿ.ದೇಶಪಾಂಡೆ, ಶಾಸಕ ಸತೀಶ ಸೈಲ್, ಇತರರು ಇದ್ದರು.

## ಶಿರೂರು ದುರಂತ ಸಿಎಂ ವಿಳಂಬ ಭೇಟಿ: ಬಿ.ವೈ.ವಿಜಯೇಂದ್ರ

• ಉದಯವಾಹಿನಿ, ಉಳುವರೆ

ಶಿರೂರಿನಲ್ಲಿ ಗುಡ್ಡ ಕುಸಿದು ದುರಂತ ಸಂಭವಿಸಿದ ಘಟನೆ ಗಂಭೀರವಾದದ್ದು. ಅಧಿವೇಶನ ಇದ್ದರೂ ಮುಖ್ಯಮಂತ್ರಿ ಘಟನೆ ನಡೆದ ತಕ್ಷಣವೇ ಬರಬೇಕಿತ್ತು ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದರು.

ಗುಡ್ಡ ಕುಸಿತ ದಿಂದ ಮನೆಗಳು ನಾಮಾವಶೇಷವಾದ ಉಳುವರೆ ಗ್ರಾಮಕ್ಕೆ ಭಾನುವಾರ ಭೇಟಿ ನೀಡಿದ ವೇಳೆ ಮಾಧ್ಯಮದವರ ಜತೆ ಅವರು ಮಾತನಾಡಿದರು. 'ಘಟನೆ ನಡೆದ ಆರು ದಿನದ ಬಳಿಕ ಸ್ಥಳಕ್ಕೆ ಮುಖ್ಯಮಂತ್ರಿ ಭೇಟಿ ನೀಡುತ್ತಿರುವುದರ ಬಗ್ಗೆ ಅವರನ್ನು ನೀವೇ ಪ್ರಶ್ನಿಸಿ' ಎಂದು ಮಾಧ್ಯಮವರಿಗೆ ಹೇಳಿದರು. 'ಮಣ್ಣು ತೆರವು, ಕಣ್ಮರೆಯಾದವರ ಪತ್ತೆ ಕಾರ್ಯ ವಿಳಂಬವಾಗಿದೆ ಎಂದರು.

## ಸಿಎಂ ನನ್ನ ವಿರುದ್ಧದ ಆರೋಪ ವಾಪಸ್ ಪಡೆಯದಿದ್ದರೆ ಧರಣಿ: ಕೋಟ

• ಉದಯವಾಹಿನಿ, ಉಡುಪಿ


ಕೊಳವೆಬಾವಿ ಯೋಜನೆಯಲ್ಲಿ ಭ್ರಷ್ಟಾಚಾರ ಎಸಗಿದ್ದೇನೆ ಎಂದು ಸಿ.ಎಂ ಸಿದ್ದರಾಮಯ್ಯ ಮಾಡಿರುವ ಆರೋಪವನ್ನು ವಾರದಲ್ಲಿ ಹಿಂಪಡೆಯದಿದ್ದರೆ ವಿಧಾನಸೌಧದ ಗಾಂಧಿಪ್ರತಿಮೆ ಮುಂದೆ ಧರಣಿ ಕೂರುತ್ತೇನೆ ಎಂದು ಸಂಸದ ಕೋಟ ಶ್ರೀನಿವಾಸ ಪೂಜಾರಿ ಹೇಳಿದರು. ಸುದ್ದಿಗಾರರ ಜೊತೆ ಮಾತನಾಡಿದ ಅವರು, ಕೊಳವೆಬಾವಿ ಯೋಜನೆಯಲ್ಲಿ, ಭೋವಿ ನಿಗಮದಲ್ಲಿ ನಾನು ಒಂದೇ ಒಂದು ರೂಪಾಯಿ ಹಗರಣ ನಡೆಸಿದ್ದರೂ ಅದರ ತನಿಖೆಯನ್ನು ಸಿಬಿಐಗೆ ನೀಡಲಿ' ಎಂದೂ ಸವಾಲು ಹಾಕಿದರು. ಸಿಐಡಿ ನಿಮ್ಮ ಕೈಯಲ್ಲಿದೆ. ನೀವು ಮುಖ್ಯಮಂತ್ರಿ ಆಗಿ ವರ್ಷವಾಯಿತು. ನಾನು ತಪ್ಪು ಮಾಡಿದ್ದರೆ ತನಿಖೆ ನಡೆಸುವ ಅಧಿಕಾರ ನಿಮಗೆ ಇತ್ತು. ಅದನ್ನು ಮಾಡಿಲ್ಲ. ಈಗ ವಾಲ್ಮೀಕಿ ನಿಗಮ ಹಗರಣದ ಆರೋಪ ಬಂದಾಗ ಅದನ್ನು ಬೇರೆಯವರ ತಲೆಗೆ ಕಟ್ಟಲು ಪ್ರಯತ್ನಿಸುತ್ತಿದ್ದೀರಿ. ಅದೇ ಕಾರಣಕ್ಕೆ ನನ್ನ ಹೆಸರೂ ಉಲ್ಲೇಖಿಸಿದ್ದೀರಿ' ಎಂದರು.

# ಈ ಜಾತಿಯವನಾದರೆ ಕಳ್ಳತನ ಮಾಡಬಹುದು ಎಂದು ಸಂವಿಧಾನದಲ್ಲಿದೆಯೇ?

• ಉದಯವಾಹಿನಿ, ಹಾಸನ

ಈ ಜಾತಿಯವನಾದರೆ ಕಳ್ಳತನ ಮಾಡಬಹುದು, ಈ ಜಾತಿಯವನಾದರೆ ಕಳ್ಳತನ ಮಾಡಬಾರದು ಎಂದು ಸಂವಿಧಾನದಲ್ಲಿ ಇದೆಯಾ ಎಂದು ವಿಧಾನಸಭೆ ಪ್ರತಿಪಕ್ಷದ ನಾಯಕ ಆರ್. ಅಶೋಕ ಪ್ರಶ್ನಿಸಿದರು. ಸಕಲೇಶಪುರ ತಾಲ್ಲೂಕಿನ ಕೊಲ್ಲಹಳ್ಳಿಯಲ್ಲಿ ಭಾನುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಸರ್ಕಾರ ಹಗರಣದಲ್ಲಿ ಸಿಲುಕಿದ್ದು, ಹೊರಬರಲು ಆಗುತ್ತಿಲ್ಲ.

ದಲಿತರ ಹಣವನ್ನು ದುರುಪಯೋಗ ಮಾಡುತ್ತಿದ್ದಾರೆ. ವಾಲ್ಮೀಕಿ ನಿಗಮ, ಮುಡಾ ಹಗರಣದಲ್ಲೂ ದಲಿತರ ಹಣವೇ ಲೂಟಿಯಾಗಿದೆ ಎಂದು ಆರೋಪಿಸಿದರು.ಹಿಂದುಳಿದ ವರ್ಗ ಗಳ ನಾಯಕ ಎಂಬ ಕಾರಣಕ್ಕೆ ಸಿದ್ದರಾಮಯ್ಯ ಅವರಿಗೆ ವಿಧಾನ ಸಭೆಯಲ್ಲಿ ಮಾತನಾಡಲು ಅವಕಾಶ ನೀಡುತ್ತಿಲ್ಲ ಎಂಬ ಸಚಿವ ಕೆ.ಎನ್. ರಾಜಣ್ಣ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು, ಸಿದ್ದರಾ ಮಯ್ಯ ಮಾತನಾಡುವಾಗ ಡೆತ್ ನೋಟ್ ಓದಿದರು. ಆದರೆ, ಸಚಿವರು, ಶಾಸಕರು, ವಾಲ್ಮೀಕಿ ನಿಗಮದ ಅಧ್ಯಕ್ಷರ ಹೆಸರನ್ನು ಬಿಟ್ಟು ಓದುತ್ತಾರೆ ಎಂದರು. ಜನರಿಗೆ ತಪ್ಪು ಮಾಹಿತಿ ಹೋಗಬಾರದು. ಹಗರಣದಲ್ಲಿ ಯಾರೂ ಭಾಗಿಯಾಗಿಲ್ಲ. ಅಧಿಕಾರಿಗಳೇ ಎಲ್ಲಾ ತಿಂದು ಹಾಕಿದ್ದಾರೆ ಎಂದು ಹೇಳಿದ್ದಾರೆ. 187 ಕೋಟಿ ಅಧಿಕಾರಿಗಳೇ ತಿನ್ನಲು ಆಗುತ್ತದೆಯೇ? ಅದರ ಹಿಂದೆ ದೊಡ್ಡ ತಿಮಿಂಗಲಗಳಿವೆ. ಅಧಿಕಾರಿಗಳು ಅಲ್ಲಿ, ಇಲ್ಲಿ ಬಿದ್ದಿದ್ದನ್ನು



> ಈ ಸರ್ಕಾರ ಕೋಮಾದಲ್ಲಿದ್ದು, ಇಂತಹ ಜಾತಿಯವರು ಲೂಟಿ ಹೊಡೆದರೆ, ಕಳ್ಳತನ ಮಾಡಿದರೆ, ಕ್ರಮ ತೆಗೆದುಕೊಳ್ಳುವಂತಿಲ್ಲ ಎಂಬ ಕಾನೂನು ಮಾಡಿಬಿಡಿ ಎಂದ ಅವರು, ಸರ್ಕಾರದಲ್ಲಿ ಹಣ ಇಲ್ಲದೇ ಇರುವುದರಿಂದ ಮಳೆ ಹಾನಿ ಪರಿಹಾರ ನೀಡಲು ಆಗುತ್ತಿಲ್ಲ ಎಂದು ದೂರಿದರು. ಕೇಂದ್ರ ಸಚಿವರು ರಾಜ್ಯಕ್ಕೆ ಬಂದರೂ ಏನೂ ಪ್ರಯೋಜನವಾಗಲ್ಲ ಎಂಬ ಡಿ.ಕೆ. ಶಿವಕುಮಾರ್ ಹೇಳಿಕೆಗೆ ತಿರುಗೇಟು ನೀಡಿದ ಅವರು, ಅವರು ಬಂದರೆ, ಪ್ರಯೋಜನವಾಗಲ್ಲ ಎಂದರೆ, ನೀವಾದರೂ ಮನೆ ಬಿಟ್ಟು ಬನ್ನಿ
>
> – **ಆರ್. ಅಶೋಕ**, ವಿಧಾನಸಭೆ ಪ್ರತಿಪಕ್ಷದ ನಾಯಕ

ತಿಂದಿದ್ದಾರೆ ಎಂದರು.ಸರ್ಕಾರ ಪಾಪರ್ ಆಗಿದೆ. ಅವರ ಬಳಿ ದುಡ್ಡಿಲ್ಲ. ಅಂದಾಜು ವೆಚ್ಚ ತಯಾರಿಸದೇ ಗ್ಯಾರಂಟಿ ಯೋಜನೆ ತಂದಿದ್ದಾರೆ. ಅದಕ್ಕೆ ಈಗ ದಲಿತರ ಹಣ ಹುಡುಕುತ್ತಿದ್ದಾರೆ. ಒಕ್ಕಲಿಗರು, ಲಿಂಗಾಯತರು, ಬ್ರಾಹ್ಮಣರ ನಿಗಮಗಳಿದ್ದು, ಅಲ್ಲಿನ ಹಣವನ್ನೂ ಬಳಸಿಕೊಳ್ಳಿ ಎಂದು ಟೀಕಿಸಿದರು. ಸದ್ಯಕ್ಕೆ ಕೊಡುತ್ತಿರುವ ಪರಿಹಾರ ಕೇಂದ್ರ ಸರ್ಕಾರದ್ದು. ಕುಮಾರಸ್ವಾಮಿ ಅವರಿಗೆ ರಾಜ್ಯಕ್ಕೆ ಬರಲು, ಪರಿಶೀಲನೆ ಮಾಡಲು ಹಕ್ಕಿದೆ. ಎಂದರು.

# ಮುಡಾ ಆರೋಪ ಮತ್ತೆ ಕಲಾಪ

**89.60 ಕೋಟಿ ರೂ. ವರ್ಗಾವಣೆ**

- ಇಂದು ಸದನದಲ್ಲಿ ಮುಡಾ ಪ್ರತಿಧ್ವನಿ,ರಾಜಕೀಯ ದ್ವೇಷಕ್ಕಾಗಿ ಸಿಎಂ ಅಧಿಕಾರ ದುರ್ಬಳಕೆ ಮಾಡಿಕೊಳ್ಳಬಾರದು: ಬೊಮ್ಮಾಯಿ
- ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ನೇರ ಪಾತ್ರ: ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಆರೋಪ







• ಉದಯವಾಹಿನಿ, ಬೆಂಗಳೂರು

ಕಳೆದ ವಾರವಿಡೀ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಹಣ ಅಕ್ರಮ ವರ್ಗಾವಣೆ ಪ್ರಕರಣ ವಿಧಾನಸಭೆಯ ಕಲಾಪ ಆಪೋಶನ ತೆಗೆದುಕೊಂಡಿದ್ದು, ಇಂದು ನಡೆಯುವ 2ನೇ ವಾರದ ಕಲಾಪದಲ್ಲಿ ಮುಡಾ ಹಂಚಿಕೆ ಹಗರಣವು ಸೇರ್ಪಡೆಯಾಗುವ ಸಾಧ್ಯತೆ ಇದೆ. ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಲ್ಲಿ ಅಕ್ರಮವಾಗಿ 89.60 ಕೋಟಿ ರೂ. ವರ್ಗಾವಣೆಯಲ್ಲಿ ಎಸ್‌ಐಟಿ, ಸಿಬಿಐ, ಜಾರಿನಿರ್ದೇಶನಾಲಯಗಳು ತನಿಖೆ ನಡೆಸುತ್ತಿವೆ. ಹಗರಣಕ್ಕೆ ಸಂಬಂಧಪಟ್ಟಂತೆ ಮಾಜಿ ಸಚಿವ ನಾಗೇಂದ್ರ ಆದಿಯಾಗಿ ಎಲ್ಲಾ ಪ್ರಮುಖ ಆರೋಪಿಗಳ ಬಂಧನವಾಗಿದೆ.

1. ಮುಡಾ ಹಗರಣ ಸಿಎಂ ಸಿದ್ದರಾಮಯ್ಯ ವಿರುದ್ಧವೂ ವಾಗ್ದಾಳಿ ನಡೆಸಿದ ಕೇಂದ್ರ ಸಚಿವರು.
2. ಸತ್ತವನು ಸ್ವರ್ಗದಿಂದ ಬಂದು ಡಿನೋಟಿಫಿಕೇಷನ್ ಮಾಡಿ ಎಂದು ಅರ್ಜಿ ಹಾಕಿದನಾ? ಎಂದು ಸಿಎಂ ಪ್ರಶ್ನೆ.
3. ದೇವೇಗೌಡರನ್ನು ಪ್ರಧಾನಿ, ಕುಮಾರಸ್ವಾಮಿಯನ್ನು ಸಿಎಂ ಮಾಡಿದಿವಿ ಎನ್ನುತ್ತಾರೆ; ಆದರೆ, ನಮ್ಮಿಬ್ಬರ ಸರಕಾರಗಳನ್ನು ತೆಗೆದವರು ಯಾರು? ಎಂದು ಪ್ರಶ್ನಿಸಿದ ಎಚ್‌ಡಿಕೆ.

ವಿರೋಧ ಪಕ್ಷಗಳು ಮುಖ್ಯಮಂತ್ರಿ ಸಿದ್ದರಾಮಯ್ಯನವರು ರಾಜೀನಾಮೆ ನೀಡಬೇಕೆಂದು ಒತ್ತಾಯಿಸಿ ವಿಧಾನಸಭೆಯಲ್ಲಿ 2 ದಿನಗಳ ಕಾಲ ಧರಣಿ ನಡೆಸಿದೆ.

ಒಂದು ವಾರದ ನಡೆದ ಚರ್ಚೆಗೆ ಸಿದ್ದರಾಮಯ್ಯನವರು ಲಿಖಿತವಾಗಿ ಉತ್ತರ ನೀಡಿ,ಯೂನಿಯನ್ ಬ್ಯಾಂಕ್ ರಾಷ್ಟ್ರೀಕೃತವಾಗಿದ್ದು, ಅಲ್ಲಿ ಹಣದ ಕಳ್ಳತನ ನಡೆದಿದೆ. ಇದಕ್ಕೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೊಣೆ ಹೊರುತ್ತಾರೆಯೇ ಎಂದು ತಿರುಗೇಟು ನೀಡುವ ಮೂಲಕ ವಿರೋಧ ಪಕ್ಷಗಳಿಗೆ ಸಡ್ಡು ಹೊಡೆದಿದ್ದಾರೆ.

ಜೊತೆಗೆ ಬಿಜೆಪಿ ಅವಧಿಯಲ್ಲಿ ನಡೆದ 21 ಹಗರಣಗಳ ಪಟ್ಟಿ ಮುಂದಿಟ್ಟು ತಿರುಗೇಟು ನೀಡಿದ್ದಾರೆ. ಬಹುತೇಕ ಈ ವಿಚಾರ ಮುಗಿದ ಅಧ್ಯಾಯದಂತಾಗಿದೆ. ವಿರೋಧ ಪಕ್ಷಗಳು ಸೋಮವಾರ ಕಲಾಪದಲ್ಲಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದ ವಿಚಾರವನ್ನೇ ಮುಂದುವರೆಸುತ್ತಾರೆಯೇ ಅಥವಾ ಹೊಸ ವಿಚಾರಗಳತ್ತ ಗಮನಹರಿಸುತ್ತಾರೆಯೇ ಎಂಬುದು ಕಾದು ನೋಡಬೇಕಿದೆ.

**ಇಂದು 2ನೇ ವಾರದ ಕಲಾಪ**

ಮೂಲಗಳ ಪ್ರಕಾರ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ಮುಡಾ ಹಗರಣದ ಚರ್ಚೆಗೆ ಆಸಕ್ತಿ ವಹಿಸಿವೆ. ವಿರೋಧ ಪಕ್ಷಗಳು ನಿಲುವಳಿ ಸೂಚನೆಯಡಿ ಈ ವಿಚಾರವನ್ನು ಪ್ರಸ್ತಾಪಿಸಿದರೆ ಈಗಾಗಲೇ ನ್ಯಾಯಾಂಗ ತನಿಖೆಗೆ ಆದೇಶಿಸಲಾಗಿರುವುದರಿಂದ ಚರ್ಚೆಗೆ ಅವಕಾಶ ಇಲ್ಲ ಎಂದು ನಿಲುವಳಿಯನ್ನು ತಳ್ಳಿಹಾಕುವ ಸಾಧ್ಯತೆಗಳಿವೆ. ಸಾರ್ವಜನಿಕ ಮಹತ್ವದ ವಿಚಾರವನ್ನಾಗಿ ಚರ್ಚೆಗೆ ಅವಕಾಶ ನೀಡುವ ಪರಿಸ್ಥಿತಿಗಳು ಕ್ಷೀಣವಾಗಿವೆ. ವಿಪಕ್ಷಗಳು ಕಳೆದ ವಾರ ಪೂರ್ತಿ ನಿಗಮದ ಹಗರಣ ಬಿಟ್ಟು ಬೇರೆ ಯಾವುದೇ ಗಂಭೀರ ವಿಚಾರಗಳನ್ನು ಪ್ರಸ್ತಾಪಿಸಿಲ್ಲ. ಮುಡಾ ಹಗರಣವೊಂದು ಮುನ್ನಲೆಗೆ ಬಂದರೆ ಮಿಕ್ಕಾ ಎಲ್ಲಾ ವಿಚಾರಗಳು ನೇಪಥ್ಯಕ್ಕೆ ಸರಿಯುವ ಆತಂಕವಿದೆ. ರಾಜ್ಯದಲ್ಲಿ ವ್ಯಾಪಕ ಮಳೆಯಿಂದಾಗಿ ನೆರೆ ಪರಿಸ್ಥಿತಿ ಉಂಟಾಗಿದೆ. ಸುಮಾರು 1 ಸಾವಿರಕ್ಕೂ ಹೆಚ್ಚು ಕಡೆ ಭೂಕುಸಿತಗಳಾಗಿವೆ. ತೋಟಗಾರಿಕೆ ಬೆಳೆಗಳು ಹಾನಿಗೊಳಗಾಗಿವೆ. ರಸ್ತೆ, ಸೇತುವೆ, ವಿದ್ಯುತ್ ಕಂಬ, ಶಾಲಾ ಕಟ್ಟಡಗಳು ಹಾನಿಗೊಳಗಾಗಿವೆ. ಹತ್ತಕ್ಕೂ ಹೆಚ್ಚು ಜೀವಹಾನಿಯಾಗಿದೆ. ಜಾನುವಾರುಗಳ ಹಾನಿಯ ಬಗ್ಗೆ ಸಮೀಕ್ಷೆ ನಡೆಯುತ್ತಿವೆ. ಜನರಸಾಮಾನ್ಯರ ಮನೆ ಕುಸಿದು ಬದುಕು ಬೀದಿಗೆ ಬಿದ್ದಿದೆ.

ಪರಿಸ್ಥಿತಿ ಗಂಭೀರವಾಗಿದ್ದರೂ ವಿಧಾನಸಭೆಯಲ್ಲಿ ಈ ಬಗ್ಗೆ ಹೆಚ್ಚಿನ ಚರ್ಚೆಗಳಾಗಿಲ್ಲ. ಉತ್ತರಕನ್ನಡ ಜಿಲ್ಲೆ ಶಿರೂರಿನಲ್ಲಿ ಭೂಕುಸಿತವಾಗಿ ಹೆದ್ದಾರಿ ಬಂದಾಗಿದ್ದು, ಏಳೆಂಟು ಮಂದಿ ಜೀವ ಹಾನಿಯಾಗಿದೆ.

ಈ ವಿಚಾರವನ್ನು ಆಡಳಿತ ಪಕ್ಷದ ಶಾಸಕರೇ ಪ್ರಸ್ತಾಪಿಸಿದ್ದರು. ವಿರೋಧ ಪಕ್ಷಗಳು ಜನಸಾಮಾನ್ಯರನ್ನು ಕಾಡುತ್ತಿರುವ ಗಂಭೀರ ವಿಚಾರಗಳ ಬಗ್ಗೆ ಚಕಾರ ಎತ್ತದೆ ರಾಜಕೀಯ ಕಾರಣಕ್ಕಾಗಿ ವಾಲ್ಮೀಕಿ ನಿಗಮ, ಮುಡಾದಂತಹ ವಿಷಯಗಳನ್ನು ಪ್ರಸ್ತಾಪಿಸುತ್ತಿದ್ದಾರೆ ಎಂದು ಆಡಳಿತ ಪಕ್ಷ ತಿರುಗೇಟು ನೀಡುತ್ತಿದೆ.

ಒಟ್ಟಿನಲ್ಲಿ ಇಂದು ನಡೆಯುವ ವಿಧಾನಮಂಡಲ ಕಲಾಪ ಮತ್ತಷ್ಟು ಕಾವೇರುವ ಸಾಧ್ಯತೆ ಇದೆ. ಗಲಾಟೆ, ಗದ್ದಲದ ನಡುವೆ ಕೆಲ ಮಸೂದೆಗಳು ಚರ್ಚೆಯಾಗದೆ ಅಂಗೀಕಾರಗೊಳ್ಳುವ ದುಗುಡವೂ ಕಾಡುತ್ತಿದೆ.

### ಸಿಎಂ ವಿರುದ್ಧ ಲೋಕಾಯುಕ್ತಕ್ಕೆ ಬಿಜೆಪಿ ದೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜಕೀಯ ಪ್ರಭಾವ ಬಳಸಿ ಪತ್ನಿ ಹೆಸರಿನಲ್ಲಿ ಬದಲಿ ನಿವೇಶನಗಳನ್ನು ಪಡೆದು, ಸರಕಾರಕ್ಕೆ 40 ಕೋಟಿ ರೂ.ಗಿಂತ ಹೆಚ್ಚು ನಷ್ಟ ಉಂಟು ಮಾಡಿದ್ದಾರೆ ಎಂದು ಬಿಬಿಎಂಪಿ ಆಡಳಿತ ಪಕ್ಷದ ಮಾಜಿ ನಾಯಕ ಎನ್. ಆರ್. ರಮೇಶ್ ಆರೋಪಿಸಿದರು. ಈ ಕುರಿತು ಲೋಕಾಯುಕ್ತಕ್ಕೆ ದೂರು ನೀಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಮುಡಾ ದೇವನೂರು 3ನೇ ಹಂತದ ಬಡಾವಣೆ ನಿರ್ಮಾಣಕ್ಕಾಗಿ ಕೆಸರೆ ಗ್ರಾಮದ ಸರ್ವೇ ನಂ. 464ರಲ್ಲಿನ 3.16 ಎಕರೆ ಮತ್ತು ಸುತ್ತಮುತ್ತಲ ಗ್ರಾಮಗಳಲ್ಲಿನ ನೂರಾರು ಎಕರೆಯನ್ನು 1997ರಲ್ಲಿ ಸ್ವಾಧೀನಪಡಿಸಿಕೊಂಡಿತ್ತು. ಈ 3.16 ಎಕರೆ ಮಾಲೀಕ ನಿಂಗ ಅವರಿಗೆ 3.24 ಲಕ್ಷ ರೂ. ಪರಿಹಾರ ಕೂಡ ಪಾವತಿಸಲಾಗಿತ್ತು. ಬಳಿಕ 1998ರ ಮೇ 18ರಂದು ನಗರಾಭಿವೃದ್ಧಿ ಇಲಾಖೆಯು 3.16 ಎಕರೆಯನ್ನು ಭೂಸ್ವಾಧೀನ ಪ್ರಕ್ರಿಯೆಯಿಂದ ಕೈಬಿಟ್ಟು ಆದೇಶ ಹೊರಡಿಸಿತು. ಈ ವೇಳೆ ಸಿದ್ದರಾಮಯ್ಯ ಅವರ ಆಪ್ತ ಬಸವೇಗೌಡ ಮುಡಾ ಅಧ್ಯಕ್ಷರಾಗಿದ್ದರು' ಎಂದು ಹೇಳಿದರು.

### ಎಲ್ಲಾ ಹಗರಣ ಹೊರ ಬರುತ್ತಿವೆ

ಇವತ್ತು ವಾಲ್ಮೀಕಿ ನಿಗಮ ಒಂದೇ ಅಲ್ಲ ಇಲಾಖೆಗಳಲ್ಲಿ ಹಗರಣ ಹೊರ ಬರುತ್ತಿವೆ ಕೊಮುಲ್ ನಿಂದ ಹಿಡಿದು ಪ್ರವಾಸೋದ್ಯಮ ಇಲಾಖೆ ಹಗರಣ ಎಲ್ಲವೂ ಹೊರ ಬರುತ್ತಿವೆ. ಕಾಂಗ್ರೇಸ್ ಅಂದರೆ ಭ್ರಷ್ಟಾಚಾರ ಅನ್ನುವಂತಾಗಿದೆ. ಸ್ವಾತಂತ್ರ್ಯಾ ನಂತರ ಭ್ರಷ್ಟಾಚಾರ ಹುಟ್ಟು ಹಾಕಿದ್ದೆ ಕಾಂಗ್ರೇಸ್. ಅವರು ಯಾವುದೇ ತನಿಖೆ ನಡೆಸಲಿ ನಾವು ಎದುರಿಸುತ್ತೇವೆ. ನಾವು ಅವರ ರೀತಿ ಇಡಿ ಯಾಕೆ, ಸಿಬಿಐ ಯಾಕೆ ಬಂತು ಅಂತ ಕೇಳುವುದಿಲ್ಲ. ನಾವು ಅವರ ಹಾಗೆ ಅಂಜುಬುರುಕರಲ್ಲ. ಪೊಲಿಸ್ ಇಲಾಖೆಯನ್ನು ತಮ್ಮ ವಿರುದ್ದ ಬಂದಿರುವ ಆರೋಪದಿಂದ ರಕ್ಷಣೆ ಪಡೆಯಲು ದುರ್ಬಳಕೆ ಮಾಡಿಕೊಂಡರೆ ಆ ಹಗರಣವೂ ಶೀಘ್ರವೇ ಹೊರ ಬರಲಿದೆ ಎಂದು ಹೇಳಿದರು. ಇಡಿ ತನಿಖೆ ಬಗ್ಗೆ ಇವರಿಗೆ ಯಾಕೆ ಭಯ. ಈಗಾಗಲೇ ಇವರ ವಿರುದ್ದ ಸುಮಾರು 40 ಕ್ಕಿಂತ ಹೆಚ್ಚು ಪ್ರಕರಣಗಳು ಲೋಕಾಯುಕ್ತದಲ್ಲಿ ತನಿಖೆ ನಡೆಯುತ್ತಿದೆ. ಬಿಬಿಎಂಪಿಯಲ್ಲಿ ಗುತ್ತಿಗೆದಾರಿಗೆ ಶೇ.68% ರಷ್ಟು ಹೆಚ್ಚಿಗೆ ನೀಡಿದ್ದಾರೆ. ಇವೆಲ್ಲವೂ ತನಿಖೆ ನಡೆಯುತ್ತಿದೆ. ಮುಖ್ಯಮಂತ್ರಿ ಯವರು ಶುಕ್ರವಾರ ಅಧಿವೇಶನ ಕೊನೆಗಳಿಗೆಯಲ್ಲಿ ಆರೋಪ ಮಾಡಿ ವಿರೋಧ ಪಕ್ಷದವರು ಬಾಯಿಮುಚ್ಚಿ ಕೊಂಡಿದ್ದಾರೆ ಎನ್ನುತ್ತಾರೆ. ನಾವು ಬಾಯಿ ಮುಚ್ಚಿಕೊಂಡು ಕುಳಿತಿಲ್ಲ. ಸದನದಲ್ಲಿ ಪ್ರತಿಪಕ್ಷದ ಶಾಸಕರನ್ನು ಟಾರ್ಗೆಟ್ ಮಾಡಿದರೂ ಯಾರೂ ಬಗ್ಗುವುದಿಲ್ಲ. ಅವರ ಮುಖಕ್ಕೆ ಮಸಿ ಬಳಿದಿದೆ.

# ಮನೆ ಕಳೆದುಕೊಂಡವರ ಜೊತೆ ನಮ್ಮ ಸರ್ಕಾರ ನಿಲ್ಲುತ್ತೆ

## ಮಳೆಯಿಂದ ಮನೆಗಳು, ಬೆಳೆ ಸಂಪೂರ್ಣವಾಗಿ ನಾಶ ಸ್ಥಳಕ್ಕೆ ಸಚಿವ ಭೇಟಿ

• ಉದಯವಾಹಿನಿ, ಶಿವಮೊಗ್ಗ

ಶಿವಮೊಗ್ಗದಲ್ಲಿ ಅತಿಯಾದ ಮಳೆಯಿಂದ ಹಲವು ಮನೆಗಳು, ಬೆಳೆ ಸಂಪೂರ್ಣವಾಗಿ ನಾಶವಾಗಿದ್ದು ಭಾನುವಾರ ಶಿಕ್ಷಣ ಸಚಿವ ಮಧು ಬಂಗಾರಪ್ಪ ಸ್ಥಳಕ್ಕೆ ಭೇಟಿ ನೀಡಿ ಮನೆ ಕಳೆದುಕೊಂಡವರ ಜೊತೆಗೆ ನಮ್ಮ ಸರ್ಕಾರ ನಿಲ್ಲುತ್ತದೆ ಅವರಿಗೆ ಮನೆ ಕಟ್ಟಿಸಿಕೊಡುತ್ತೇವೆ ಎಂದು ಭರವಸೆ ನೀಡಿದರು.



ಭಾನುವಾರ ಶಿವಮೊಗ್ಗ ಜಿಲ್ಲೆಗೆ ಭೇಟಿ ನೀಡಿದ ಅವರು, ಮಳೆಯಿಂದ ಮನೆ ಗೋಡೆ ಕುಸಿದು ಮೃತಪಟ್ಟವರ ಕುಟುಂಬಸ್ಥರಿಗೆ ಸಾಂತ್ವನ ಹೇಳಿ ಮೃತಪಟ್ಟ ಇಬ್ಬರ ಕುಟುಂಬಗಳಿಗೆ 5 ಲಕ್ಷ ಪರಿಹಾರ ನೀಡುತ್ತೇವೆ ಎಂದು ತಿಳಿಸಿದರು. ಮಳೆಯಿಂದ ಮನೆಗಳಿಗೆ ಹಾನಿಯಾಗಿದ್ದು ಅಪಾರ ಪ್ರಮಾಣದ ಬೆಳೆ ನಾಶವಾಗಿದೆ. ಮಳೆಯಿಂದ ಹಾನಿಯಾದರೆ ತಕ್ಷಣ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ. ಜಿಲ್ಲಾಧಿಕಾರಿ ಜಿಲ್ಲಾ ಪಂಚಾಯತ್ ಸಿ ಇ ಓ ತಹಶೀಲ್ದಾರ್ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಮನೆ ಸಂಪೂರ್ಣ ಕುಸಿದಿದ್ದರೆ ಕಟ್ಟಿಸುವ ಕೆಲಸ ಮಾಡುತ್ತೇವೆ.

ಸರ್ಕಾರದಿಂದ ಈಗ ಒಂದು ಲಕ್ಷ 20,000 ಹಣ ನೀಡುತ್ತೇವೆ ಮನೆ ಕಳೆದುಕೊಂಡವರ ಜೊತೆ ನಮ್ಮ ಸರ್ಕಾರ ನಿಲ್ಲುತ್ತದೆ. ಮಳೆಯಿಂದಾಗಿ ಗುಡ್ಡ ಕುಸಿತ ಪ್ರಕರಣಗಳು ಹೆಚ್ಚಾಗುತ್ತಿವೆ. ಸಂತ್ರಸ್ತರಿಗಾಗಿ ಈಗಾಗಲೇ ಎರಡು ಕಾಳಜಿ ಕೇಂದ್ರ ತೆರೆಯಲಾಗಿದೆ. ಶಿವಮೊಗ್ಗ ಜಿಲ್ಲೆಯಲ್ಲಿ 150 ಶಾಲಾ ಕಟ್ಟಡ ದುರಸ್ತಿ ಮಾಡಬೇಕಿದೆ ಎಂದು ಮಧು ಬಂಗಾರಪ್ಪ ತಿಳಿಸಿದರು.

# ನಾಲ್ಕು ಕ್ಷೇತ್ರಗಳು ನನ್ನ ಹೃದಯದಲ್ಲಿವೆ




• ಉದಯವಾಹಿನಿ, ಬೆಂಗಳೂರು

ಬಿನ್ನಿಪೇಟೆ, ವಿಜಯನಗರ, ಗೋವಿಂದರಾಜನಗರ, ತುಮಕೂರು ಕ್ಷೇತ್ರಗಳು ನನ್ನ ಹೃದಯದಲ್ಲಿವೆ ಎಂದು ಕೇಂದ್ರ ಜಲಶಕ್ತಿ ಮತ್ತು ರೈಲ್ವೆ ರಾಜ್ಯ ಖಾತೆ ಸಚಿವ ವಿ.ಸೋಮಣ್ಣ ಹೇಳಿದ್ದಾರೆ. ವಿ.ಸೋಮಣ್ಣ ಅವರ ಜನ್ಮದಿನ ನಿಮಿತ್ತ ಮಂಡಲ ಬಿಜೆಪಿ, ಗೋವಿಂದರಾಜನಗರ ಕ್ಷೇತ್ರದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದರು.

ಶ್ರೀ ಶಿವಕುಮಾರ ಸ್ವಾಮೀಜಿ, ಬಾಲಗಂಗಾಧರನಾಥ ಸ್ವಾಮೀಜಿ ಅವರ ಆಶೀರ್ವಾದ, ಒಡನಾಟದಿಂದಾಗಿ 45 ವರ್ಷಗಳಿಂದ ಜನಸೇವೆ ಮಾಡಲು ಸಾಧ್ಯವಾಗಿದೆ. ತುಮಕೂರು ಲೋಕಸಭಾ ಕ್ಷೇತ್ರದಲ್ಲಿ ಕಡಿಮೆ ಅವಧಿಯಲ್ಲಿ ಚುನಾವಣೆ ಪ್ರಚಾರ ಮಾಡಲು ಅವಕಾಶ ಸಿಕ್ಕಿತ್ತು. ಆದರೆ, ಅಲ್ಲಿನ ಜನರ ಪ್ರೀತಿ ವಿಶ್ವಾಸದಿಂದ 1.75 ಲಕ್ಷ ಮತಗಳ ಅಂತರದಿಂದ ಜಯಗಳಿಸಿದೆ. ಜನರ ಪ್ರೀತಿಯಿಂದ ಇದೆಲ್ಲ ಸಾಧ್ಯವಾಯಿತು. ಬೆಂಗಳೂರು ನಗರ ಸಮೀಪದಲ್ಲಿ ತುಮಕೂರು ಕ್ಷೇತ್ರವಿದೆ. ಇದು ಪುಣ್ಯಭೂಮಿ ಕ್ಷೇತ್ರವಾಗಿದೆ. ಹಾಗಾಗಿ, ಇದನ್ನು ಮಾದರಿ ಕ್ಷೇತ್ರವಾಗಿ ಮಾಡುತ್ತೇನೆ. ಸೋಮಣ್ಣ ಎಂದರೆ ಸಾಮಾನ್ಯ ಕಾರ್ಯಕರ್ತ. ನನ್ನನು ಗುರುತಿಸಿ ಬೆಳಸಿದ ನಾಡಿನ ಜನರಿಗೆ, ಪಕ್ಷಕ್ಕೆ, ಮುಖಂಡರಿಗೆ ಹಾಗೂ ಕಾರ್ಯಕರ್ತರಿಗೆ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು.

ಆದಿಚುಂಚಗಿರಿ ಮಠಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದ ಕೇಂದ್ರ ಸಚಿವರು, ಬಳಿಕ ಶ್ರೀ ಸೌಮ್ಯನಾಥ ಸ್ವಾಮೀಜಿ ಅವರನ್ನು ಭೇಟಿ ಮಾಡಿ ಆಶೀರ್ವಾದ ಪಡೆದರು. ಉಚಿತ ಆರೋಗ್ಯ ಶಿಬಿರದಲ್ಲಿ ನೂರಾರು ಮಂದಿ ಭಾಗಿಯಾಗಿದ್ದರು. ಸರ್ಕಾರಿ ಆಸ್ಪತ್ರೆ ರೋಗಿಗಳಿಗೆ ಹಣ್ಣು, ಹಂಪಲು ವಿತರಿಸಲಾಯಿತು.


ಶಾಸಕ ಸಿ.ಕೆ. ರಾಮಮೂರ್ತಿ, ಯುವ ಮುಖಂಡ ಡಾ. ಅರುಣ್ ಸೋಮಣ್ಣ, ಆಡಳಿತ ಪಕ್ಷದ ಮಾಜಿ ನಾಯಕ ರವೀಂದ್ರ, ಮಂಡಲ ಅಧ್ಯ ವಿಶ್ವನಾಥಗೌಡ, ಪಾಲಿಕೆ ಮಾಜಿ ಸದಸ್ಯರಾದ ಮೋಹನ್‌ಕುಮಾರ್, ಬಾಬಿ ವೆಂಕಟೇಶ್, ದಾಸೇಗೌಡ, ಸಿ.ಎಂ. ರಾಜಪ್ಪ, ಕನಕಪುರ ರಾಜಣ್ಣ, ಕ್ರಾಂತಿ ರಾಜು, ಬಿಜೆಪಿ ಮುಖಂಡರಾದ ವೇಣುಗೌಡ, ಶ್ರೀಧರ್, ದೊಡ್ಡವಿರಯ್ಯ, ರಮೇಶ್, ಮಹಿಳಾ ಅಧ್ಯೆ ರತ್ನಮ್ಮ ಮತ್ತಿತರರಿದ್ದರು.ರಾಜ್ಯದಲ್ಲಿ ಬಾಕಿ ಉಳಿದಿರುವ ರೈಲ್ವೆ ಯೋಜನೆಗಳ ಕಾಮಗಾರಿ ಪೂರ್ಣಗೊಳಿಸಲು ಮತ್ತು ಜಲಶಕ್ತಿ ಯೋಜನೆಗಳಿಗೆ ಹೊಸ ಕಾಯಕಲ್ಪ ನೀಡಲು ಕ್ರಮ ತೆಗೆದುಕೊಂಡಿದ್ದೇನೆ. ನರೇಂದ್ರ ಮೋದಿ ನೇತೃತ್ವದಲ್ಲಿ ದೇಶ 10 ವರ್ಷದಲ್ಲೇ ವಿಶ್ವದ ಬಲಿಷ್ಠ ರಾಷ್ಟ್ರವಾಗಿ ಹೊರ ಹೊಮ್ಮಿದೆ.

# ರಾಜೀನಾಮೆ ಕೇಳುವ ನೈತಿಕ ಹಕ್ಕು ಬಿಜೆಪಿಗಿಲ್ಲ ಬೇಕಿದ್ದರೆ ಉಚ್ಚಾಟಿಸಲಿ

## ನಾವು ಯಾವ ಪಕ್ಷದೊಂದಿಗೆ ಗುರುತಿಸಿಕೊಂಡಿಲ್ಲ ಸ್ವಪಕ್ಷೀಯರ ವಿರುದ್ಧವೇ ಗುಡುಗಿದ ಶಾಸಕ ಹೆಬ್ಬಾರ್

• ಉದಯವಾಹಿನಿ, ಉತ್ತರಕನ್ನಡ

ನಾವು ಯಾವ ಪಕ್ಷದೊಂದಿಗೆ ಗುರುತಿಸಿಕೊಂಡಿಲ್ಲ. ನಮ್ಮದು ಕರ್ನಾಟಕ ಶಾಸಕಾಂಗ ಪಕ್ಷ. ನಮ್ಮ ರಾಜೀನಾಮೆ ಕೇಳುವ ಹಕ್ಕು ಬಿಜೆಪಿ ಅವರಿಗಿಲ್ಲ. ಬೇಕಿದ್ದರೆ ಅವರು ನನ್ನ ಹಾಗೂ ಸೋಮಶೇಖರ್ ಅವರನ್ನು ಉಚ್ಚಾಟಿಸಲಿ ಎಂದು ಸ್ವಪಕ್ಷೀಯರ ವಿರುದ್ಧವೇ ಶಾಸಕ ಶಿವರಾಮ್ ಹೆಬ್ಬಾರ್ ಗುಡುಗಿದ್ದಾರೆ. ಶಿರಸಿಯಲ್ಲಿ ಈ ಕುರಿತು ಮಾತನಾಡಿ ಹೆಬ್ಬಾರ್, ನಾನು ಈ ಹಿಂದೆ ರಾಜೀನಾಮೆ ಕೊಟ್ಟೇ ಚುನಾವಣೆ ಎದುರಿಸಿ ಬಂದವನು. ರಾಜೀನಾಮೆ ಬಗ್ಗೆ ಬೇರೆಯವರ ಉಪದೇಶ ಬೇಕಿಲ್ಲ. ಆಗ ನಾನು ರಾಜೀನಾಮೆ ಕೊಟ್ಟು ಬಂದಾಗ ಕಾಂಗ್ರೇಸ್‌ಗೆ ಅನ್ಯಾಯ ಮಾಡಿದೆ ಎಂದು ಬಿಜೆಪಿ ಅವರಿಗೆ ಅನಿಸಲಿಲ್ಲವೇ. ಅಧಿಕಾರಕ್ಕೆ ಬರೋವಾಗ ಏನು ಅನ್ನಿಸದಿದ್ದಾಗ ಈಗ ಯಾಕೆ ಅನ್ನುತ್ತೆ ಎಂದು ಪ್ರಶ್ನಿಸಿದ್ದಾರೆ. ಅವಶ್ಯಕತೆ ಬಿದ್ದಾಗ ಮತ್ತೆ ರಾಜೀನಾಮೆ ಕೊಡುತ್ತೇನೆ. ಅದಕ್ಕೂ ನಾನು ಹೆದರಲ್ಲ. ನನ್ನ ಕ್ಷೇತ್ರದ ಜನರ ಮೇಲೆ ವಿಶ್ವಾಸವಿದೆ. ಆದರೆ ನಾವೇನು ಉಚ್ಚಾಟನೆ ಮಾಡೋದು ಬೇಡ ಅಂತಾ ಅರ್ಜಿ ಕೊಟ್ಟಿದ್ದೀವಾ. ನಮ್ಮ ನಡುವಳಿಕೆ ಅವರಿಗೆ ಸಮಾಧಾನ ಇಲ್ಲ ಎಂದರೆ ಅವರೇ ತೀರ್ಮಾನ ಮಾಡುತ್ತಾರೆ. ಇಂಥದ್ದೇ ನಿರ್ಣಯ ತೆಗೆದುಕೊಳ್ಳಿ ಅನ್ನೋಕೆ ನಾನ್ಯಾರು. ಸರ್ಕಾರ ಬರಲು ಕಾರಣರಾದವರು, ಸ್ಪೀಕರ್ ಆಗಲು ಕಾರಣರಾದವರು ಯಾರೂ ಬಿಜೆಪಿಗೆ ಕಾಣುತ್ತಿಲ್ಲ. ಎಲ್ಲಾ ಆಗಿ ಆಯ್ತು, ಅನುಭವಿಸಿ ಆಯ್ತು. ದೋಣಿ ದಾಟಿದ ಮೇಲೆ ದೋಣಿಗಾರನ ಅವಶ್ಯಕತೆ ಇಲ್ಲ ಎಂದು ಕಿಡಿಕಾರಿದ್ದಾರೆ.



ಸಾರ್ವಜನಿಕ ಜೀವನದಲ್ಲಿ ಎಲ್ಲವನ್ನೂ ಅನುಭವಿಸಬೇಕಾಗುತ್ತೆ. ಎದುರಿಸೋಕೆ ಆಗದಿದ್ರೆ ಉಳಿಬಾರದು.

ಯಾವ ಲೆವೆಲ್‌ಗೆ ಯಾರು ಪ್ರತಿಕ್ರಿಯೆ ಕೊಡ್ಬೇಕೋ ಅವರು ಕೊಡ್ತಾರೆ ಎಂದು ಯಲ್ಲಾಪುರ ಕ್ಷೇತ್ರದ ಬಿಜೆಪಿ ಶಾಸಕ ಶಿವರಾಮ್ ಹೆಬ್ಬಾರ್‌ಸ್ವಪಕ್ಷೀಯರ ವಿರುದ್ಧವೇ ಹರಿಹಾಯ್ದಿದ್ದಾರೆ.

> ಶಾಸನ ಸಭೆಯಲ್ಲಿ ಬಿಜೆಪಿಯವರಿಗೆ ನನ್ನ ಜೊತೆ ಗುರುತಿಸಿಕೊಳ್ಳಲು ಮುಜುಗರ ಆದರೆ ಅದು ಅವರಿಗೆ ಬಿಟ್ಟದ್ದು. ನನ್ನನ್ನು ಯಾವುದೇ ಪ್ರತಿಭಟನೆಗೆ ಕರೆದಿಲ್ಲ. ನಾನು ಮತ್ತು ಸೋಮಶೇಖರ್ ಬಿಎಲ್‌ಪಿಗೂ ಹೋಗ್ತಿಲ್ಲ. ಸಿಎಲ್‌ಪಿಗೂ ಹೋಗ್ತಿಲ್ಲ. ನಮ್ದು ಕೆಎಲ್‌ಪಿ, ಕರ್ನಾಟಕ ಲೆಜೆಸ್ಲೇಟಿವ್ ಪಾರ್ಟಿ. ಬಂಡವಾಳ ಇಲ್ಲದ ಮನುಷ್ಯ ನಾನಲ್ಲ. ಏನೇನಾಗಿದೆ ಅನ್ನೋದನ್ನು ಎಲ್ಲವನ್ನೂ ಬಿಚ್ಚಿಡುತ್ತೇನೆ. ಎಲ್ಲಾ ಬಂಡವಾಳ ನನ್ನತ್ರ ಇದೆ, ಬಂಡವಾಳ ಖಾಲಿ ಆಗಿ ಬಂದವ ನಾನಲ್ಲ. ನಾನೇನು ಕಳವು ಮಾಡಿಲ್ಲ, ದರೋಡೆ ಮಾಡಿಲ್ಲ, ಏನಾದ್ರು ಮಾಡಿದ್ರೆ ಬೇಕಲ್ಲಾ ಇಡಿ ಏನು ಇವರಪ್ಪನ ಮನೆ ಆಸ್ತಿ ಅಲ್ಲ. ಯಾರನ್ನೋ ತಂದು ಬೆಳಿಗ್ಗೆ ಒಳಗೆ ಹಾಕಿಸ್ತೀನಿ ಅನ್ನೋಕೆ. ಏನ್ ಮಾಡೋಕೆ ಆಗುತ್ತೆ. ಒಂದು ತಿಂಗಳು ಒಳಗಡೆ ಹಾಕಿಸ್ಬಹುದು ಅಷ್ಟೇ.
>
> –**ಶಿವರಾಮ್ ಹೆಬ್ಬಾರ್**, ಶಾಸಕ

**ಈ ದಿನದ ದರ** | ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹7,397/Gram24ct ₹6,780/Gram22ct | ಬೆಳ್ಳಿ: ₹91.65/Gram



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

## ವ್ಯಾಸಪೂರ್ಣಿಮೆ ಗುರುಪೂರ್ಣಿಮೆ

ವ್ಯಾಸಮಹರ್ಷಿಗಳು ಶ್ರೇಷ್ಠ ಗುರುಗಳು. ಹದಿನೆಂಟು ಪುರಾಣ, ಮಹಾಭಾರತ, ಬ್ರಹ್ಮಸೂತ್ರಗಳನ್ನು ರಚಿಸಿದವರು. ವೇದಗಳ ಪರಿಶೀಲನೆ ನಡೆಸಿ ಅವುಗಳನ್ನು ಸಂಹಿತಾ ಬ್ರಾಹ್ಮಣ ಆರಣ್ಯಕ ಉಪನಿಷತ್ ಎಂದು ನಾಲ್ಕು ರೀತಿ ವಿಂಗಡಿಸಿದವರು. ಶಂಕರಾಚಾರ್ಯರಂಥವರನ್ನು ಅನುಗ್ರಹಿಸಿದವರು. ಸಾಹಿತ್ಯ ಮತ್ತು ಉಪದೇಶದ ಮೂಲಕ ಲೌಕಿಕ ಹಾಗೂ ಆಧ್ಯಾತ್ಮಿಕ ಜ್ಞಾನವನ್ನು ಜನತೆಗೆ ಧಾರೆ ಎರೆದವರು. ಪರೋಪಕಾರಾಯ ಪುಣ್ಯಾಯ ಪಾಪಾಯ ಪರಪೀಡನಂ = ಪರರಿಗೆ ಉಪಕಾರ ಮಾಡುವುದೇ ಪುಣ್ಯ, ಅಪಕಾರ ಮಾಡುವುದೇ ಪಾಪ. ಸುಖ ಬಯಸುವವರು ಪುಣ್ಯವನ್ನೇ ಮಾಡಬೇಕು, ಪಾಪ ಮಾಡಬಾರದು ಇದು ವ್ಯಾಸರ ಸಾಹಿತ್ಯದ ಸಾರ. ಆಸ್ತಿ ಪಾಸ್ತಿ ಏನು ಎಷ್ಟೇ ಇದ್ದರೂ ಮಾನಸಿಕ ನೆಮ್ಮದಿ ಇಲ್ಲದಿದ್ದರೆ ಬಾಕಿ ಎಲ್ಲ ಶೂನ್ಯ. ಸಂಖ್ಯೆಯಿಂದ ಸೊನ್ನೆಗೆ ಬೆಲೆ ಬರುವಂತೆ ಜ್ಞಾನದಿಂದ ಮಾತ್ರ ಬದುಕಿಗೆ ಬೆಲೆ. ಮಾನಸಿಕ ಆಂತರಿಕ ನೆಮ್ಮದಿಯೇ ಜೀವನದ ಪರಮ ಗುರಿ. ಈ ನೆಮ್ಮದಿಯನ್ನು ಒದಗಿಸುವುದೇ ಜ್ಞಾನ. ಇಂಥ ಜ್ಞಾನ ರತ್ನ ನೀಡಿದ ವ್ಯಾಸರ ಜನ್ಮದಿನ ಈ ಗುರುಪೂರ್ಣಿಮೆ. ಇರಲಿ ಇಂಥ ಜನ್ಮದಿನ. ಸಾಧನೆ ಇಲ್ಲದವರ ಜನ್ಮದಿನಾಚರಣೆಗೆ ಏನರ್ಥ? ಈ ದಿನ ನಮ್ಮ ಪರಮ ಗುರು ಸಿದ್ಧಾರೂಢರನ್ನು ಸಾಯಿಬಾಬಾರನ್ನು ಆರಾಧಿಸಿ ಪ್ರಾರ್ಥಿಸಲಾಯಿತು. ನಮ್ಮ ನಿಮ್ಮೆಲ್ಲರಿಗೂ ವ್ಯಾಸಾದಿ ಗುರು ಹಿರಿಯರ ಆಶೀರ್ವಾದ ಸದಾ ಇರಲಿ.

## ವಿದ್ಯಾರ್ಥಿಗಳ ಬೀದಿ ನಾಟಕ ಜಾಗೃತಿ

• **ಉದಯವಾಹಿನಿ,ದೇವನಹಳ್ಳಿ**

ಪಟ್ಟಣದ ಎವರ್ ಗ್ರೀನ್ ಶಾಲೆ ವಿದ್ಯಾರ್ಥಿಗಳು ಡೆಂಗ್ಯೂ ಹರಡದಂತೆ ಪ್ರಮುಖ ಬೀದಿಗಳಲ್ಲಿ ಜಾಗೃತಿ ಜಾಥಾ ಕೈಗೊಂಡರು.ಡೆಂಗ್ಯೂ ಹರಡದಂತೆ ಜಾಗೃತಿ ಬರಹದ ಭಿತ್ತಿಪತ್ರ ಹಿಡಿದು ಘೋಷಣೆ ಕೂಗಿದರು. ಪಟ್ಟಣದ ಬಸ್ ನಿಲ್ದಾಣ ಹಾಗೂ ಗಾಂಧಿಚೌಕದಲ್ಲಿ ಬೀದಿನಾಟಕ ಮೂಲಕ ಜಾಗೃತಿ ಮೂಡಿಸಿದರು. ಶಾಲೆ ಮುಖ್ಯಶಿಕ್ಷಕಿ ಆರ್.ಸವಿತಾ ಮಾತನಾಡಿ, ಈಚೆಗೆ ಡೆಂಗ್ಯೂ ಪ್ರಕರಣಗಳು ಹೆಚ್ಚುತ್ತಿವೆ. ಜನರು ಈ ರೋಗದಿಂದ ಬಳಲುತ್ತಿದ್ದಾರೆ. ಇಂತಹ ಸಮಯದಲ್ಲಿ ಪ್ರತಿಯೊಬ್ಬರನ್ನು ಜಾಗೃತಗೊಳಿಸಬೇಕಾಗಿರುವುದು ಎಲ್ಲರ ಜವಾಬ್ದಾರಿ ಎಂದರು. ಸಾರ್ವಜನಿಕರು ತಮ್ಮ ಸುತ್ತಮುತ್ತಲಿನ ಪರಿಸರದಲ್ಲಿ ಸ್ವಚ್ಛತೆ ಕಾಪಾಡಿಕೊಳ್ಳಬೇಕು. ನೀರು ನಿಲ್ಲದಂತೆ ಎಚ್ಚರ ವಹಿಸಬೇಕು. ಸೊಳ್ಳೆ ಪರದೆ ಉಪಯೋಗಿಸಬೇಕು. ಸ್ವಯಂ ಚಿಕಿತ್ಸೆ ಬದಲಿಗೆ ಸಮೀಪದ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದುಕೊಳ್ಳುವ ಮೂಲಕ ಡೆಂಗ್ಯೂ ಹರಡದಂತೆ ಜಾಗೃತಿ ವಹಿಸಬೇಕು ಎಂದರು. ವೇದಗಾನ ಎಜುಕೇಷನ್ ಟ್ರಸ್ಟ್ ರುದ್ರಮೂರ್ತಿ, ಶಿಕ್ಷಕರಾದ ಆವಲಕೊಂಡರಾಯರೆಡ್ಡಿ, ರಮ್ಯಾ, ಗಣಕಯಂತ್ರ ವಿಭಾಗದ ರುದ್ರೇಶ್. ಪ್ರಭಾವತಿ, ಚೈತ್ರಾ, ಗಾನವಿ ಹಾಜರಿದ್ದರು.

## ರಾಜ್ಯದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಪ್ರಬುದ್ಧ ಯೋಜನೆ ಮುಂದುವರಿಕೆ

• **ಉದಯವಾಹಿನಿ, ಬೆಂಗಳೂರು**

ಪ್ರಬುದ್ಧ ಯೋಜನೆಯಡಿ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ವಿದೇಶದಲ್ಲಿ ಪಿಹೆಚ್ ಡಿ ಅಧ್ಯಯನ ಮಾಡುವ ವಿಷಯಕ್ಕೆ ಸಂಬಂಧಿಸಿದಂತೆ ಕೆಲವು ಗೊಂದಲಗಳು ಉಂಟಾಗಿದ್ದು ಸರ್ಕಾರವು ಈ ಹಿಂದಿನ ರೀತಿಯಲ್ಲೇ ಈ ಯೋಜನೆಯನ್ನು ಮುಂದುವರೆಸಲಿದೆ ಎಂದು ಸಚಿವ ಹೆಚ್.ಸಿ.ಮಹದೇವಪ್ಪ ಹೇಳಿದ್ದಾರೆ. ಈ ಕುರಿತು ಮಾಹಿತಿ ನೀಡಿರುವ ಸಚಿವರು, ಪರಿಶಿಷ್ಟ ಸಮುದಾಯದ ಜನರು ವಿದೇಶಗಳಲ್ಲಿ ಉನ್ನತ ವ್ಯಾಸಂಗ ಮಾಡಿದಾಗ ಮಾತ್ರ ಅವರು ಘನತೆಯುತ ಸ್ಥಾನಗಳಿಗೆ ಏರಲು ಸಾಧ್ಯ ಎಂಬ ಬಾಬಾ ಸಾಹೇಬರ ಆಶಯಗಳನ್ನು ಸಾಕಾರಗೊಳಿಸುವುದು ನಮ್ಮ ಜವಾಬ್ದಾರಿಯೇ ಆಗಿದೆ. ಈ ಹಿನ್ನಲೆಯಲ್ಲಿ ಈ ಹಿಂದಿನಂತೆಯೇ ವಿಶ್ವದ ಅಗ್ರ 100 ವಿಶ್ವವಿದ್ಯಾಲಯಗಳಲ್ಲಿ ಪಿಹೆಚ್ ಡಿ ವ್ಯಾಸಂಗಕ್ಕೆ ಆಯ್ಕೆಯಾಗುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಈ ಯೋಜನೆಯ ಅನುಕೂಲ ಸಿಗಲಿದೆ. ಈ ಯೋಜನೆಯನ್ನು ಮುಂದುವರೆಸುವ ಕುರಿತು ನಮ್ಮ ಇಲಾಖೆಯ ಅಧಿಕಾರಿಗಳಿಗೆ ನಾನು ಸೂಚನೆ ನೀಡಿದ್ದು, ಸಮುದಾಯದ ಬಂಧುಗಳು ಈ ವಿಷಯದಲ್ಲಿ ಗೊಂದಲಗಳಿಗೆ ಎಡೆ ಮಾಡಿಕೊಡಬಾರದೆಂದು ಈ ಮೂಲಕ ವಿನಂತಿಸಿದ್ದಾರೆ.

## ಬೈಕ್ ಗುದ್ದಿದ್ದನ್ನು ಪ್ರಶ್ನಿಸಿದಕ್ಕೆ ಡ್ರ್ಯಾಗರ್‌ನಿಂದ ಅಟ್ಯಾಕ್ ಮಾಡಿದ ಪುಡಿರೌಡಿಗಳು

• **ಉದಯವಾಹಿನಿ,ಆನೇಕಲ್**

ಬೆಂಗಳೂರು ಗ್ರಾಮಾಂತರದ ಆನೇಕಲ್‌ನಲ್ಲಿ ಪುಡಿ ರೌಡಿಗಳ ಅಟ್ಟಹಾಸ ಹೆಚ್ಚಾಗುತ್ತಿದೆ. ಬೈಕ್ ಗುದ್ದಿದ್ದನ್ನು ಪ್ರಶ್ನಿಸಿದಕ್ಕೆ ಡ್ರ್ಯಾಗರ್‌ನಿಂದ ಡೆಡ್ಲಿ ಅಟ್ಯಾಕ್ ನಡೆಸಿದ್ದಾರೆ. ಆನೇಕಲ್ ಬಸ್ ನಿಲ್ದಾಣದ ಮುಂಭಾಗವೇ ಈ ಘಟನೆ ನಡೆದಿದೆ. ಆನೇಕಲ್ ಬಸ್ ನಿಲ್ದಾಣದ ಮುಂಭಾಗ ಆನೇಕಲ್ ಟೌನ್ ನಿವಾಸಿ ಮೋಹನ್ ಎಂಬಾತನ ಮೇಲೆ ಹಲ್ಲೆ ನಡೆದಿದೆ. ಮೋಹನ್ ಬೈಕ್‌ನಲ್ಲಿ ಬರುವಾಗ ಅತಿ ವೇಗವಾಗಿ ಬೈಕ್‌ನಲ್ಲಿ ಬಂದ ಪುಡಿರೌಡಿಗಳು ಗುದ್ದಿದ್ದಾರೆ. ಇದನ್ನು ಪ್ರಶ್ನಿಸಿದ ಮೋಹನ್ ಮೇಲೆ ಏಕಾಏಕಿ ಅಟ್ಯಾಕ್ ಮಾಡಿದ್ದಾರೆ.ತಮ್ಮ ಬಳಿಯಿದ್ದ ಡ್ರ್ಯಾಗರ್ ತೆಗೆದು ಮೋಹನ್‌ಗೆ ಬೀಸಿದ್ದಾರೆ. ಈ ವೇಳೆ ಅಲ್ಲಿದ್ದ ಜನರು ಪುಡಿರೌಡಿಗಳನ್ನು ಹಿಡಿದುಕೊಳ್ಳಲು ಮುಂದಾಗಿದ್ದಾರೆ. ಆಗ ಮೋಹನ್ ಸೇರಿದಂತೆ ಅಲ್ಲಿದ್ದ ಜನರ ಕಣ್ಣಿಗೆ ಪೆಪ್ಪರ್ ಸ್ಪ್ರೇ ಹೊಡೆದು, ಡ್ರ್ಯಾಗರ್‌ನಿಂದ ಸಿಕ್ಕಸಿಕ್ಕವರ ಮೇಲೆ ಹಲ್ಲೆಗೆ ಯತ್ನಿಸಿದ್ದಾರೆ. ಇದೇ ವೇಳೆ ಓರ್ವ ಪುಡಿ ರೌಡಿಯನ್ನು ಹಿಡಿದುಕೊಂಡಿದ್ದಾರೆ. ಮತ್ತೋರ್ವ ಅಲ್ಲಿಂದ ಪರಾರಿ ಆಗಿದ್ದಾನೆ. ಇದೆಲ್ಲವೂ ಸಿಸಿಕ್ಯಾಮೆರಾದಲ್ಲಿ ಸೆರೆಯಾಗಿದೆ.ಸದ್ಯ ಗಾಯಗೊಂಡ ಮೋಹನ್‌ಗೆ ಆನೇಕಲ್ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಆನೇಕಲ್ ಭಾಗದಲ್ಲಿ ಕ್ಷುಲ್ಲಕ ಕಾರಣಗಳಿಗೆ ಕೊಲೆ, ಕೊಲೆ ಯತ್ನ ಪ್ರಕರಣಗಳು ನಡೆಯುತ್ತಿದೆ. ಸದ್ಯ ಆನೇಕಲ್ ಪೊಲೀಸ್ ಠಾಣೆಯಲ್ಲಿ ಈ ಸಂಬಂಧ ಪ್ರಕರಣ ದಾಖಲಾಗಿದೆ.

## ಐಟಿ-ಬಿಟಿ ಕಂಪನಿಗಳ ಒತ್ತಡಕ್ಕೆ ಮಣಿದರೆ ಇನ್ನುಂದೆ 14 ಗಂಟೆ ಕೆಲಸ ಫಿಕ್ಸ್!

• **ಉದಯವಾಹಿನಿ, ಬೆಂಗಳೂರು**

ಐಟಿ-ಬಿಟಿ ಕಂಪನಿಗಳಲ್ಲಿ ಕೆಲಸ ಮಾಡುತ್ತಿರುವ 20 ಲಕ್ಷ ಉದ್ಯೋಗಿಗಳಿಗೆ ಬಿಗ್ ಶಾಕ್ ಆಗೋ ಸುದ್ದಿಯೊಂದು ಹೊರ ಬಿದ್ದಿದೆ. ಇನ್ಮುಂದೆ ಐಟಿ-ಬಿಟಿಯಲ್ಲಿ ಕೆಲಸ ಮಾಡುವ ಉದ್ಯೋಗಿಗಳ ಕೆಲಸದ ಸಮಯ ವಿಸ್ತರಣೆಯಾಗಲಿದೆ. ಕೆಲಸದ ಅವಧಿ 9 ಗಂಟೆ ಬದಲಿಗೆ 14 ಗಂಟೆಗಳ ಕಾಲ ಉದ್ಯೋಗಿಗಳು ಕೆಲಸ ಮಾಡುವ ಕಾನೂನು ತರಲು ಸರ್ಕಾರದ ಮೇಲೆ ಐಟಿ-ಬಿಟಿ ಕಂಪನಿಗಳು ಒತ್ತಡ ಹಾಕಿವೆ. ಈ ಒತ್ತಡಕ್ಕೆ ರಾಜ್ಯ ಸರ್ಕಾರ ಮಣಿದಿದೆಯಾ ಎಂಬ ಪ್ರಶ್ನೆ ಮೂಡಿದೆ. ಏಕೆಂದರೆ ಕಾರ್ಮಿಕ ಇಲಾಖೆ ಮೂಲ ಕವೇ ಕಾನೂನು ಜಾರಿ ಮಾಡಲು ಸಿದ್ಧತೆ ನಡೆಯುತ್ತಿದೆ. ಸಂಬಳದಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ, ಆದರೆ ಕೆಲಸದ ಅವಧಿಯನ್ನು ಮಾತ್ರ ಹೆಚ್ಚು ಮಾಡುತ್ತಾರೆ. ಐಟಿ ಕಂಪನಿಗಳಲ್ಲಿ ಉದ್ಯೋಗಿಗಳ ಕೆಲಸದ ಸಮಯ ವಿಸ್ತರಣೆ ಮಾಡುವುದಕ್ಕೆ ಕಾರ್ಮಿಕ ಇಲಾಖೆ ಬಹುತೇಕವಾಗಿ ಒಪ್ಪಿಗೆ ನೀಡಿದಂತೆ ಆಗಿದೆ. ಈ ವರೆಗೆ ಕೇವಲ 9 ಗಂಟೆ ಮಾತ್ರ ಕೆಲಸ ಮಾಡುತ್ತಿದ್ದ ಉದ್ಯೋಗಿಗಳು ಇನ್ಮುಂದೆ 14 ಗಂಟೆ ಕೆಲಸ ಮಾಡಬೇಕಂತೆ.ಇನ್ನು ಐಟಿ ಉದ್ಯೋಗಿಗಳ ಅಸೋಸಿಯೇಷನ್ ಜೊತೆಗೆ ಕಾರ್ಮಿಕ ಇಲಾಖೆ ಸಭೆ ನಡೆಸಿದೆ. ಈ ಸಭೆಯಲ್ಲಿ ಈ ಕಾನೂನಿಗೆ ಐಟಿ ನೌಕರರು ಭಾರೀ ವಿರೋಧ ವ್ಯಕ್ತಪಡಿಸಿದ್ದಾರೆ. 14 ಗಂಟೆ ಕೆಲಸ ಮಾಡುವುದುದರಿಂದ ಮಾನಸಿಕ ಒತ್ತಡ ಹಾಗೂ ಹಿಂಸೆಗೆ ಒಳಗಾಗುತ್ತೇವೆ. ಹೀಗಾಗಿ ಸರ್ಕಾರ ಕಾನೂನು ತರಬಾರದು ಎಂದು ಪಟ್ಟು ಹಿಡಿದಿದ್ದಾರೆ.

# ಭ್ರಷ್ಟಾಚಾರದ ಬ್ರಹ್ಮ ಯಾರು ಅಂತ ಎಲ್ಲರಿಗೂ ಗೊತ್ತಾಗಿದೆ

### ರಾಜಕೀಯ ದ್ವೇಷಕ್ಕಾಗಿ ಅಧಿಕಾರ ದುರುಪಯೋಗ ಆಗಬಾರದು ಎಂದು ಮಾಜಿ ಸಿಎಂ ಸಂಸದ ಬೊಮ್ಮಾಯಿ ಹೇಳಿಕೆ

• **ಉದಯವಾಹಿನಿ, ಬೆಂಗಳೂರು**

ವಾಲ್ಮೀಕಿ ನಿಗಮದ ಹಗರಣದಲ್ಲಿ ಇಡೀ ಸರ್ಕಾರ ಸಿಲುಕಿಕೊಂಡಿದ್ದು, ಪೂರ್ಣ ತನಿಖೆಯಾದರೆ ಸಿಎಂ ರಾಜಿನಾಮೆ ನೀಡಬೇಕಾಗುತ್ತದೆ ಎಂದು ರಕ್ಷಣೆಗೆ ಬಿಜೆಪಿ ವಿರುದ್ಧ ಆರೋಪ ಮಾಡುತ್ತಿದ್ದಾರೆ. ಅವರು ಯಾವುದೇ ತನಿಖೆ ನಡೆಸಿದರೂ ನಾವು ಎದುರಿಸಲು ಸಿದ್ದರಿದ್ದೇವೆ.ಆದರೆ, ರಾಜಕೀಯ ದ್ವೇಷಕ್ಕಾಗಿ ಅಧಿಕಾರ ದುರುಪಯೋಗ ಆಗಬಾರದು ಎಂದು ಮಾಜಿ ಸಿಎಂ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.


**ಸಿದ್ದು ವಿರುದ್ಧ ಬೊಮ್ಮಾಯಿ ವಾಗ್ದಾಳಿ**

ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ವಾಲ್ಮೀಕಿ ನಿಗಮದ ಹಗರಣದಲ್ಲಿ ಇಡೀ ಸರ್ಕಾರ ಸಿಕ್ಕಿಕೊಂಡಿದೆ. ಅದರ ಹಣ ಚುನಾವಣಾ ರಾಜಕಾರಣಕ್ಕೆ, ಸಾರಾಯಿ ಖರೀದಿಗೆ ಹೋಗಿರುವುದು ಸಿಕ್ಕಿದೆ. ಬಗ್ಗೆ ಪೂರ್ಣ ತನಿಖೆಯಾದರೆ ಸಿಎಂ ರಾಜಿನಾಮೆಕೊಡಬೇಕಾಗುತ್ತದೆ ಎಂದು ಬಿಜೆಪಿಯ ಅವಧಿಯಲ್ಲಿ 21 ಹಗರಣ ಆಗಿದೆ ಎಂದು ಆರೋಪಿಸಿದ್ದಾರೆ. ಬಹಳ ಕಷ್ಟಪಟ್ಟು ಬಿಜೆಪಿಯ ಅವಧಿಯಲ್ಲಿ ಭ್ರಷ್ಟಾಚಾರ ಆಗಿದೆ ಅಂತ ಈಗ ಕಣ್ಣು ತೆರೆದು ನೋಡುತ್ತಿದ್ದಾರೆ. ಅವರು ಅಧಿಕಾರದಲ್ಲಿ ಇದ್ದಾರೆ. ಯಾವುದೆ ತನಿಖೆ ನಡೆಸಲಿ ನಾವು ಎದುರಿಸಲು ಸಿದ್ದರಿದ್ದೇವೆ. ಆದರೆ, ತನಿಖೆ ಹೆಸರಲ್ಲಿ ಅಧಿಕಾರ ದುರ್ಬಳಕೆ ಆಗಬಾರದು, ಅವರು ಮಾಡಿರುವ ಆರೋಪಕ್ಕೆ ದಾಖಲೆ ನೀಡಬೆಕಿತ್ತು ಎಂದು ಹೇಳಿದರು.

ನನ್ನ ವಿರುದ್ದ ಮಾಡಿರುವ ಆರೋಪದಲ್ಲಿ ನಾನು ಎಪಿಎಂಸಿ ಸಚಿವನಾಗಿರಲಿಲ್ಲ ಆಗ ಗೃಹ ಸಚಿವನಾಗಿದ್ದೆ, ಎಪಿಎಂಸಿ ಪ್ರಕರಣದಲ್ಲಿ ತನಿಖೆ ನಡೆಸಿ ಬ್ಯಾಂಕಿನವರಿಂದ 48 ಕೋಟಿ ರೂ. ಜೊತೆಗೆ ಬಡ್ಡಿ ಸಮೇತ 52 ಕೋಟಿ ರೂ ವಸೂಲಿ ಮಾಡಲಾಗಿತ್ತು. ಭೋವಿ ನಿಗಮದಲ್ಲಿ ಅವ್ಯವಹಾರ ಆಗಿದ್ದಾಗ ಅದನ್ನು ಸಿಐಡಿ ತನಿಖೆಗೆ ನಾವೇ ವಹಿಸಿದ್ದೇವೆ. ಅದರ ತನಿಖೆ ನಡೆಯುತ್ತಿದೆ. ಗಂಗಾ ಕಲ್ಯಾಣ ಯೋಜನೆ ದುರುಪಯೋಗದ ಆರೋಪ ಕೇಳಿ ಬಂದಾಗ ನಾನೇ ಸದನದಲ್ಲಿ ಸಿಐಡಿ ತನಿಖೆಗೆ ನೀಡಿದ್ದೇನೆ. ಅದರ ತನಿಖೆ ಕೊನೆ ಹಂತಕ್ಕೆ ಬಂದಿದೆ. ನಮ್ಮ ವಿರುದ್ದ 40% ಆರೊಪವನ್ನು ಮಾಡಿದ್ದರು. ಇದವರೆಗೂ ಯಾವುದೇ ಅಧಿಕಾರಿ ಹಾಗೂ ಗುತ್ತಿಗೆದಾರರಿಗೆ ನೊಟಿಸ್ ಕೊಟ್ಟಿಲ್ಲ. ರಾಜಕೀಯ ಉದ್ಯೇಶದಿಂದ ಆಯೊಗ ಮಾಡಿದರೆ, ತನಿಖೆ ನಡೆಸಿದರೆ ಹೀಗೆ ಆಗುವುದು ಎಂದು ತಿರುಗೇಟು ನೀಡಿದರು. ಇವತ್ತು ವಾಲ್ಮೀಕಿ ನಿಗಮ ಒಂದೇ ಅಲ್ಲ ಎಲ್ಲಾ ಇಲಾಖೆಗಳಲ್ಲಿ ಹಗರಣ ಹೊರ ಬರುತ್ತಿವೆ ಕೊಮುಲ್ ನಿಂದ ಹಿಡಿದು ಪ್ರವಾಸೋದ್ಯಮ ಇಲಾಖೆ ಹಗರಣ ಎಲ್ಲವೂ ಹೊರ ಬರುತ್ತಿವೆ. ಕಾಂಗ್ರೆಸ್ ಅಂದರೆ ಭ್ರಷ್ಟಾಚಾರ ಅನ್ನುವಂತಾಗಿದೆ. ಸ್ವಾತಂತ್ರ್ಯಾ ನಂತರ ಭ್ರಷ್ಟಾಚಾರ ಹುಟ್ಟು ಹಾಕಿದ್ದೆ ಕಾಂಗ್ರೆಸ್. ಅವರು ಯಾವುದೇ ತನಿಖೆ ನಡೆಸಲಿ ನಾವು ಎದುರಿಸುತ್ತೇವೆ. ನಾವು ಅವರ ರೀತಿ ಇಡಿ ಯಾಕೆ, ಸಿಬಿಐ

> **ನಾವು ಅವರ ಹಾಗೆ ಅಂಜುಬುರುಕರಲ್ಲ. ಪೊಲೀಸ್ ಇಲಾಖೆಯನ್ನು ತಮ್ಮ ವಿರುದ್ದ ಬಂದಿರುವ ಆರೋಪದಿಂದ ರಕ್ಷಣೆ ಪಡೆಯಲು ದುರ್ಬಳಕೆ ಮಾಡಿಕೊಂಡರೆ ಆ ಹಗರಣವೂ ಶೀಘ್ರವೇ ಹೊರ ಬರಲಿದೆ ಎಂದು ಹೇಳಿದರು. ಇಡಿ ತನಿಖೆ ಬಗ್ಗೆ ಇವರಿಗೆ ಯಾಕೆ ಭಯ. ಈಗಾಗಲೇ ಇವರ ವಿರುದ್ದ ಸುಮಾರು 40 ಕ್ಕಿಂತ ಹೆಚ್ಚು ಪ್ರಕರಣಗಳು ಲೋಕಾಯುಕ್ತದಲ್ಲಿ ತನಿಖೆ ನಡೆಯುತ್ತಿದೆ.**

ಯಾಕೆ ಬಂತು ಅಂತ ಕೇಳುವುದಿಲ್ಲ. ಇದೇ ವೇಳೆ, ರಾಜ್ಯದಲ್ಲಿ ಪ್ರವಾಹ ಬಂದರೂ ಮುಖ್ಯಮಂತಿ ಸಚಿವರು ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡದಿರುವ ಕುರಿತು ಕೇಳಿದ ಪ್ರಶ್ನೆಗೆ, ಬರ ಮತ್ತು ಪ್ರವಾಹದ ವಿಚಾರದಲ್ಲಿ ಈ ಸರ್ಕಾರ ನಿರ್ಲಕ್ಷ್ಯ ಮಾಡಿರುವುದು ಸ್ಪಷ್ಟವಾಗಿದೆ. ನಮ್ಮ ಕೇಂದ್ರ ಸಚಿವರು, ಪಕ್ಷದ ನಾಯಕರು ಪ್ರವಾಹ ಪೀಡಿತ ಪ್ರದೇ ಶಗಳಿಗೆ ಭೇಟಿ ಮಾಡಿದ ನಂತರ ಸಿಎಂ ಭೇಟಿ



> **ಬಿಬಿಎಂಪಿಯಲ್ಲಿ ಗುತ್ತಿಗೆದಾರಿಗೆ ಶೇ 68% ರಷ್ಟು ಹೆಚ್ಚಿಗೆ ನೀಡಿದ್ದಾರೆ. ಇವೆಲ್ಲವೂ ತನಿಖೆ ನಡೆಯುತ್ತಿದೆ. ಮುಖ್ಯಮಂತ್ರಿ ಯವರು ಅಧಿವೇಶನ ಕೊನೆಗಳಿಗೆಯಲ್ಲಿ ಆರೋಪ ಮಾಡಿ ವಿರೋಧ ಪಕ್ಷದವರು ಬಾಯಿಮುಚ್ಚಿಕೊಂಡಿದ್ದಾರೆ ಎನ್ನುತ್ತಾರೆ. ನಾವು ಬಾಯಿ ಮುಚ್ಚಿಕೊಂಡು ಕುಳಿತಿಲ್ಲ. ಸದನದಲ್ಲಿ ಪ್ರತಿಪಕ್ಷದ ಶಾಸಕರನ್ನು ಟಾರ್ಗೆಟ್ ಮಾಡಿದರೂ ಯಾರೂ ಬಗ್ಗುವುದಿಲ್ಲ. ಅವರ ಮುಖಕ್ಕೆ ಮಸಿ ಬಳಿದಿದೆ. ಅದಕ್ಕೆ ಎಲ್ಲರೂ ಒಂದು ಎಂದು ತೋರಿಸಲು ಹೊರಟಿದ್ದಾರೆ. ಭ್ರಷ್ಟಾಚಾರದ ಬ್ರಹ್ಮ ಯಾರು ಅಂತ ಎಲ್ಲರಿಗೂ ಗೊತ್ತಾಗಿದೆ. ಅವರು ಈಗ ಹಗರಣದಲ್ಲಿ ಸಿಲುಕಿಕೊಂಡಿದ್ದಾರೆ. ತನಿಖೆ ನಂತರ ಸತ್ಯ ಹೊರಬರಲಿದೆ. ಸರ್ಕಾರದ ಭ್ರಷ್ಟಾಚಾರದ ವಿರುದ್ದದ ಹೋರಾಟ ಸದನದ ಹೊರಗೆ ಒಳಗೆ ಮುಂದುವರೆಯಲಿದೆ ಎಂದು ಹೇಳಿದರು.**

ಮಾಡಿದ್ದಾರೆ. ಕೇಂದ್ರ ಸರ್ಕಾರ 700 ಕೋಟಿ ರೂ. ನೀಡಿದೆ. ರಾಜ್ಯ ಸರ್ಕಾರದಿಂದ ಬರ ಬಂದಾಗಲೂ ಹಣ ಬಿಡು ಗಡೆ ಮಾಡಲಿಲ್ಲ. ಈಗಲೂ ಬಿಡುಗಡೆ ಮಾಡಿಲ್ಲ. ಈ ಸರ್ಕಾರಕ್ಕೆ ಒಳ್ಳೆಯ ಆಡಳಿತ ಕೊಡುವ ಉದ್ದೇಶ ಇಲ್ಲ. ಡಿಸಿಎಂ ಅವರು ಯಾವಾಗಲೂ ಜನರನ್ನು ದಾರಿ ತಪ್ಪಿಸುವ ಪ್ರಯತ್ನ ಮಾಡುತ್ತಾರೆ ಎಂದು ಆರೋಪಿಸಿದರು.

## ಒಲಿಂಪಿಕ್ಸ್‌ನಲ್ಲಿ ಸ್ಪರ್ಧಿಸುವ ಕ್ರೀಡಾಪಟುಗಳಿಗೆ ತಲಾ 5 ಲಕ್ಷ ರೂ. ಘೋಷಣೆ

• **ಉದಯವಾಹಿನಿ, ಬೆಂಗಳೂರು**



ಉದಯವಾಹಿನಿ ಚಿತ್ರ

**ಡಾ.ಕೆ. ಗೋವಿಂದರಾಜು ಪ್ರೋತ್ಸಾಹ**

ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ 2024ರಲ್ಲಿ ಭಾರತವನ್ನು ಪ್ರತಿನಿಧಿಸುತ್ತಿರುವ ಒಂಬತ್ತು ಮಂದಿ ಕರ್ನಾಟಕದ ಕ್ರೀಡಾಪಟುಗಳಿಗೆ ತಲಾ 5 ಲಕ್ಷ ರೂಪಾಯಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಜೂರು ಮಾಡಿದ್ದಾರೆ.

ಕರ್ನಾಟಕ ಒಲಿಂಪಿಕ್ ಅಸೋಸಿಯೇಷನ್ ಅಧ್ಯಕ್ಷರು ಮತ್ತು ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಆಗಿರುವ ಡಾ.ಕೆ.ಗೋವಿಂದರಾಜು ಪ್ರೋತ್ಸಾಹದನ ನೀಡುವಂತೆ ಮನವಿ ಮಾಡಿದ್ದರು.ಈ ಮನವಿಗೆ ಸ್ಪಂದಿಸಿದ ಮುಖ್ಯಮಂತ್ರಿಗಳು ಹಣ ಮಂಜೂರು ಮಾಡಿದ್ದಾರೆ.

ಜುಲೈ 26 ರಿಂದ ಆಗಸ್ಟ್ 11ರ ವರೆಗೆ ಪ್ಯಾರೀಸ್ ನಲ್ಲಿ ಒಲಿಂಪಿಕ್ಸ್ ಕ್ರೀಡಾಕೂಟ ನಡೆಯಲಿದೆ. ಈ ಕ್ರೀಡಾಕೂಟದಲ್ಲಿ ರಾಜ್ಯದ ಪರವಾಗಿ ಮಹಿಳಾ ಡಬಲ್ಸ್ ಬ್ಯಾಡ್ಮಿಂಟನ್ ನಲ್ಲಿ ಕುಮಾರಿ ಅಶ್ವಿನಿ ಪೊನ್ನಪ್ಪ, ಮಹಿಳಾ ಗಾಲ್ಫ್ ನಲ್ಲಿ ಕುಮಾರಿ ಅದಿತಿ ಅಶೋಕ್, ಮಹಿಳಾ ಫ್ರೀಸ್ಟೈಲ್ ಈಜು ಸ್ಪರ್ಧೆಯಲ್ಲಿ ಕುಮಾರಿ ಧಿನಿಧಿ ದೇಸಿಂಘು ,ಮಿಕ್ಸೆಡ್ ರಿಲೇ ಓಟದಲ್ಲಿ ಎಂ.ಆರ್.ಪೂವಮ್ಮ, ಟೇಬಲ್ ಟೆನ್ನಿಸ್ ನಲ್ಲಿ ಕುಮಾರಿ ಅರ್ಚನಾ ಕಾಮತ್, ಪುರುಷರ ಈಜು ಸ್ಪರ್ಧೆಯಲ್ಲಿ ಶ್ರೀಹರಿ ನಟರಾಜ್, ಪುರುಷರ ಟೆನ್ನಿಸ್ ಡಬಲ್ಸ್ ನಲ್ಲಿ ರೋಹನ್ ಭೋಪಣ್ಣ, ಪುರುಷರ 71 ಕೆಜಿ ಬಾಕ್ಸಿಂಗ್ ನಲ್ಲಿ ನಿಶಾಂತ್ ದೇವ್, ಮಿಕ್ಸೆಡ್ ರಿಲೇ ಓಟದಲ್ಲಿ ಮಿಜೋ ಚಾಕೋ ಅವರುಗಳು ಭಾರತವನ್ನು ಪ್ರತಿನಿಧಿಸುತ್ತಿದ್ದಾರೆ. ಈ ಒಂಬತ್ತು ಮಂದಿಗೆ ಕರ್ನಾಟಕ ಒಲಿಂಪಿಕ್ಸ್ ಅಸೋಸಿಯೇಷನ್ ನಿಂದ ಪ್ರತ್ಯೇಕ ನೆರವು ದೊರೆಯಲಿದೆ ಎಂದು ತಿಳಿಸಿರುವ

ಡಾ.ಕೆ.ಗೋವಿಂದರಾಜು ಅವರು ಕ್ರೀಡಾಪಟುಗಳಿಗೆ ಸರ್ಕಾರದ ನೆರವು ದೊರಕಿಸಿಕೊಟ್ಟು ಪ್ರೋತ್ಸಾಹಿಸಿದ ಮುಖ್ಯಮಂತ್ರಿಗಳಿಗೆ ಧನ್ಯವಾದ ಸಲ್ಲಿಸಿದ್ದಾರೆ.

## ಡಿಕೆಶಿಗೆ ಕೇಂದ್ರ ಸಚಿವ ಹೆಚ್‌ಡಿಕೆ ತಿರುಗೇಟು

• **ಉದಯವಾಹಿನಿ, ಬೆಂಗಳೂರು**

ದರೋಡೆ, ಲೂಟಿ ತಡೆಯಲು ಸೇನೆ ಕರೆಸಬೇಕಾಗುತ್ತೆ ಎಂಬುದಾಗಿ ಡಿಸಿಎಂ ಡಿ.ಕೆ ಶಿವಕುಮಾರ್ ಅವರಿಗೆ ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ತಿರುಗೇಟು ನೀಡಿದ್ದಾರೆ.

ಇಲ್ಲಿನ ಮಳೆಹಾನಿ ಪ್ರದೇಶಗಳಿಗೆ ಪ್ರತಿಪಕ್ಷ ನಾಯಕ ಆರ್.ಅಶೋಕ್ ಅವರೊಂದಿಗೆ ಭೇಟಿ ನೀಡಿದ ನಂತರ ಅವರು ಮಾಧ್ಯಮಗಳ ಜತೆ ಮಾತನಾಡಿದ ಅವರು, ಮಳೆ, ನೆರೆ ಪರಿಹಾರ ಕಾರ್ಯಕ್ಕೆ ಸೇನೆಯನ್ನು ಕರೆದುಕೊಂಡು ಬರಬೇಕಿತ್ತು ಎಂದು ಹೇಳಿದ್ದ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಟಾಂಗ್ ಕೊಟ್ಟ ಕೇಂದ್ರ ಸಚಿವ ಕುಮಾರಸ್ವಾಮಿ ಅವರು; ಅವರು ಯಾವ ಅರ್ಥದಲ್ಲಿ ಸೇನೆಯನ್ನು ಕರೆಸಬೇಕು ಎಂದು ಹೇಳಿದ್ದಾರೋ ಗೊತ್ತಿಲ್ಲ ಎಂದು ಚುಚ್ಚಿದರು.

ಪಾಪ.. ಡಿ.ಕೆ.ಶಿವಕುಮಾರ್ ಅವರು ಹೇಳಿದ್ದಾರೆ, ಮಿಲಿಟರಿ ತರಬೇಕು ಎಂದು. ಅವರು ಮಿಲಿಟರಿಯನ್ನು ಏಕೆ ತರಲು ಹೇಳಿದ್ದಾರೆ ಎಂದರೆ ಈ ರಾಜ್ಯದಲ್ಲಿ ಅವ್ಯಾಹತವಾಗಿ ಲೂಟಿ, ದರೋಡೆ ನಡೆಯುತ್ತಿದೆ.




ಉದಯವಾಹಿನಿ ಚಿತ್ರ

ಭಯೋತ್ಪಾದಕ ಕೃತ್ಯಗಳಿಗಿಂತ ದರೋಡೆ, ಲೂಟಿ ಚೆನ್ನಾಗಿ ನಡೆಯುತ್ತಿದೆ. ದರೋಡೆ ಹೊಡೆಯುವುದನ್ನು ನಿಲ್ಲಿಸಿಲು ಮಿಲಿಟರಿಯನ್ನು ಕರೆ ತರಲು ಹೇಳಿರಬೇಕು ಅವರು ಕೇಂದ್ರ ಸಚಿವರು ತಿರುಗೇಟು ಕೊಟ್ಟರು ಕೇಂದ್ರ ಸಚಿವರು. ನಾನು ಡಿಫ್ರೆಷನ್‌ನಲ್ಲಿ ಇದ್ದೀನಿ ಎಂದು ಅವರು ಹೇಳಿದ್ದಾರೆ. ನನ್ನನ್ನು ನೋಡಿದರೆ ಡಿಪ್ರೆಷನ್‌ನಲ್ಲಿ ಇರುವವನ ರೀತಿ ಕಾಣುತ್ತೇನೆಯೇ ಎಂದ ಅವರು, ಮಿಲಿಟರಿ ತರಲು ಅವರು ಏಕೆ ಹೇಳಿದರು ಎಂದು ನಾನು ಯೋಚನೆ ಮಾಡುತ್ತಿದ್ದೇನೆ ಎಂದು ಟಾಂಗ್ ಕೊಟ್ಟರು.

## ನಿರ್ವಾಹಕರು ಕರ್ತವ್ಯ ನಿರ್ವಹಣೆ ವೇಳೆ ರೀಲ್ಸ್ ಮಾಡಿದ್ರೆ ಅಮಾನತು

• **ಉದಯವಾಹಿನಿ, ಬೆಂಗಳೂರು**



ಇತ್ತೀಚಿಗೆ ಕೆಎಸ್‌ಆರ್‌ಟಿಸಿ ಬಸ್ ಚಾಲಕರ್ತ ನಿರ್ವಾಹಕರ ರೀಲ್ಸ್ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದ್ದವು. ಇದರಿಂದ ಜೀವ ಹಾನಿ ಯಾಗಿತ್ತು. ಹೀಗಾಗಿ ಕರ್ನಾಟಕ ಸಾರಿಗೆ ಇಲಾಖೆಯ ಚಾಲಕ ನಿರ್ವಾಹಕರಿಗೆ ಸಚಿವ ರಾಮಲಿಂಗಾ ರೆಡ್ಡಿ ಖಡಕ್ ಸೂಚನೆ ನೀಡಿದ್ದಾರೆ. ಕರ್ತವ್ಯದ ವೇಳೆ ವೇಳೆ ರೀಲ್ಸ್ ಮಾಡಿದರೇ ಅಂತವರನ್ನು ಮುಲಾಜಿಲ್ಲದೆ ಅಮಾ ನತುಗೊಳಿಸಲಾಗುವುದು ಎಂದು ಹೇಳಿದ್ದಾರೆ.

ಚಾಲಕರು ನಿರ್ವಾಹಕರು ಕರ್ತವ್ಯದ ವೇಳೆ ರೀಲ್ಸ್ ಮಾಡಿದರೇ ಅಂತವರನ್ನು ಮುಲಾಜಿಲ್ಲದೆ ಕೆಲಸದಿಂದ ತೆಗೆಯಲಾಗುತ್ತದೆ ಎಂದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಎಚ್ಚರಿಕೆ ನೀಡಿದರು. ಬೆಂಗಳೂರಿನಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ರೀಲ್ಸ್ ಮಾಡಿದವರು ಕೆಲಸದಲ್ಲಿ ಇರಲು ಲಾಯಕ್ ಇಲ್ಲ ಎಂದರು. ಕಳೆದ ಮೇ ತಿಂಗಳಲ್ಲಿ ಚಾಲಕ ಛತ್ರಿ ಹಿಡಿದುಕೊಂಡು ಬಸ್ ಓಡಿಸುತ್ತಿದ್ದ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ಭಾರಿ ವೈರಲ್ ಆಗಿತ್ತು. ಧಾರವಾಡ ಘಟಕದ ಬೇಟ ಗೇರಿ-ಧಾರವಾಡ ಮಾರ್ಗದಲ್ಲಿ ಸಂಚರಿಸುವ ಬಸ್‌ನಲ್ಲಿ ಚಾಲಕರಾಗಿ ಹನುಮಂತಪ್ಪ ಅ ಕಿಲ್ಲೇದಾರ ಹಾಗೂ ನಿರ್ವಾಹಕರಾಗಿ ಅನಿತಾ ಅವರು ಕರ್ತವ್ಯ ನಿರ್ವಹಿಸುತ್ತಿದ್ದರು. ಸಂಜೆ ಮಳೆ ಬರುತ್ತಿದ್ದಾಗ ಬಸ್ಸಿನಲ್ಲಿ ಪ್ರಯಾಣಿಕರು ಇಲ್ಲದೇ ಇದ್ದಾಗ ಚಾಲಕ ಹನುಮಂತಪ್ಪ ಛತ್ರಿ ಹಿಡಿದು ಬಸ್ ಚಲಾಯಿಸಿದ್ದರು. ಛತ್ರಿ ಹಿಡಿದು ಚಾಲನೆ ಮಾಡುತ್ತಿದ್ದ ದೃಶ್ಯವನ್ನು ನಿರ್ವಾಹಕಿ ಮೊಬೈಲಿನಲ್ಲಿ ಸೆರೆ ಹಿಡಿದಿದ್ದರು.

## ಶೈಕ್ಷಣಿಕ ಸಂಸ್ಥೆಗಳು ಬಾಕಿ ಸೇವಾ ಶುಲ್ಕ ಕಟ್ಟಿದರೆ ಬಡ್ಡಿ ಮನ್ನಾ

• **ಉದಯವಾಹಿನಿ, ಬೆಂಗಳೂರು**



ಬಿಬಿಎಂಪಿ ವ್ಯಾಪ್ತಿಯಲ್ಲಿ ಬರುವ ಶೈಕ್ಷಣಿಕ ಸಂಸ್ಥೆಗಳು ಬಾಕಿ ಇರುವ ಸೇವಾ ಶುಲ್ಕವನ್ನು ಪಾವತಿ ಸಬೇಕು. ಒನ್ ಟೈಮ್ ಸಿಸ್ಟಮ್ ಯೋಜನೆ ಯಡಿ (ಒಟಿಎಸ್) ಪಾವತಿಸಲು ಜು 31 ಕೊನೆಯ ದಿನವಾಗಿದೆ ಎಂದು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಹೇಳಿದರು. ಬಿಬಿಎಂಪಿ ವ್ಯಾಪ್ತಿಯಲ್ಲಿ ಬಾಕಿ ಆಸ್ತಿ ತೆರಿಗೆದಾರರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಒಂದು ಬಾರಿ ಪರಿಹಾರ ಯೋಜನೆಯ ಕುರಿತು ವೈದ್ಯಕೀಯ ಕಾಲೇಜು, ಇಂಜಿನಿಯರಿಂಗ್ ಕಾಲೇಜು ಸೇರಿದಂತೆ ಇನ್ನಿತರೆ ಶೈಕ್ಷಣಿಕ ಸಂಸ್ಥೆಗಳ ಜೊತೆ ನಗರದಲ್ಲಿ ನಡೆದ ಸಭೆಯಲ್ಲಿ ಅವರು ಮಾತನಾಡಿದರು. ಶೈಕ್ಷಣಿಕ ಸಂಸ್ಥೆಗಳು ಒಂದು ಪರಿಹಾರ ಯೋಜನೆಯಡಿ ಶೇಕಡಾ 25 ರಷ್ಟು ಸೇವಾ ಶುಲ್ಕವನ್ನು ಪಾವತಿಸಬೇಕಾಗಿದೆ. ಯೋಜನೆ ಜುಲೈ 31ಕ್ಕೆ ಮುಗಿಯಲಿದ್ದು, ಕೂಡಲೆ ಎಲ್ಲರೂ ಬಾಕಿ ಇರುವ ಸೇವಾ ಶುಲ್ಕವನ್ನು ಪಾವತಿಸಿದರೆ ಬಡ್ಡಿ ಮನ್ನಾ ಆಗಲಿದೆ ಹೇಳಿದರು.

ನಗರದಲ್ಲಿ ಬಾರಿ ಪರಿಹಾರ ಯೋಜನೆಯನ್ನು ಕಾಯ್ದೆ ಅನುಸಾರ ಜಾರಿ ಮಾಡಲಾಗಿದೆ. ಪಾಲಿಕೆ ವ್ಯಾಪ್ತಿಯಲ್ಲಿ ಬಾರಿ ಪರಿಹಾರ ಯೋಜನೆಯಡಿ ಬಾಕಿ ಇರುವ ಆಸ್ತಿ ತೆರಿಗೆಯ ಮೇಲೆ ವಿಧಿಸುವ ಬಡ್ಡಿ ಸಂಪೂರ್ಣ ಮನ್ನಾ ದಂಡವನ್ನು ಅರ್ಧಕ್ಕೆ ಇಳಿಸಲಾಗಿದೆ. ಶೈಕ್ಷಣಿಕ ಸಂಸ್ಥೆಗಳು ಕೂಡಲೆ ಇದರ ಸದುಪಯೋಗವನ್ನು ಪಡೆದುಕೊಂಡು ಕೂಡಲೆ ಬಾಕಿ ಇರುವ ಸೇವಾ ಶುಲ್ಕವನ್ನು ಪಾವತಿಸುವಂತೆ ಅವರು ಮನವಿ ಮಾಡಿದರು.

## ಮಕ್ಕಳ ಅಶ್ಲೀಲ ದೃಶ್ಯ ವೀಕ್ಷಣೆ ಅಪರಾಧವಲ್ಲ ಆದೇಶ ಹಿಂಪಡೆದ ಹೈಕೋರ್ಟ್

• **ಉದಯವಾಹಿನಿ, ಬೆಂಗಳೂರು**



**ನ್ಯಾಯ ಮೂರ್ತಿಗಳು ಕೂಡ ಮನುಷ್ಯರೇ**

ಮಹತ್ವದ ಬೆಳವಣಿಗೆಯೊಂದರಲ್ಲಿ ಅನ್‌ಲೈನ್‌ನಲ್ಲಿ ಮಕ್ಕಳ ಆಶ್ಲೀಲ ದೃಶ್ಯಗಳನ್ನು ನೋಡುವುದು ಮಾಹಿತಿ ತಂತ್ರಜ್ಞಾನ ಕಾಯಿದೆ ಸೆಕ್ಷನ್ 67ರ 'ಬಿ' ಅನ್ವಯ ಅಪರಾಧವಲ್ಲವೆಂದು ಜುಲೈ 10ರಂದು ನೀಡಿದ್ದ ಆದೇಶವನ್ನು ಕರ್ನಾಟಕ ಹೈಕೋರ್ಟ್ ಹಿಂಪಡೆದಿದೆ.

''ನ್ಯಾಯಮೂರ್ತಿಗಳು ಕೂಡ ಮನುಷ್ಯರೇ. ಹೀಗಾಗಿ ಸಹಜವಾಗಿ ಕೆಲವೊಮ್ಮೆ ತಪ್ಪುಗಳಾಗುತ್ತವೆ. ನಾವು ದೋಷರಹಿತರಲ್ಲ. ಆದ್ದರಿಂದ ಈ ನ್ಯಾಯಾಲಯ ನೀಡಿದ ಆದೇಶದಲ್ಲಿ ತಪ್ಪಾಗಿದೆ ಎಂಬುದನ್ನು ತಿಳಿದ ನಂತರ ಆ ತಪ್ಪನ್ನು ಮುಂದುವರಿಸುವುದಿಲ್ಲ'' ಎಂದು ಆದೇಶದಲ್ಲಿ ಹೇಳಿದೆ. ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರ ಏಕಸದಸ್ಯ ಪೀಠ ''ಈ ನ್ಯಾಯಾಲಯವು ಸೆಕ್ಷನ್ 67 ಬಿ (ಬಿ)ಅನ್ನು ಗಮನಿಸದೆ ಆದೇಶವನ್ನು ಹೊರಡಿಸಿದೆ, ಇದು ತಪ್ಪು'' ಎಂದು ತಿಳಿಸಿದೆ. ಹೀಗಾಗಿ ಹಿಂದಿನ ಆದೇಶ ವಾಪಸ್ ಪಡೆದು ಅರ್ಜಿದಾರನ ವಿರುದ್ಧ ತನಿಖೆ ಮುಂದುವರಿಸಲು ಸೂಚಿಸಿದೆ.

ಸರ್ಕಾರಿ ವಕೀಲರು ಸಲ್ಲಿಸಿದ್ದ ಆದೇಶ ಮರುಪರಿಶೀಲನೆ ಮನವಿಯನ್ನು ಪರಿಗಣಿಸಿದ ನ್ಯಾಯಾಲಯವು ''ಮೊದಲು ಕೇವಲ ಐಟಿ ಕಾಯಿದೆಯ ಸೆಕ್ಷನ್ 67ರ ಬಿ (ಎ) ಅಡಿ ಆದೇಶ ಹೊರಡಿಸಲಾಗಿತ್ತು. ಆದರೆ ಸೆಕ್ಷನ್ 67 (ಬಿ) (ಬಿ)ಯಲ್ಲಿ ಮಕ್ಕಳನ್ನು ಅಶ್ಲೀಲವಾಗಿ ಚಿತ್ರಿಸುವ ಮತ್ತು ತೋರಿಸುವ ದೃಶ್ಯಗಳನ್ನು ಡಿಜಿಟಲ್ ರೂಪದಲ್ಲಿ ಹೊಂದುವುದು, ಸಂಗ್ರಹ ಮಾಡುವುದು, ಬ್ರೌಸ್ ಮಾಡುವುದು ಮತ್ತು ಪ್ರದರ್ಶಿಸುವುದು ಮತ್ತು ವಿತರಣೆ ಮಾಡುವುದು ಅಪರಾಧವಾಗಿದೆ. ಹಾಗಾಗಿ ಈ ಪ್ರಕರಣದಲ್ಲಿ ಸೆಕ್ಷನ್ 67 (ಬಿ) (ಬಿ) ಅನ್ವಯವಾಗುತ್ತದೆ'' ಎಂದು ಆದೇಶಿಸಿದೆ. 2022ರ ಮಾರ್ಚ್ 23ರ ಅಪರಾಹ್ನ 3.30ರಿಂದ 4.40ರ ಮಧ್ಯೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆಯ ಎನ್.ಇನಾಯತ್ ಉಲ್ಲಾ ಮೊಬೈಲ್‌ನಲ್ಲಿ ಮಕ್ಕಳ ಆಶ್ಲೀಲ ದೃಶ್ಯಗಳನ್ನು (ಚೈಲ್ಡ್ ಪೋರ್ನೋಗ್ರಫಿ) ನೋಡುತ್ತಿದ್ದ ಎಂದು 2022ರ ಮೇ 3ರಂದು ಸೆನ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು. ಅದು ಐಟಿ ಕಾಯಿದೆ 67ರ ಸೆಕ್ಷನ್ ಬಿ' ಪ್ರಕಾರ ಅಪರಾಧವೆಂದು ಆರೋಪಿಸಲಾಗಿತ್ತು. ಹೀಗಾಗಿ ಇನಾಯತ್ ಉಲ್ಲಾ ಪ್ರಕರಣ ರದ್ದು ಕೋರಿ ಹೈಕೋರ್ಟ್ ಮೊರೆ ಹೋಗಿದ್ದ. ಇನಾಯತ್ ಉಲ್ಲಾ ಸಲ್ಲಿಸಿದ್ದ ಅರ್ಜಿ ಪರಿಶೀಲಿಸಿದ ನ್ಯಾ. ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠ, ''ಅರ್ಜಿದಾರರ ವಿರುದ್ಧ ಆನ್‌ಲೈನ್‌ನಲ್ಲಿ ಮಕ್ಕಳ ಅಶ್ಲೀಲ ದೃಶ್ಯಗಳನ್ನು ನೋಡುತ್ತಿದ್ದರೆಂಬ ಆರೋಪವಿದೆ.

> **''ಅರ್ಜಿದಾರರು ಬಹುಶಃ ಅಶ್ಲೀಲ ದೃಶ್ಯಗಳನ್ನು ನೋಡುವ ಚಟಕ್ಕೆ ದಾಸರಾಗಿರಬಹುದು. ಹಾಗಾಗಿ ಅದನ್ನು ನೋಡಿದ್ದಾರೆನಿಸುತ್ತದೆ. ಅದು ಬಿಟ್ಟರೆ ಅವರ ವಿರುದ್ಧ ಬೇರೆ ಆರೋಪಗಳೂ ಇಲ್ಲ. ಅದಕ್ಕೆ ಸಾಕ್ಷ್ಯವೂ ಇಲ್ಲ. ಒಂದು ವೇಳೆ ಅವರ ವಿರುದ್ಧದ ಕ್ರಿಮಿನಲ್ ಪ್ರಕರಣ ಮುಂದುವರಿಸಿ ಅದು ಕಾನೂನಿನ ದುರ್ಬಳಕೆ ಆಗಲಿದೆ'' ಎಂದು ಪ್ರಕರಣ ರದ್ದುಗೊಳಿಸಿತ್ತು. ಬಳಿಕ ಸರ್ಕಾರದ ಪರ ವಕೀಲರು ಅರ್ಜಿ ಸಲ್ಲಿಸಿದ್ದರು. ಇದೀಗ ಹೈಕೋರ್ಟ್ ಹೊಸದಾಗಿ ಆದೇಶ ಹೊರಡಿಸಿ ತನ್ನ ತಪ್ಪನ್ನು ತಿದ್ದಿಕೊಂಡಿದೆ.**

ಆಶ್ಲೀಲ ದೃಶ್ಯಗಳನ್ನು ನೋಡುವುದು ಪ್ರಸಾರ ಮಾಡುವುದು ಅಥವಾ ಬೇರೆಯವರಿಗೆ ಕಳುಹಿಸಿದಂತಾಗುವುದಿಲ್ಲ. ಹಾಗಾಗಿ ಅದು ಐಟಿ ಕಾಯಿದೆ ಸೆಕ್ಷನ್ 67ರ 'ಬಿ' ವ್ಯಾಪ್ತಿಗೆ ಒಳಪಡುವುದಿಲ್ಲ, ಅಪರಾಧವೂ ಅಲ್ಲ'' ಎಂದು ಹೇಳಿತ್ತು.

# ಬಿಡದಿಗೆ ಮೆಟ್ರೋ ರೈಲು, ಮೊದಲ ಹೆಜ್ಜೆ ಇಟ್ಟ ಬಿಎಂಆರ್‌ಸಿಎಲ್

### ನಮ್ಮ ಮೆಟ್ರೋ ಯೋಜನೆಯನ್ನು ವಿಸ್ತರಣೆ ಮಾಡಲು ಕಾರ್ಯ ಬಿಎಂಆರ್‌ಸಿಎಲ್ ಜುಲೈ 9ರಂದು 1.59 ಕೋಟಿ ರೂ.ಗಳ ಟೆಂಡರ್

• **ಉದಯವಾಹಿನಿ, ಬೆಂಗಳೂರು**

ರಾಮನಗರಕ್ಕೆ ನಮ್ಮ ಮೆಟ್ರೋ ರೈಲು ಸಂಚಾರ ನಡೆಸಲಿದೆ ಎಂಬ ಮಾತು ಹಲವು ದಿನಗಳಿಂದ ಕೇಳಿ ಬರುತ್ತಿದೆ. ಬಿಡದಿಗೆ ಮೆಟ್ರೋ ರೈಲು ಸಂಪರ್ಕ ಕಲ್ಪಿಸುವ ಕುರಿತು ಬಿಎಂಆರ್‌ಸಿಎಲ್ ಮೊದಲ ಹೆಜ್ಜೆ ಇಟ್ಟಿದೆ. ಇದಕ್ಕಾಗಿ ವರದಿ ತಯಾರು ಮಾಡಲು ಟೆಂಡರ್ ಸಹ ಕರೆದಿದೆ. ಬಿಎಂಆರ್‌ಸಿಎಲ್ ಜುಲೈ 9ರಂದು 1.59 ಕೋಟಿ ರೂ.ಗಳ ಟೆಂಡರ್ ಕರೆದಿದೆ. ಒಟ್ಟು ಮೂರು ಮಾರ್ಗದಲ್ಲಿ ನಮ್ಮ ಮೆಟ್ರೋ ಯೋಜನೆಯನ್ನು ವಿಸ್ತರಣೆ ಮಾಡಲು ಕಾರ್ಯಸಾಧ್ಯತೆಯ ಅಧ್ಯಯನ ವರದಿಯನ್ನು ತಯಾರು ಮಾಡಲು ಹೈದರಾಬಾದ್ ಮೂಲದ ಕಂಪನಿಗೆ ಟೆಂಡರ್ ನೀಡಿದೆ.

**ನೂತನ ಮಾರ್ಗ ನಿರ್ಮಾಣ**



ಉದಯವಾಹಿನಿ ಚಿತ್ರ

> **ಬಿಡದಿಯಲ್ಲಿ ಬೃಹತ್ ಕೈಗಾರಿಕಾ ಪ್ರದೇಶವಿದೆ. ಸುಮಾರು 1 ಲಕ್ಷಕ್ಕೂ ಅಧಿಕ ಜನರು ಇಲ್ಲಿ ಕೆಲಸ ಮಾಡುತ್ತಿದ್ದು, ಬೆಂಗಳೂರಿನಿಂದ ಪ್ರತಿದಿನ ಸಂಚಾರ ನಡೆಸುವ ಜನರ ಅನುಕೂಲಕ್ಕಾಗಿ ಮೆಟ್ರೋ ಮಾರ್ಗವನ್ನು ವಿಸ್ತರಿಸುವಂತೆ ಸ್ಥಳೀಯ ಜನಪ್ರತಿನಿಧಿಗಳು ಸರ್ಕಾರವನ್ನು ಒತ್ತಾಯಿಸಿದ್ದರು.**

ಈ ವರ್ಷದ ಫೆಬ್ರವರಿಯಲ್ಲಿ ಬಿಎಂಆರ್‌ಸಿಎಲ್ 50 ಕಿ. ಮೀ. ಮಾರ್ಗದಲ್ಲಿ ನಮ್ಮ ಮೆಟ್ರೋ ಯೋಜನೆ ವಿಸ್ತರಣೆ ಮತ್ತು 68ಕಿ. ಮೀ. ನೂತನ ಮಾರ್ಗ ನಿರ್ಮಾಣದ ಕುರಿತು ಕಾರ್ಯಸಾಧ್ಯತೆಯ ಅಧ್ಯಯನ ವರದಿಯನ್ನು ತಯಾರು ಮಾಡಲು ಟೆಂಡರ್ ಆಹ್ವಾನಿಸಿತ್ತು. ಈಗ ಟೆಂಡರ್ ಅಂತಿಮಗೊಳಿಸಲಾಗಿದೆ.ಬಿಡದಿಗೆ ನಮ್ಮ ಮೆಟ್ರೋ ರೈಲು; ಬಿಎಂಆರ್‌ಸಿಎಲ್ ವರದಿ ಪ್ರಕಾರ ವಿಸ್ತರಿತ ಮಾರ್ಗದಲ್ಲಿ ಚಲ್ಲಘಟ್ಟ-ಬಿಡದಿ (15 ಕಿ. ಮೀ.), ಸಿಲ್ಕ್ ಇನ್ಸಿಟಿಟ್ಯೂಟ್-ಹಾರೋಹಳ್ಳಿ (24 ಕಿ. ಮೀ.), ಬೊಮ್ಮಸಂದ್ರ-ಅತ್ತಿಬೆಲೆ (11 ಕಿ. ಮೀ) ಮಾರ್ಗವಿದೆ. ಕಾಳೇನ ಅಗ್ರಹಾರ-ಕಾಡುಗೋಡಿ ಟ್ರೀ ಪಾರ್ಕ್ ವಯಾ ಜಿಗಣಿ, ಅನೇಕಲ್, ಅತ್ತಿಬೆಲೆ, ಸರ್ಜಾಪುರ ಮತ್ತು ವರ್ತೂರು (52.41 ಕಿ. ಮೀ.) ಹೊಸ ಮಾರ್ಗ ಸೇರಿದೆ.

ಜೂನ್ 29ರಂದು ಹೈದರಾಬಾದ್ ಮೂಲದ ಕಂಪನಿ ತುಮಕೂರಿಗೆ ನಮ್ಮ ಮೆಟ್ರೋ ರೈಲು ಯೋಜನೆ ವಿಸ್ತರಣೆ ಮಾಡುವ ಕುರಿತು 52.41 ಕಿ. ಮೀ. ಕಾರ್ಯಸಾಧ್ಯತೆಯ ಅಧ್ಯಯನ ವರದಿಯನ್ನು ತಯಾರು ಮಾಡಲು ಪ್ರತ್ಯೇಕ ಟೆಂಡರ್ ಪಡೆದಿತ್ತು. ಯಾವುದೇ ಯೋಜನೆಯ ಮೇಲೆ ಹೂಡಿಕೆ ಮಾಡುವ ಮೊದಲು ಕಾರ್ಯಸಾಧ್ಯತೆಯ ಅಧ್ಯಯನ ವರದಿಯನ್ನು ತಯಾರು ಮಾಡಲಾಗುತ್ತದೆ. ಯೋಜನೆಯ ಪ್ರಾಥಮಿಕ ಅಧ್ಯಯನ, ತಾಂತ್ರಿಕ, ಸಾಮಾಜಿಕ, ಆರ್ಥಿಕ ಮುಂತಾದ ಅಂಶಗಳು ಈ ವರದಿಯಲ್ಲಿ ಸೇರಿರುತ್ತವೆ. ಈ ವರದಿ ಅಂತಿಮಗೊಂಡರೆ ಯೋಜನೆಯ ಡಿಪಿಆರ್ ತಯಾರು ಮಾಡಲಾಗುತ್ತದೆ. ಕರ್ನಾಟಕ ಸರ್ಕಾರ ಕಾರ್ಯಸಾಧ್ಯತೆಯ ಅಧ್ಯಯನ ವರದಿಯ ಅನ್ವಯ ಬಿಡದಿಗೆ ನಮ್ಮ ಮೆಟ್ರೋ ಯೋಜನೆ ವಿಸ್ತರಣೆ ಮಾಡಲು ಒಪ್ಪಿಗೆ ನೀಡಲಿದೆ. ಈ ವರದಿಗೆ ಒಪ್ಪಿಗೆ ಸಿಕ್ಕಿದರೆ ಬಿಎಂಆರ್‌ಸಿಎಲ್ ವಿಸ್ತೃತ ಯೋಜನಾ ವರದಿ (ಡಿಪಿಆರ್) ತಯಾರು ಮಾಡಲು ಪ್ರತ್ಯೇಕ ಟೆಂಡರ್ ಕರೆಯಲಿದೆ.2023ರ ನವೆಂಬರ್‌ನಲ್ಲಿ ಬಿಡದಿ ಟೊಯೋಟಾ ಘಟಕದಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪಾಲ್ಗೊಂಡಿದ್ದರು.

> **ಬೆಂಗಳೂರು ನಗರದ ಹೊರವಲಯಕ್ಕೂ ಕೈಗಾರಿಕೆ, ಹೂಡಿಕೆಗಳನ್ನು ಆಕರ್ಷಿಸಲು ಸರ್ಕಾರ ಪ್ರಯತ್ನ ನಡೆಸುತ್ತಿದೆ. ಬಿಡದಿಯನ್ನು ಕೈಗಾರಿಕಾ ಹಬ್ ಆಗಿ ಪರಿವರ್ತನೆ ಮಾಡಿ ಬೆಂಗಳೂರು ನಗರದ ಮೇಲಿರುವ ಒತ್ತಡ ಕಡಿಮೆ ಮಾಡಲು ಮುಂದಾಗಿದೆ. ಇದೇ ಮಾದರಿಯಲ್ಲಿ ಬಿಎಂಆರ್‌ಸಿಎಲ್ ಸಹ ಹೊರ ವಲಯಕ್ಕೆ ಮೆಟ್ರೋ ಸಂಪರ್ಕ ವಿಸ್ತರಣೆ ಮಾಡುವ ಚಿಂತನೆ ನಡೆಸುತ್ತಿದೆ.**

ಆಗ ಅವರು ಬಿಡದಿ ತನಕ ನಮ್ಮ ಮೆಟ್ರೋ ರೈಲು ಯೋಜನೆ ವಿಸ್ತರಣೆ ಮಾಡುವ ಕುರಿತು ಮಾತನಾಡಿದ್ದರು. ನಮ್ಮ ಮೆಟ್ರೋ ಯೋಜನೆ ವಿಸ್ತರಣೆ ಮಾಡಲು ಬಿಎಂಆರ್ ಸಿಎಲ್ ಈಗಾಗಲೇ ಎರಡು ಪ್ಯಾಕೇಜ್‌ಗಳನ್ನು ಘೋಷಣೆ ಮಾಡಿದೆ. ಮೊದಲ ಹಂತದಲ್ಲಿ 50 ಕಿ. ಮೀ. ಉದ್ದದ ಮೂರು ಕಾರಿಡಾರ್, 2ನೇ ಹಂತದಲ್ಲಿ ಒಟ್ಟು 60 ಕಿ. ಮೀ. ಪ್ಯಾಕೇಜ್ ನಿರ್ಮಾಣ ಸೇರಿದೆ. ಬೆಂಗಳೂರು ನಗರದಿಂದ ಪ್ರತಿನಿತ್ಯ ಸಾವಿರಾರು ಜನರು ಬಿಡದಿಗೆ ಪ್ರಯಾಣಿಸುತ್ತಾರೆ. ಈಗಾಗಲೇ ಸರ್ಕಾರ ಬಿಡದಿ ಯೋಜನಾ ಪ್ರಾಧಿಕಾರವನ್ನು ಬದಲಾವಣೆ ಮಾಡಿ, ಬೃಹತ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಎಂದು ಮರುನಾಮಕರಣ ಮಾಡಿದೆ. ಇದರ ಜೊತೆಗೆ ಬಿಡದಿಯ ಅಭಿವೃದ್ಧಿಗೆ ಹಲವು ಯೋಜನೆಗಳನ್ನು ರೂಪಿಸುತ್ತಿದೆ. ನಮ್ಮ ಮೆಟ್ರೋ ಸಂಪರ್ಕ ಬಿಡದಿಗೆ ಅಗತ್ಯವಿದೆಯೇ? ಅಥವಾ ಇಲ್ಲವೇ? ಎಂಬುದರ ಕುರಿತು ಸಮೀಕ್ಷೆಯನ್ನು ನಡೆಸಲಾಗುತ್ತದೆ. ನಂತರ ರಾಜ್ಯ ಸರ್ಕಾರಕ್ಕೆ ಬಿಎಂಆರ್ ಸಿಎಲ್ ಪ್ರಸ್ತಾವನೆ ಕಳುಹಿಸಲಿದೆ.

# ಅನ್ನದಾತರ ಮನಗೆದ್ದ 'ಮಂಡ್ಯ ಜ್ಯೋತಿ' ಭತ್ತದ ತಳಿ

## ಕಡಿಮೆ ನೀರು, ಹೆಚ್ಚು ಇಳುವರಿ ಮತ್ತು ರೋಗನಿರೋಧಕ ಶಕ್ತಿ ಅಧಿಕವಾಗಿರುವ ಸುಧಾರಿತ ಹೊಸ ಭತ್ತದ ತಳಿ

• ಉದಯವಾಹಿನಿ ಮಂಡ್ಯ

ಕಡಿಮೆ ನೀರು, ಹೆಚ್ಚು ಇಳುವರಿ ಮತ್ತು ರೋಗನಿರೋಧಕ ಶಕ್ತಿ ಅಧಿಕವಾಗಿರುವ ಸುಧಾರಿತ ಹೊಸ ಭತ್ತದ ತಳಿಗಳನ್ನು ಬೆಂಗಳೂರು ಕೃಷಿ ವಿಶ್ವವಿದ್ಯಾಲಯ ರೈತರಿಗೆ ಪರಿಚಯಿಸಿದೆ.

ಈ ತಳಿಗಳ ಮಹತ್ವ ಅರಿತ ರೈತರು ಬೆಳೆಯಲು ಉತ್ಸಾಹ ತೋರುತ್ತಿದ್ದಾರೆ. ಮಂಡ್ಯ ಜ್ಯೋತಿ (ಕೆ.ಎಂ.ಪಿ.-220), ಕೆ.ಎಂ.ಪಿ.-225, ಆರ್.ಎನ್.ಆರ್-15048, ಕೆ.ಎಂ.ಪಿ.-175 (ದಕ್ಷ) ಈ ನಾಲ್ಕು ಸುಧಾರಿತ ತಳಿಗಳನ್ನು ಕೃಷಿ ವಿ.ವಿ ಅಭಿವೃದ್ಧಿಪಡಿಸಿದೆ.

**ರೈತರ ಮನ ಗೆಲ್ಲುವಲ್ಲಿ ದಾಪುಗಾಲು**

ಭತ್ತವು ರಾಜ್ಯದ ನೀರಾವರಿ ಪ್ರದೇಶಗಳಲ್ಲಿ ಬೆಳೆಯಲಾಗುತ್ತಿರುವ ಒಂದು ಪ್ರಮುಖ ಆಹಾರ ಬೆಳೆ. ರಾಜ್ಯದ ದಕ್ಷಿಣ ಜಿಲ್ಲೆಗಳ ಮೈದಾನ ಪ್ರದೇಶಕ್ಕೆ ಬಿತ್ತನೆ ಕಾಲ, ನೀರಿನ ಲಭ್ಯತೆ, ಕೀಟ ಹಾಗೂ ರೋಗದ ತೀವ್ರತೆ ಮತ್ತು ಮಣ್ಣಿನ ಗುಣಲಕ್ಷಣಗಳನ್ನು ಗಮನದಲ್ಲಿಟ್ಟುಕೊಂಡು ಅಧಿಕ ಇಳುವರಿ ನೀಡುವ ತಳಿಗಳು ಹಾಗೂ ಹೈಬ್ರಿಡ್‌ಗಳನ್ನು ರೈತರಿಗೆ ಪರಿಚಯಿಸಲಾಗಿದೆ. ಹಳೇ ಮೈಸೂರು ಭಾಗ ವಾದ ಮಂಡ್ಯ, ಮೈಸೂರು, ಹಾಸನ ಹಾಗೂ ಚಾಮರಾಜನಗರ ಜಿಲ್ಲೆಗಳ ಕೆಲವು ಭಾಗಗಳಲ್ಲಿ ಕೆಂಪು ಅಕ್ಕಿ ಭತ್ತದ ತಳಿಯಾದ ಜ್ಯೋತಿ ಭತ್ತ'ವನ್ನು ರೈತರು ಬೆಳೆಯುತ್ತಾರೆ. ಈ ತಳಿಯು ಅನೇಕ ರೋಗಗಳಿಗೆ ತುತ್ತಾಗುತ್ತಿರುವುದರಿಂದ ರೋಗ ನಿಯಂತ್ರಿಸಲು ಹೆಚ್ಚಿನ ರಾಸಾಯನಿಕ ಔಷಧಗಳನ್ನು ಬಳಸುವ ಮೂಲಕ ಅಧಿಕ ಖರ್ಚು ಮಾಡಿ ಭತ್ತವನ್ನು ಬೆಳೆಯಲಾಗುತ್ತಿದೆ. ಇದನ್ನು ಮನಗಂಡ ಕೃಷಿ ವಿಜ್ಞಾನಿಗಳು, ಜ್ಯೋತಿ ಭತ್ತದ ತಳಿಯಲ್ಲಿ ಬೆಂಕಿರೋಗ ನಿರೋಧಕತೆಯನ್ನು ಉತ್ತಮಪಡಿಸಿ, ಜ್ಯೋತಿ ತಳಿಯ ಕಾಳುಗಳನ್ನು ಹೋಲುವಂತಹ ಕೆಂಪು ಅಕ್ಕಿ ಭತ್ತದ ತಳಿಯಾದ ಮಂಡ್ಯ ಜ್ಯೋತಿ (ಕೆ.ಎಂ.ಪಿ.-220) ಅನ್ನು ಬಿಡುಗಡೆ ಮಾಡಿದ್ದಾರೆ. ಈ ತಳಿಯು ರೈತರ ಮನ ಗೆಲ್ಲುವಲ್ಲಿ ದಾಪುಗಾಲು ಇಟ್ಟಿದೆ.

ಐ.ಆರ್.-64 ಎಂಬ ಭತ್ತದ ತಳಿಯು ಕರ್ನಾಟಕದಲ್ಲಿ ಅಲ್ಲದೇ ದೇಶದಾದ್ಯಂತ ಹೆಚ್ಚು ಜನಪ್ರಿಯವಾದ ಹಾಗೂ ಹಳೆ ತಳಿಯಾಗಿದೆ. ಬಿಡುಗಡೆಗೊಂಡಾಗ ರೋಗ ನಿರೋಧಕತೆಯನ್ನು ಹೊಂದಿದ್ದ ಐ.ಆರ್.-64 ಭತ್ತದ ತಳಿಯು ಕಳೆದ ಸುಮಾರು ವರ್ಷಗಳಿಂದ ತನ್ನ ರೋಗ ನಿರೋಧಕತೆಯನ್ನು ಕಳೆದುಕೊಂಡು ಬೆಂಕಿರೋಗಕ್ಕೆ ತುತ್ತಾಗುತ್ತಿದೆ.ಐ.ಆರ್.-64 ಅನ್ನು ಹೋಲುವ ಹಾಗೂ ಬೆಂಕಿರೋಗ ನಿರೋಧಕತೆಯುಳ್ಳ ಹೊಸ ಭತ್ತದ ತಳಿ 'ಕೆ.ಎಂ.ಪಿ.-225' ಅನ್ನು ಬೆಳೆದು ಬೆಂಕಿರೋಗದಿಂದಾಗುವ ನಷ್ಟದಿಂದ ಪಾರಾಗಬಹುದು


ಉದಯವಾಹಿನಿ ಚಿತ್ರ

**ಹೊಸ ಭತ್ತದ ತಳಿಗಳನ್ನು ಬೆಂಗಳೂರು ಕೃಷಿ ವಿಶ್ವವಿದ್ಯಾಲಯ ರೈತರಿಗೆ ಪರಿಚಯಿಸಿದೆ**

ಎನ್ನುತ್ತಾರೆ ಕೃಷಿ ವಿಜ್ಞಾನಿಗಳು.'ಈ ಎಲ್ಲಾ ಸುಧಾರಿತ ಭತ್ತದ ತಳಿಗಳನ್ನು ಮಂಡ್ಯ, ಮೈಸೂರು, ಹಾಸನ ಹಾಗೂ ಚಾಮರಾಜನಗರ ಜಿಲ್ಲೆಗಳಲ್ಲಿ ಜುಲೈ ತಿಂಗಳ ಮೊದಲ ವಾರದ ನಂತರದಿಂದ ತಿಂಗಳ ಕೊನೆಯೊಳಗೆ ಬಿತ್ತನೆ ಮಾಡಿ ಆಗಸ್ಟ್ ತಿಂಗಳಲ್ಲಿ ನಾಟಿ ಮಾಡಲು ಸೂಕ್ತವಾಗಿರುತ್ತದೆ. ಈ ತಳಿಗಳ ಬಿತ್ತನೆ ಬೀಜಗಳು ಮಂಡ್ಯದ ವಿ.ಸಿ. ಫಾರಂನಲ್ಲಿ ಹಾಗೂ ಕೆಲವು ರೈತರಲ್ಲಿ ದೊರೆಯುತ್ತವೆ' ಎಂದು ಭತ್ತದ ತಳಿ ವಿಜ್ಞಾನಿ ಡಾ.ಸಿ.ಎ. ದೀಪಕ್ ಮಾಹಿತಿ ನೀಡಿದ್ದಾರೆ.

> ತೆಲಂಗಾಣ ಕೃಷಿ ವಿಶ್ವವಿದ್ಯಾನಿಲಯದಿಂದ ಅಭಿವೃದ್ಧಿಗೊಂಡು ದೇಶದಾದ್ಯಂತ ಜನಪ್ರಿಯವಾಗುತ್ತಿರುವ ಭತ್ತದ ತಳಿ ಆರ್.ಎನ್.ಆರ್-15048. ಈ ತಳಿಯ ಕಾಳುಗಳು ಅತಿ ಸಣ್ಣದಾಗಿದ್ದು ಉತ್ತಮ ದರ್ಜೆಯ ಅಕ್ಕಿಯನ್ನು ಹೊಂದಿರುತ್ತದೆ. ವ್ಯಾಪಾರ ಹೊಂದಾಣಿಕೆಯಿರುವ ಈ ತಳಿಯ ಧಾನ್ಯಕ್ಕೆ ಮಾರುಕಟ್ಟೆಯಲ್ಲಿ ಉತ್ತಮ ಬೇಡಿಕೆಯಿದೆ. ಈ ತಳಿಯ ಅಕ್ಕಿಯು ಅತಿ ಕಡಿಮೆ ಗ್ಲೈಸೆಮಿಕ್ ಸೂಚ್ಯಂಕ ಹೊಂದಿರುವ ಕಾರಣ ಮಧುಮೇಹಿಗಳಿಗೆ ಹೃದಯ ಸಂಬಂಧಿ ಸಮಸ್ಯೆಯಿರುವವರಿಗೆ ಹಾಗೂ ದೇಹದ ತೂಕ ಕಡಿಮೆ ಮಾಡಲು ಇಚ್ಛೆಯುಳ್ಳವರು ಬಳಸಲು ಸೂಕ್ತವಾಗಿದೆ
> -ಡಾ.ಸಿ.ಎ. ದೀಪಕ್, ಮಂಡ್ಯದ ವಿ.ಸಿ.ಫಾರಂನ ವಲಯ ಕೃಷಿ ಸಂಶೋಧನಾ ಕೇಂದ್ರದ ಭತ್ತದ ತಳಿ ವಿಜ್ಞಾನಿ

- ಪುಟ್ಟಸ್ವಾಮಿಗೌಡ ಪಟೇಲ್ ರಾಯಸಮುದ್ರ, ಕೆ.ಆರ್.ಪೇಟೆ ತಾಲ್ಲೂಕು.

'ಮಂಡ್ಯ ಜ್ಯೋತಿ' ಭತ್ತದ ತೆನೆ- ಜೆ.ಎಂ. ಕುಮಾರ್ ಪ್ರಗತಿಪರ ರೈತ ಕೆ.ಆರ್. ನಗರ. ಕೃಷಿ ವಿಶ್ವವಿದ್ಯಾಲಯಗಳು ಆವಿಷ್ಕರಿಸಿರುವ ಸುಧಾರಿತ ತಳಿಗಳನ್ನು ಸಬ್ಸಿಡಿ ದರದಲ್ಲಿ ರೈತ ಸಂಪರ್ಕ ಕೇಂದ್ರದಲ್ಲಿ ಮಾರಾಟ ಮಾಡಿದರೆ ರೈತರಿಗೆ ಪ್ರಯೋಜನವಾಗುತ್ತದೆ - ಪುಟ್ಟಸ್ವಾಮಿಗೌಡ ಪಟೇಲ್ ರಾಯಸಮುದ್ರ, ಕೆ.ಆರ್.ಪೇಟೆ ತಾಲ್ಲೂಕು. ಮಂಡ್ಯ ಜ್ಯೋತಿ' -ಪ್ರತಿ ಎಕರೆಗೆ 24 ಕ್ವಿಂಟಲ್ ಇಳುವರಿ ಸಿಕ್ಕಿದೆ. ಈ ಕೆಂಪಕ್ಕಿ ಊಟಕ್ಕೆ ಚೆನ್ನಾಗಿದೆ ಜಾನುವಾರುಗಳಿಗೆ ಉತ್ತಮ ಹುಲ್ಲು ಕೂಡ ಸಿಗುತ್ತದೆ. ಈ ಬಾರಿ ಮೂರು ಎಕರೆಯಲ್ಲಿ ಬೆಳೆಯಲು ಒಟ್ಲು ಬಿಟ್ಟಿದ್ದೇನೆ

ಕೆ.ಎಂ.ಪಿ.-175 (ದಕ್ಷ) ಭತ್ತದ ತಳಿಯು ನೀರಿನ ಲಭ್ಯತೆ ಕಡಿಮೆಯಿರುವಲ್ಲಿ ಹಾಗೂ ಕೊಳವೆಬಾವಿ ಕೃಷಿ ಹೊಂಡಗಳಿಂದ ನೀರು ಹಾಯಿಸಿ ಕಡಿಮೆ ನೀರು ಉಪಯೋಗಿಸಿ ಬೆಳೆಯಲು ಸೂಕ್ತವಾಗಿದೆ. 'ದಕ್ಷ' ಎಂದು ಕರೆಯಲ್ಪಡುವ ಈ ತಳಿಯನ್ನು ಏರೋಬಿಕ್ ಮತ್ತು ಅರೆ ನೀರಾವರಿ ಪದ್ಧತಿಗಳಲ್ಲಿ ಬೆಳೆಯಲು ಅಭಿವೃದ್ಧಿಪಡಿಸಲಾಗಿದೆ. ಮಣ್ಣಿನಗುಣಕ್ಕೆ ಅನುಗುಣವಾಗಿ 6-7 ದಿನಗಳಿಗೊಮ್ಮೆ ನೀರು ನೀಡಿ ನೀರು ನಿಲ್ಲಿಸದೆ ಭತ್ತವನ್ನು ಬೆಳೆಯಬಹುದಾಗಿದೆ. ಈ ತಳಿಯು 115 ರಿಂದ 120 ದಿನಗಳಲ್ಲಿ ಕಟಾವಿಗೆ ಬರುವ ಅಲ್ಪಾವಧಿ ತಳಿಯಾಗಿರುತ್ತದೆ. ಎಕರೆಗೆ 16 ರಿಂದ 18 ಕ್ವಿಂಟಲ್ ಧಾನ್ಯದ ಇಳುವರಿ ನೀಡುವ ಸಾಮರ್ಥ್ಯ ಹೊಂದಿದೆ.

## ಕಾವೇರಿಯಲ್ಲಿ ಪ್ರವಾಹ: ಆಶ್ರಮದಿಂದ 8 ಮಂದಿ ಹೊರಕ್ಕೆ

• ಉದಯವಾಹಿನಿ ಶ್ರೀರಂಗಪಟ್ಟಣ

ಕಾವೇರಿ ನದಿಯಲ್ಲಿ ಪ್ರವಾಹ ಪರಿಸ್ಥಿತಿ ಉಂಟಾಗಿರುವ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಕುಮಾರ ನೇತೃತ್ವದ ತಂಡ ತಾಲ್ಲೂಕಿನ ವಿವಿಧೆಡೆ ನದಿ ತೀರಗಳಿಗೆ ಭೇಟಿ ನೀಡಿ ಪರಿಸ್ಥಿತಿಯ ಅವಲೋಕನ ನಡೆಸಿತು. ಜಲಾಶಯದ ತಗ್ಗಿನಲ್ಲಿರುವ ಬೆಳಗೊಳ ಸಮೀಪದ ಪ್ರವಾಸಿ ತಾಣಗಳಾದ ಬಲಮುರಿ ಮತ್ತು ಎಡಮುರಿ ಫಾಲ್ಸ್‌ಗಳಿಗೆ ಅಧಿಕಾರಿಗಳು ತೆರಳಿ ಪರಿಶೀಲನೆ ನಡೆಸಿದರು.

ಬಲಮುರಿ ಬಳಿ ಇದ್ದ ಎಲ್ಲಾ ಅಂಗಡಿಗಳನ್ನು ಮುಚ್ಚುವಂತೆ ಜಿಲ್ಲಾಧಿಕಾರಿ ಸೂಚಿಸಿದರು. ಬೆಳಗೊಳ ಬಳಿ ಕಾವೇರಿ ನದಿಯ ನಡುಗಡ್ಡೆಯಲ್ಲಿರುವ ಭಂ ಭಂ ಆಶ್ರಮದಲ್ಲಿ ಇರುವವರನ್ನು ಸಂಪರ್ಕಿಸಿ ನಡುಗಡ್ಡೆಯಿಂದ ಹೊರಕ್ಕೆ ಬರುವಂತೆ ತಿಳಿಸಿದರು.

ಆಶ್ರಮದಲ್ಲಿ ಇದ್ದ 18 ಮಂದಿಯ ಪೈಕಿ 8 ಮಂದಿಯನ್ನು ಹೊರಕ್ಕೆ ಕರೆಸಿದರು. ಉಳಿದವರನ್ನೂ ಈಚೆಗೆ ಕರೆಸಿ ಎಂದು ಸ್ಥಳೀಯ ಅಧಿಕಾರಿಗಳಿಗೆ ಸೂಚಿಸಿದರು. ಅಲ್ಲಿಂದ ಕಾರೇಕುರ ಬಳಿಗೆ ತೆರಳಿದ ಅಧಿಕಾರಿಗಳು ನದಿಯ ತೀರಕ್ಕೆ ಹೋಗದಂತೆ ರೈತರಿಗೆ


ಉದಯವಾಹಿನಿ ಚಿತ್ರ

ಸೂಚಿಸಿದರು. ಪಟ್ಟಣ ಸಮೀಪದ ಪಶ್ಚಿಮವಾಹಿನಿ ತಾಣಕ್ಕೂ ಭೇಟಿ ನೀಡಿದ ಅಧಿಕಾರಿಗಳ ತಂಡ ನದಿ ದಡದಲ್ಲಿರುವ ದೇವಾಲಯ ಮತ್ತು ಮನೆಗಳ ಬಗ್ಗೆ ಮಾಹಿತಿ ಪಡೆಯಿತು. ಪಶ್ಚಿಮವಾಹಿನಿಯಲ್ಲಿ ಅಸ್ಥಿ ವಿಸರ್ಜನೆ ಇತರ ಕಾರ್ಯಗಳನ್ನು ಪ್ರವಾಹ ಪರಿಸ್ಥಿತಿ ತಗ್ಗುವವರೆಗೆ ಸ್ಥಗಿತಗೊಳಿಸುವಂತೆ ಹೇಳಿದರು.

ಪಟ್ಟಣದ ಐತಿಹಾಸಿಕ ವೆಲ್ಲೆಸ್ಲಿ ಸೇತುವೆ ಸ್ಥಳಕ್ಕೆ ತೆರಳಿದ ಜಿಲ್ಲಾಧಿಕಾರಿ ಇತರರ ಅಧಿಕಾರಿಗಳ ತಂಡ ಪರಿಶೀಲನೆ ನಡೆಸಿತು. ರಾಂಪುರ ಬಳಿಯ ಗೌತಮ ಕ್ಷೇತ್ರ ದ್ವೀಪದಲ್ಲಿರುವ ಗಜಾನನ ಸ್ವಾಮೀಜಿ ಅವರಿಗೆ ಹೊರಗೆ ಬರುವಂತೆ ನೋಟಿಸ್ ನೀಡಲಾಗಿದೆ ಎಂದು ಕಂದಾಯ ನಿರೀಕ್ಷಕ ಭಾಸ್ಕರ್ ತಿಳಿಸಿದರು.

## ಸರ್ಕಾರಿ ಶಾಲೆಗಳಲ್ಲಿ ದಾಖಲಾತಿ ಕುಸಿತ: 81 ಏಕೋಪಾಧ್ಯಾಯ ಶಾಲೆ

• ಉದಯವಾಹಿನಿ ಕುಣಿಗಲ್

ತಾಲ್ಲೂಕಿನ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ದಾಖಲಾತಿ ಗಣನೀಯವಾಗಿ ಕುಸಿಯುತ್ತಿದ್ದು, ಏಕೋಪಾಧ್ಯಾಯ ಶಾಲೆಗಳು ಹೆಚ್ಚಾಗುತ್ತಿದೆ. ತಾಲ್ಲೂಕಿನಲ್ಲಿ 199 ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳಿದ್ದು, ಅವುಗಳಲ್ಲಿ 81 ಏಕೋಪಾಧ್ಯಾಯ ಶಾಲೆಗಳು. ಅದರಲ್ಲೂ 81 ಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆ 5ಕ್ಕಿಂತ ಕಡಿಮೆ.

ಕರೆಕಲ್ಲುಪಾಳ್ಯ, ಸಿದ್ದಯ್ಯನಕೆರೆ, ನಿಂಗಿಕೊಪ್ಪಲು, ತೆಪ್ಪಸಂದ್ರ, ಎಸ್.ಕೆ. ಜನತಾ ಕಾಲೊನಿ ಶಾಲೆಗಳಲ್ಲಿ ಕೇವಲ ಇಬ್ಬರು ವಿದ್ಯಾರ್ಥಿಗಳಿದ್ದಾರೆ. ಸಿ.ಟಿ.ಪಾಳ್ಯ, ಬೂದಾನಹಳ್ಳಿ, ಕೋಘಟ್ಟ, ಕನ್ನಗುಣಿ, ಅರ್ಜುನಹಳ್ಳಿ, ಹುನುಗನಹಳ್ಳಿ, ತೊರೆ ಬೊಮ್ಮನಹಳ್ಳಿ, ನರಜನಕುಪ್ಪೆ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಮೂರು ಮಾತ್ರ. ಉಳಿದೆಡೆ ವಿದ್ಯಾರ್ಥಿಗಳ ಸಂಖ್ಯೆ 5ರಿಂದ 10. ಏಕೋಪಾಧ್ಯಾಯ ಶಾಲೆಗಳಿಂದ ಪ್ರಾಮಾಣಿಕಾಗಿ ಕರ್ತವ್ಯ ನಿರ್ವಹಿಸುವ ಶಿಕ್ಷಕರಿಗೆ ಅಗತ್ಯ ವಿದ್ಯಾರ್ಥಿಗಳಿಲ್ಲದಿರುವುದು ಕೊರಗಾಗಿದೆ.


ಉದಯವಾಹಿನಿ ಚಿತ್ರ

> ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆಯಾಗುತ್ತಿದ್ದು, ಶಾಲೆ ಉಳಿವಿಗಾಗಿ ಇಂಗ್ಲಿಷ್ ಭೋಧನೆಗೆ ಕ್ರಮ ಕೈಗೊಳ್ಳಬೇಕು. ಗ್ರಾಮ ಪಂಚಾಯಿತಿ, ಹೋಬಳಿವಾರು, ಮಾದರಿ ಶಾಲೆಗಳನ್ನು ಪ್ರಾರಂಭಿಸಬೇಕು
> -ಕೆ.ರಮೇಶ್, ಪುರಸಭೆ ಮಾಜಿ ಸದಸ್ಯ

ಕುಂಟು ನೆಪವೊಡ್ಡಿ ಸರಿಯಾಗಿ ಕಾರ್ಯನಿರ್ವಹಿಸದ ಶಿಕ್ಷಕರಿಗೆ ಇದರಿಂದ ಲಾಭವಾಗುತ್ತಿದೆ ಎನ್ನುವುದು ಪೋಷಕರ ಅಭಿಪ್ರಾಯ. ಬಹುತೇಕ ಏಕೋಪಾಧ್ಯಾಯ ಶಾಲೆಗಳು ಗ್ರಾಮೀಣ ಪ್ರದೇಶದಲ್ಲಿರುವುದರಿಂದ ಬಿಸಿಯೂಟ ಯೋಜನೆಯಲ್ಲಿಯೂ ಹಲವು ಲೋಪಗಳಿವೆ ಎನ್ನುವುದು ಪೋಷಕರ ದೂರು.

ಏಕೋಪಾಧ್ಯಾಯ ಶಾಲೆಗಳಲ್ಲಿ ಶಿಕ್ಷಕರಿಗೂ ಸಮಸ್ಯೆಯಾಗುತ್ತಿದ್ದು, ರಜೆ ಮೇಲೆ ತೆರಳುವ ಮುನ್ನ ಅಧಿಕಾರಿಗಳಿಗೆ ಮಾಹಿತಿ ನೀಡಬೇಕಾದ ಅನಿವಾರ್ಯ ಇದೆ. ಜತೆಗೆ ಪರ್ಯಾಯ ವ್ಯವಸ್ಥೆಗೆ ಕ್ರಮ ತೆಗೆದುಕೊಳ್ಳಬೇಕಿದೆ. ಹೊರೆ ಹೆಚ್ಚಾಗುತ್ತಿದೆ. ಇಲಾಖಾ ತರಬೇತಿ, ಸಭೆಗಳಿಗೆ ಹೋಗಲೇಬೇಕಾದ ಪರಿಸ್ಥಿತಿಯಲ್ಲಿ ತೊಂದರೆಯಾಗುತ್ತಿದ್ದು, ವೃತ್ತಿಯಲ್ಲಿ ಆಸಕ್ತಿ ಕಡಿಮೆಯಾಗುತ್ತಿದೆ ಎಂದು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಮಾಜಿ ಅಧ್ಯಕ್ಷ ಶಿವರಾಮು ಹೇಳಿದರು. ಏಕೋಪಾಧ್ಯಾಯ ಶಾಲೆಗಳು ಸರ್ಕಾರಕ್ಕೆ ಹೊರೆಯಾಗುತ್ತಿವೆ. ಗುಣಮಟ್ಟದ ಶಿಕ್ಷಣ ಮರಿಚಿಕೆಯಾಗುತ್ತಿದ್ದು, ಶೈಕ್ಷಣಿಕ ಪ್ರಗತಿಯ ಹಿತದೃಷ್ಟಿಯಿಂದ ಹೋಬಳಿವಾರು ಮಾದರಿ ಶಾಲೆಗಳನ್ನು ಪ್ರಾರಂಭಿಸಬೇಕು ಎಂದು ಎಚ್. ಎನ್. ನಟರಾಜು ತಿಳಿಸಿದ್ದಾರೆ.

## ಜಿಲ್ಲೆಯಲ್ಲಿ ಗುರಿ ಮುಟ್ಟದ ರಾಜಧನ ಸಂಗ್ರಹ

• ಉದಯವಾಹಿನಿ ಚಿಕ್ಕಬಳ್ಳಾಪುರ

ಜಿಲ್ಲೆಯಲ್ಲಿ ಕಟ್ಟಡ ಕಲ್ಲುಗಣಿಗಾರಿಕೆ, ಗ್ರಾನೈಟ್ ಕಲ್ಲುಗಣಿಗಾರಿಕೆ, ಮರಳು ಗಣಿಗಾರಿಕೆ ಹೀಗೆ ವಿವಿಧ ರೀತಿಯ ಗಣಿಗಾರಿಕೆಗಳು ದೊಡ್ಡ ಪ್ರಮಾಣದಲ್ಲಿ ನಡೆಯುತ್ತವೆ. ಗಣಿ ಮಾಲೀಕರು ಸರ್ಕಾರಕ್ಕೆ ರಾಜಧನ ಸಹ ಪಾವತಿಸುವರು. ಸರ್ಕಾರ ಸಹ ಪ್ರತಿ ವರ್ಷ ಜಿಲ್ಲೆಯ ಗಣಿ ಮತ್ತು ಭೂ ವಿಜ್ಞಾನ ಇಲಾಖೆಗೆ ವಾರ್ಷಿಕ ರಾಜಧನ ಸಂಗ್ರಹದ ಗುರಿ ನೀಡುತ್ತದೆ.

ವರ್ಷದಿಂದ ವರ್ಷಕ್ಕೆ ರಾಜಧನ ಸಂಗ್ರಹದ ಗುರಿಯಲ್ಲಿ ವ್ಯತ್ಯಾಸಗಳು ಆಗುತ್ತವೆ.

ಆದರೆ ಕಳೆದ ನಾಲ್ಕು ವರ್ಷಗಳಿಂದಲೂ ಜಿಲ್ಲೆಯಲ್ಲಿ ರಾಜಧನ ಸಂಗ್ರಹದ ಗುರಿಯನ್ನು ಇಲಾಖೆಯು ಮುಟ್ಟಿಲ್ಲ. ಗಣಿ ಮಾಲೀಕರು ಕೋಟ್ಯಂತರ ರೂಪಾಯಿ ರಾಜಧನ ಬಾಕಿ ಉಳಿಸಿಕೊಂಡಿದ್ದಾರೆ. ದೊಡ್ಡ ಪ್ರಮಾಣದಲ್ಲಿಯೇ ಬಾಕಿ ಇದೆ. 2020-21ನೇ ಸಾಲಿನಿಂದ 2023-24ನೇ ಸಾಲಿನವರೆಗೆ ಜಿಲ್ಲೆಯಲ್ಲಿ ಸುಮಾರು 154 ಕೋಟಿ ರಾಜಧನ ಸಂಗ್ರಹವು ಬಾಕಿ ಇದೆ. ಇದು ಕೇವಲ ಮೂರ್ನಾಲ್ಕು ವರ್ಷಗಳಿಂದ ಮಾತ್ರ ಬಾಕಿ ಉಳಿಯುತ್ತಿಲ್ಲ. ಇದಕ್ಕೂ ಹಿಂದಿನ


ಉದಯವಾಹಿನಿ ಚಿತ್ರ

> ಜಿಲ್ಲೆಯಲ್ಲಿ ನಿಯಮಗಳನ್ನು ಉಲ್ಲಂಘಿಸಿದ ಗಣಿಗಾರಿಕೆ ನಡೆಸಿದ ಸಂಸ್ಥೆಗಳಿಗೆ ನಿಗದಿತ ರಾಜಧನದ 5 ಪಟ್ಟು ದಂಡ ವಿಧಿಸಲಾಗಿದೆ. ಈ ದಂಡದ ವಿವಾದ ಬಗೆಹರಿದಿಲ್ಲ. ಆ ದಂಡದ ಹಣವೂ ಸೇರಿದ ಕಾರಣ ರಾಜಧನ ಬಾಕಿ ಹೆಚ್ಚಿದೆ ಎಂದು ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಮೂಲಗಳು ತಿಳಿಸುತ್ತವೆ.

ವರ್ಷಗಳಿಂದಲೂ ರಾಜಧನ ಸಂಗ್ರಹದ ಗುರಿ ಪೂರ್ಣವಾಗಿ ಮುಟ್ಟುತ್ತಿಲ್ಲ. 2015-16ರಲ್ಲಿ 27 ಕೋಟಿ ಇದ್ದ ರಾಜಧನ ಬಾಕಿ 2019-20ಕ್ಕೆ 42 ಕೋಟಿ ಮುಟ್ಟಿತ್ತು. 2015-16ರಲ್ಲಿ 27 ಕೋಟಿ, 2016-17ರಲ್ಲಿ 22 ಕೋಟಿ, 2017-18ರಲ್ಲಿ 27 ಕೋಟಿ, 2018-19ರಲ್ಲಿ 51 ಕೋಟಿ ಮತ್ತು 2019-20ರಲ್ಲಿ 42 ಕೋಟಿ ರಾಜಧನ ಬಾಕಿ ಇತ್ತು ಎನ್ನುತ್ತವೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಂಕಿ ಅಂಶಗಳು.

ಒಂದು ಟನ್ ಕಟ್ಟಡ ಕಲ್ಲಿಗೆ 70 ಹಾಗೂ ಗ್ರಾನೈಟ್‌ಗೆ 250ರಿಂದ 350 ದರದಲ್ಲಿ ರಾಜಧನವನ್ನು ಗಣಿ ಮತ್ತು ಭೂ ವಿಜ್ಞಾನ ಇಲಾಖೆಗೆ ಮಾಲೀಕರು ಪಾವತಿಸಬೇಕು. ಪಾವತಿ ಆಗದ ರಾಜಧನ ಮತ್ತೆ ಮುಂದಿನ ವರ್ಷದ ರಾಜಧನದ ಒಟ್ಟಿಗೆ ಸೇರಿ ಬೆಳೆಯುತ್ತಲೇ ಇದೆ.

ಜಿಲ್ಲಾ ಮಟ್ಟದ ಗಣಿ ಸಮಿತಿ ಸಭೆಗಳಲ್ಲಿ, 'ಜಿಲ್ಲೆಯಲ್ಲಿ ಕ್ವಾರಿಗಳಿಂದ ಸರ್ಕಾರಕ್ಕೆ ಬರಬೇಕಾದ ಬಾಕಿ ರಾಜಧನವನ್ನು ಕೂಡಲೇ ವಸೂಲಿ ಮಾಡಬೇಕು. ರಾಜಧನ ಬಾಕಿ ಉಳಿಸಿಕೊಂಡ ಕ್ವಾರಿಗಳಿಗೆ ನೋಟಿಸ್ ನೀಡಿ, ಪರವಾನಿಗೆ ರದ್ದು ಮಾಡಲು ಕ್ರಮ ಕೈಗೊಳ್ಳಬೇಕು ಎಂದು ಸೂಚನೆಗಳನ್ನು ನೀಡಲಾಗುತ್ತದೆ. ಹೀಗಿದ್ದರೂ ರಾಜಧನದ ಬಾಕಿ ಮೊತ್ತ ಮಾತ್ರ ಕರಗುತ್ತಲೇ ಇಲ್ಲ.

## ಶಾಸಕ ಟಿ.ಬಿ.ಜಯಚಂದ್ರಗೆ 'ಗೌರವ ಡಾಕ್ಟರೇಟ್' ಪ್ರದಾನ


ಉದಯವಾಹಿನಿ ಚಿತ್ರ

• ಉದಯವಾಹಿನಿ ಚಿಕ್ಕಬಳ್ಳಾಪುರ

ಇಂದು ಚಿಕ್ಕಬಳ್ಳಾಪುರ ಜಿಲ್ಲೆಯ ಮುದ್ದೇನಹಳ್ಳಿಯ ಶ್ರೀ ಸತ್ಯ ಸಾಯಿ ಪ್ರೇಮಾಮೃತ ಸಭಾಂಗಣದಲ್ಲಿ ನಡೆದ ಸತ್ಯ ಸಾಯಿ ಸಮೂಹ ಸಂಸ್ಥೆಗಳ ವಾರ್ಷಿಕ ಘಟಿಕೋತ್ಸವ ಸಮಾರಂಭದಲ್ಲಿ ಸುಮಾರು ಐದು ದಶಕಗಳ ಕಾಲ ಸಾರ್ವಜನಿಕ ಕ್ಷೇತ್ರದಲ್ಲಿ ಸೇವೆ ಮಾಡಿರುವ ಸಾಧನೆಗೆ ಕರ್ನಾಟಕ ಸರ್ಕಾರದ ದೆಹಲಿ ವಿಶೇಷ ಪ್ರತಿನಿಧಿ ಹಾಗೂ ಶಿರಾ ಕ್ಷೇತ್ರದ ಜನಪ್ರಿಯ ಶಾಸಕರಾದ ಟಿ .ಬಿ ಜಯಚಂದ್ರ ರವರು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಖಾತೆ ಸಚಿವ ಹರಿದೀಪ್ ಸಿಂಗ್ ಪುರಿ ಅವರಿಂದ ಗೌರವ ಡಾಕ್ಟರೇಟ್ ಪದವಿ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಸತ್ಯ ಸಾಯಿ ಸಮೂಹ ಸಂಸ್ಥೆಗಳ ಸಂಸ್ಥಾಪಕರಾದ ಸದ್ಗುರು ಪರಮಪೂಜ್ಯ ಶ್ರೀ ಮಧುಸೂದನ ಸಾಯಿ ಸ್ವಾಮಿಜಿಗಳು, ಕುಲಪತಿ ನರಸಿಂಹಮೂರ್ತಿರವರು, ಉಪಕುಲಪತಿ ಶ್ರೀಕಂಠ ಮೂರ್ತಿ ರವರು ಉಪಸ್ಥಿತರಿದ್ದರು.

ಇನ್ನು ಬರಿ ಟಿ.ಬಿ.ಜಯಚಂದ್ರ ಅಲ್ಲ, ಡಾ.ಟಿ.ಬಿ. ಜಯ ಚಂದ್ರ ದೇಶದಲ್ಲಿ ಪ್ರತಿಷ್ಠಿತ ಸಂಸ್ಥೆಗಳಲ್ಲಿ ಒಂದಾಗಿರುವ ಚಿಕ್ಕಬಳ್ಳಾಪುರ ಜಿಲ್ಲೆಯ ಮುದ್ದೇನಹಳ್ಳಿಯ ಶ್ರೀ ಸತ್ಯ ಸಾಯಿ ಸಮೂಹ ಸಂಸ್ಥೆ ಸಾರ್ವಜನಿಕ ಸೇವೆಯಲ್ಲಿ ಸುಮಾರು ಐದು ದಶಕಗಳ ಕಾಲ ಸಂದಿಸಿರುವ ಸೇವೆಗೆ ಕರ್ನಾಟಕ ಸರ್ಕಾರದ ದೆಹಲಿ ವಿಶೇಷ ಪ್ರತಿನಿಧಿ ಹಾಗೂ ಶಿರಾ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಟಿ.ಬಿ.ಜಯಚಂದ್ರ ರವರಿಗೆ ಗೌರವ ಡಾಕ್ಟರೇಟ್ ಪದವಿ ನೀಡಿ ಗೌರವಿಸಿದೆ. ದಿನಾಂಕ 21-07-2024 ಗುರುವಾರ ಗುರು ಪೂರ್ಣಿಮಾ ದಿನದಂದು ಮುದ್ದೇನಹಳ್ಳಿ ಸತ್ಯ ಸಾಯಿ ಗ್ರಾಮದ ಶ್ರೀ ಸತ್ಯ ಸಾಯಿ ಪ್ರೇಮಾಮೃತ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಇತರೆ 6 ಮಂದಿಯೊಂದಿಗೆ ಟಿ.ಬಿ. ಜಯಚಂದ್ರರವರು ಗೌರವ ಪದವಿ ಸ್ವೀಕರಿಸಿದರು.

ನಿಜಕ್ಕೂ ಇದು ಓರ್ವ ಸಾಧಕನಿಗೆ ಸಂದ ಗೌರವ. ತನ್ನ ಜೀವಮಾನವಿಡೀ ರೈತರು, ನೀರಾವರಿ,ಶಿಕ್ಷಣ, ಕೈಗಾರಿಕಾ ಕ್ಷೇತ್ರದಲ್ಲಿ ಹೆಚ್ಚು ಹೋರಾಟ ಮಾಡಿ ಸಾಕಷ್ಟು ಹೆಸರು ಮಾಡಿ ಬರದ ನಾಡನ್ನು ಬಂಗಾರ ಮಾಡಿದ ಜನನಾಯಕ. ನಿಜಕ್ಕೂ ಧೀಮಂತ ನಾಯಕನಿಗೆ ಸಂದ ಗೌರವವಾಗಿದೆ.

## ಸಮುದಾಯದ ಅಭಿವೃದ್ಧಿಗೆ ಶಕ್ತಿ ಮೀರಿ ಸಹಕಾರ: ಸುಧಾಕರ್

• ಉದಯವಾಹಿನಿ ಚಿಕ್ಕಬಳ್ಳಾಪುರ

ವಹ್ನಿಕುಲ ಕ್ಷತ್ರಿಯ (ತಿಗಳ) ಸಮುದಾಯದ ಅಭಿವೃದ್ಧಿಗೆ ನನ್ನ ಶಕ್ತಿ ಮೀರಿ ಸದಾ ಸಹಕಾರ ನೀಡಲಾಗುವುದು ಎಂದು ಡಾ.ಕೆ. ಸುಧಾಕರ್ ಅವರು ಸಮುದಾಯದವರಿಗೆ ಭರವಸೆ ನೀಡಿದರು.

ದೇವನಹಳ್ಳಿ ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಶುಕ್ರವಾರ ವಹ್ನಿಕುಲ ಕ್ಷತ್ರಿಯ (ತಿಗಳ) ಸಮುದಾಯದಿಂದ ಆಯೋಜಿಸಿದ್ದ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ನೂತನ ಸಂಸದರಾಗಿ ಆಯ್ಕೆಯಾಗಿರುವ ಡಾ.ಕೆ.ಸುಧಾಕರ್ ಅವರಿಗೆ ಅಭಿನಂದನಾ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು. ಭಕ್ತಿಗೆ, ಧೈರ್ಯಕ್ಕೆ ಮತ್ತು ನಂಬಿಕೆಗೆ ವಹ್ನಿಕುಲ ಕ್ಷತ್ರಿಯ (ತಿಗಳ) ಸಮುದಾಯ ಹೆಸರುವಾಸಿಯಾಗಿದೆ. ಇವತ್ತು ದ್ರೌಪತಿ ತಾಯಿಯನ್ನು ಆರಾಧಿಸುವಂತಹ, ಭಕ್ತಿಭಾವದಿಂದ


ಉದಯವಾಹಿನಿ ಚಿತ್ರ

ಪೂಜೆ ಮಾಡುವಂತಹ ಸಮುದಾಯವಾಗಿರುವುದು ನಮ್ಮೆಲ್ಲರ ಹೆಮ್ಮೆಯ ಸಂಗತಿಯಾಗಿದೆ ಎಂದು ನುಡಿದರು.

ಇವತ್ತು ಕರಗವನ್ನು ಹೊರುವ ಸಮುದಾಯ, ಯಾವುದೇ ಧಾರ್ಮಿಕ ಪರಂಪರೆಯನ್ನು ಎಲ್ಲಿ ಕೂಡ ಮೊಟಕಾದಂತೆ ಸಂಪ್ರದಾಯವನ್ನು ಮುಂದುವರೆಸಿಕೊಂಡು ಮುನ್ನಡೆಯುತ್ತಿದೆ. ರೈತರು ಸುಭಿಕ್ಷೆಯಿಂದ ಇರಬೇಕು, ಸರಿಯಾದ ಸಮಯಕ್ಕೆ ಮಳೆ ಬೆಳೆಯಾಗಬೇಕೆಂದು ಕರಗದ ಸಂಪ್ರದಾಯ ಪಾಲಿಸುತ್ತಿದೆ. ಉತ್ತಮ ಮಳೆಯಾಗಿ ಕೆರೆಗಳು ತುಂಬಿ, ನದಿಗಳು ಹರಿಯುತ್ತಿದೆ ಎಂದರು.

> ಸಮುದಾಯಕ್ಕೆ ನಾವು,ನಮ್ಮಿಂದ ಸಮುದಾಯವಲ್ಲ, ಸಮುದಾಯಕ್ಕೆ ನಾವು ಎಂದಾಗಬೇಕು, ನಾವು ಸಮುದಾಯಕ್ಕೆ ಏನೂ ಮಾಡುತ್ತೇವೆ, ಯಾವ ರೀತಿ ನಾವು ಕೆಲಸ ಮಾಡುತ್ತೇವೆ ಎಂಬುದು ಮುಖ್ಯವಾಗಿದೆ. ಸ್ವಾರ್ಥ ಮನೋಭಾವನೆಯನ್ನು ಬಿಡಬೇಕು ಆಗ ಮಾತ್ರ ಸಮುದಾಯ ಅಭಿವೃದ್ಧಿಯತ್ತ ಸಾಗಲಿದೆ -ಸುಧಾಕರ್

ಕಾರ್ಯಕ್ರಮದ ನೇತೃತ್ವದವಹಿಸಿದ್ದ ಅಖಿಲ ಭಾರತೀಯ ಕ್ಷತ್ರಿಯ ಮಹಾಸಭಾದ ರಾಜ್ಯಾಧ್ಯಕ್ಷ ಎಸ್.ಆರ್.ಎಸ್ ಡಾ.ವಿ.ದೇವರಾಜ್ ಮಾತನಾಡಿ, ಸಮುದಾಯದ ಪರವಾಗಿ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ನೂತನ ಸಂಸದರಾಗಿರುವ ಡಾ.ಕೆ.ಸುಧಾಕರ್ ಅವರನ್ನು ಸನ್ಮಾನಿಸಲಾಗುತ್ತಿದೆ. ಜನರ ಸೇವೆ ಮಾಡಲು ಎಲ್ಲರೂ ಅವರಿಗೆ ಮತ್ತಷ್ಟು ಶಕ್ತಿ ತುಂಬಬೇಕಿದೆ ಎಂದರು. ಕಾರ್ಯಕ್ರಮದಲ್ಲಿ ಬುಳ್ಳಹಳ್ಳಿ ಆದಿಪರಾಶಕ್ತಿ ಮಹಾ ಆಶ್ರಮದ ಶ್ರೀ ಬಾಲಯೋಗಿ ಸಾಯಿ ಮಂಜುನಾಥ್ ಮಹಾರಾಜ್ ಶ್ರೀಗಳು ಆಶೀರ್ವಚನ ನೀಡಿದರು. ವೇದಿಕೆಯಲ್ಲಿ ಸಮುದಾಯದ ಮುಖಂಡರನ್ನು ಸನ್ಮಾನಿಸಲಾಯಿತು.

# ರಾಷ್ಟ್ರೀಯ ಹೆದ್ದಾರಿ 209ರ ಬೈಪಾಸ್ ರಸ್ತೆ ಕಾಮಗಾರಿ ಕಿರಿಕಿರಿ

## ಕಾಮಗಾರಿ ಅಪೂರ್ಣಗೊಂಡಿದ್ದು, ಅವೈಜ್ಞಾನಿಕ ಹಾಗೂ ಕಳಪೆ ಕಾಮಗಾರಿಯಿಂದಾಗಿ ವಾಹನಗಳ ಸಂಚಾರಕ್ಕೆ ಕಿರಿಕಿರಿಯಾಗುತ್ತಿದೆ

• ಉದಯವಾಹಿನಿ ಕೊಳ್ಳೇಗಾಲ

ನಗರದ ಸುತ್ತಮುತ್ತ ಹಾದುಹೋಗಿರುವ ರಾಷ್ಟ್ರೀಯ ಹೆದ್ದಾರಿ 209ರ ಬೈಪಾಸ್ ರಸ್ತೆ ಕಾಮಗಾರಿ ಅಪೂರ್ಣಗೊಂಡಿದ್ದು, ಅವೈಜ್ಞಾನಿಕ ಹಾಗೂ ಕಳಪೆ ಕಾಮಗಾರಿಯಿಂದಾಗಿ ವಾಹನಗಳ ಸಂಚಾರಕ್ಕೆ ಕಿರಿಕಿರಿ ಯಾಗುತ್ತಿದೆ ಎಂದು ಗ್ರಾಮಸ್ಥರು ಆರೋಪಿಸುತ್ತಿದ್ದಾರೆ. ಚಾಮರಾಜನಗರದಿಂದ ಆರಂಭವಾದ ಬೈಪಾಸ್ ರಸ್ತೆ ಸಂತೇಮರಹಳ್ಳಿ, ಯಳಂದೂರು, ಕೊಳ್ಳೇಗಾಲ, ಹನೂರು ಮಾರ್ಗವಾಗಿ ಹಾದುಹೋಗಿದ್ದು ಹೆದ್ದಾರಿಯ ಕಾಮಗಾರಿ ಪೂರ್ಣ ಗೊಂಡಿಲ್ಲವಾದರೂ ವಾಹನಗಳ ಸಂಚಾರಕ್ಕೆ ಅವಕಾಶ ನೀಡಲಾಗಿದೆ. ಕಾಮಗಾರಿಯೂ ಕಳಪೆಯಿಂದ ಕೂಡಿದೆ ಎಂದು ರೈತ ಮುಖಂಡರು ದೂರಿದ್ದಾರೆ.

ಕೊಳ್ಳೇಗಾಲ, ಅಗರ, ಮಾಂಬಳ್ಳಿ, ಯಳಂದೂರು, ಸಂತೇಮರಹಳ್ಳಿ ಬೈಪಾಸ್ ರಸ್ತೆಗಳ ಕಾಮಗಾರಿ ಪ್ರಗತಿ ಯಲ್ಲಿದ್ದು, ಈ ಮಾರ್ಗದಲ್ಲಿ ಮುಖ್ಯ ಪಟ್ಟಣಗಳು, 3 ಮುಖ್ಯ ಸೇತುವೆ, 12 ಸಣ್ಣ ಸೇತುವೆ, ರೈಲ್ವೆ ಮೇಲ್ಸೇತುವೆ ಗುರುತಿಸಲಾಗಿದ್ದು ಕಾಮಗಾರಿ ಮಾತ್ರ ಆಮೆಗತಿಯಲ್ಲಿ ಸಾಗುತ್ತಿದೆ. ಇದರಿಂದ ಜನರಿಗೆ ತೊಂದರೆ ಉಂಟಾಗುತ್ತಿದೆ.

> ಬೈಪಾಸ್ ರಸ್ತೆ ನಿರ್ಮಾಣಕ್ಕೆ ರೈತರ ಜಮೀನುಗಳನ್ನು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಪಡೆದುಕೊಂಡಿದ್ದು ಕೆಲ ರೈತರ ಖಾತೆಗೆ ಹಣ ಜಮೆ ಮಾಡಲಾಗಿದೆ. ಇನ್ನೂ ಕೆಲವರಿಗೆ ಇದುವರೆಗೂ ಹಣ ಸಿಕ್ಕಿಲ್ಲ. ಕೆಲವರಿಗೆ ಪರಿಹಾರದ ಅರ್ಧ ಹಣ ತಲುಪಿದೆ. ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರೂ ಗಮನಹರಿಸುತ್ತಿಲ್ಲ. ಹಣ ನೀಡದಿದ್ದರೆ ಕಾನೂನು ಹೋರಾಟ ಮಾಡಲಾಗುವುದು -ನಾಗರಾಜು, ರೈತ

**ಕಾಮಗಾರಿಗೆ ಕೆರೆ ಮಣ್ಣು ಬಳಕೆ:** ಹಂಪಾಪುರ ಗ್ರಾಮದ ಮುಖ್ಯರಸ್ತೆಯ ಸೇತುವೆಗೆ ಅಡಿಪಾಯ ಸರಿಯಾಗಿ ಹಾಕಿಲ್ಲ. ಗುಣಮಟ್ಟವಿಲ್ಲದ ಕಳಪೆ ಮಣ್ಣು ಸುರಿಯಲಾಗಿದೆ ಎಂಬ ದೂರುಗಳು ವ್ಯಾಪಕವಾಗಿವೆ. ಸೇತುವೆಯ ಮೇಲ್ಭಾಗ ದಲ್ಲಿ ಹಳ್ಳಗುಂಡಿಗಳು ಉಂಟಾಗಿ ಮಳೆಯ ನೀರು ನಿಲ್ಲುತ್ತಿದೆ. ಸೇತುವೆಯ ಎರಡು ಕಡೆಗಳಲ್ಲಿ ಸುರಿದಿರುವ ಮಣ್ಣು ಕುಸಿಯುತ್ತಿದೆ.


ಉದಯವಾಹಿನಿ ಚಿತ್ರ

**ನಾಮಫಲಕ ಅಳವಡಿಸಿಲ್ಲ**

ಬೈಪಾಸ್ ರಸ್ತೆಗಳಲ್ಲಿ ನಾಮಫಲಕ ಅಳವಡಿಸಿಲ್ಲ. ರಸ್ತೆ ಉಬ್ಬು ಹಾಕಿಲ್ಲ. ಪಟ್ಟಣ ಪ್ರದೇಶಗಳ ಸುತ್ತಮುತ್ತ ಹೊಲ, ಗದ್ದೆಗಳಲ್ಲಿ ಕೃಷಿಕರು ದುಡಿಯುತ್ತಿದ್ದು, ಫಸಲನ್ನು ಸಾಗಣೆ ಮಾಡಲು, ಜನ, ಜಾನುವಾರುಗಳು ಸುರಕ್ಷಿತವಾಗಿ ಮನೆಗೆ ಹೋಗುವಂತಹ ವ್ಯವಸ್ಥೆ ಕಲ್ಪಿಸಬೇಕು.

ಮಳೆಗಾಲ ಆರಂಭವಾಗಿರುವುದರಿಂದ ಸೇತುವೆ ಎತ್ತರ ದಿನದಿಂದ ದಿನಕ್ಕೆ ಕುಸಿಯ ತೊಡಗಿದೆ. ಉತ್ತಂಬಳ್ಳಿ ಗ್ರಾಮದಿಂದ ನರಿಪುರ ಗ್ರಾಮ ದವರೆಗೆ ಮಾಡಿರುವ ಬೈಪಾಸ್ ರಸ್ತೆಗೆ ಕೆರೆಯ ಮಣ್ಣನ್ನು ಬಳಸಿ ರಸ್ತೆಯನ್ನು ಎತ್ತರಿಸಿದ್ದಾರೆ. ಆದರೆ, ಈ ಮಣ್ಣು ಯೋಗ್ಯವಾಗಿಲ್ಲ. ರಸ್ತೆ ಎತ್ತರವಾಗ ಬೇಕಾದರೆ ಗ್ರಾವೈಲ್ ಮಣ್ಣನ್ನು ಬಳಕೆ ಮಾಡಬೇಕು.

ಆದರೆ, ಗುತ್ತಿಗೆದಾರರು ಹಾಗೂ ಕಾಮಗಾರಿ ನಡೆಸುತ್ತಿರುವವರು ಕೆರೆಯ ಮಣ್ಣನ್ನು ಬಳಸಿದ್ದಾರೆ. ಕೆಳಭಾಗದಲ್ಲಿ ಕೆರೆ ಮಣ್ಣನ್ನು ಬಳಸಿ ಮೇಲ್ಭಾಗದಲ್ಲಿ ಜೇಡಿಮಣ್ಣನ್ನು ಬಳಸುತ್ತಿದ್ದಾರೆ. ಹಾಗಾಗಿ ರಸ್ತೆ ಮಾಡಿದರೂ ಪ್ರಯೋಜನವಿಲ್ಲ. ಎರಡರಿಂದ ಮೂರು ವರ್ಷದ ವರೆಗೆ ಈ ರಸ್ತೆ ಕುಸಿಯುವುದರಲ್ಲಿ ಅನುಮಾನವೇ ಇಲ್ಲ. ಈಗಾಗಲೇ ರಸ್ತೆಯ ಮೇಲೆ ಡಾಂಬಾರು ಹಾಕಿದ್ದು ಬಾರಿ ವಾಹನಗಳು ಓಡಾ ಡಿರುವುದರಿಂದ ರಸ್ತೆಯು ಹಳ್ಳ ಬಿದ್ದಿದೆ. ಜಿಲ್ಲಾಧಿಕಾರಿ ಹಾಗೂ ರಾಷ್ಟ್ರೀಯ ಹೆದ್ದಾರಿ ಅಧಿಕಾರಿಗಳು ರಸ್ತೆಯನ್ನು ಪರಿಶೀಲಿಸಿ, ಗುಣಮಟ್ಟದ ರಸ್ತೆ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ಮುಂದೆ ರೈತ ಸಂಘದಿಂದ ತೀವ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ರೈತ ದಶರಥ್ ಮೂಲಕ ಎಚ್ಚರಿಕೆ ನೀಡಿದರು.

**ಕಾಮಗಾರಿ ಆಮೆಗತಿಯಲ್ಲಿ ಸಾಗುತ್ತಿದೆ**

'ಪ್ರಾಣಿಗಳು ಹೆದ್ದಾರಿ ಹತ್ತದಂತೆ ತಡೆಯುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು. ರಸ್ತೆ ಬದಿಯಲ್ಲಿ ಬಸ್ ತಂಗುದಾಣ, ಶೌಚಾಲಯ, ನೀರು ಮತ್ತಿತರ ಸೌಲಭ್ಯಗಳಿಗೆ ಒತ್ತು ನೀಡಬೇಕು. ಬೈಪಾಸ್ ರಸ್ತೆಯಲ್ಲಿ ಹಲವು ಹಳ್ಳಿಗಳು ಸಿಗಲಿದ್ದು, ಅಲ್ಲಿನ ಜನರ ಸುರಕ್ಷತೆಗೆ ಒತ್ತು ನೀಡಬೇಕು' ಎಂದು ರೈತ ಜೈ ಶಂಕರ್ ಒತ್ತಾಯಿಸಿದರು.

'ಹೆದ್ದಾರಿ ಮೂಲಕ ಚಾಮರಾಜನಗರದಿಂದ ಕೊಳ್ಳೇಗಾಲಕ್ಕೆ 40 ಕಿ.ಮೀ. ಅಂತರವನ್ನು ಕೇವಲ 30ರಿಂದ 35 ನಿಮಿಷದಲ್ಲಿ ತಲುಪಬಹುದು. ಬಸ್, ಕಾರು ಮತ್ತು ದ್ವಿ ಚಕ್ರವಾಹನಗಳಲ್ಲಿ ಸಂಚರಿಸಿದರೆ ಸಮಯ ಮತ್ತು ಇಂಧನ ಉಳಿತಾಯ ಆಗಲಿದೆ. 100ರಿಂದ 150 ಕಿ.ಮೀ ವೇಗದಲ್ಲಿ ವಾಹನ ಚಲಾಯಿಸುವವರು ಈ ಮಾರ್ಗವನ್ನು ಆಯ್ಕೆ ಮಾಡಿಕೊಳ್ಳುತ್ತಾರೆ. ಇದರಿಂದ ವ್ಯಾಪಾರ-ವ್ಯವಹಾರ, ಉದ್ಯೋಗ, ಶಾಲಾ-ಕಾಲೇಜು, ಆಸ್ಪತ್ರೆಗೆ ಸುಲಭವಾಗಿ ತಲುಪಬಹುದು' ಎಂದು ಪ್ರಯಾಣಿಕ ನಾಗಮಲ್ಲು ತಿಳಿಸಿದರು.

## ಮಿನಿ ನ್ಯೂಸ್

### ಸ್ಮಶಾನ ಸರ್ವೆಗೆ ಮುಂದಾದ ಅಧಿಕಾರಿಗಳು


ಉದಯವಾಹಿನಿ ಚಿತ್ರ

• ಉದಯವಾಹಿನಿ ಮುಳಬಾಗಿಲು

ತಾಲ್ಲೂಕಿನ ನಂಗಲಿ ಗ್ರಾಮದ ಸ್ಮಶಾನ ಸ್ಥಳ ಸರ್ವೆ ನಡೆಸಿ ಹಿಂದೂ ರುದ್ರಭೂಮಿ ಎಂದು ಪ್ರತ್ಯೇಕ ಖಾತೆ ಮಾಡಬೇಕೆಂದು ಗ್ರಾಮಸ್ಥರು ನೀಡಿದ್ದ ಮನವಿಗೆ ಸ್ಪಂದಿಸಿ ಸರ್ವೆ ಹಾಗೂ ಕಂದಾಯ ಅಧಿಕಾರಿಗಳು ಸ್ಮಶಾನ ಸರ್ವೆ ನಡೆಸಿದರು. ನಂಗಲಿಯಲ್ಲಿ ಸುಮಾರು 2 ಸಾವಿರ ಮನೆ ಹಾಗೂ 10 ಸಾವಿರಕ್ಕಿಂತ ಹೆಚ್ಚು ಜನಸಂಖ್ಯೆಯಿದ್ದು, ವಿಸ್ತಾರ ವಾದ ಸ್ಮಶಾನ ಭೂಮಿ ಇದ್ದರೂ ದಾಖಲೆಗಳಲ್ಲಿ ಸ್ಮಶಾನ ಎಂದು ತೋರಿಸುತ್ತಿರಲಿಲ್ಲ.

ಹಾಗಾಗಿ ಗ್ರಾಮಸ್ಥರು ಜುಲೈ 17 ರಂದು ಗ್ರೇಡ್ 2 ತಹಶೀಲ್ದಾರ್ ಬಿ.ಆರ್. ಮುನಿವೆಂಕಟಪ್ಪರಿಗೆ ಮನವಿ ಸಲ್ಲಿಸಿದ್ದರು. ಸ್ಮಶಾನ ಜಾಗ ಖಾತೆಗೆ ಮನವಿ' ಎಂಬ ಶೀರ್ಷಿಕೆ ಅಡಿಯಲ್ಲಿ ಸುದ್ದಿ ಪ್ರಕಟವಾಗಿತ್ತು. ಇದಕ್ಕೆ ಸ್ಪಂದಿಸಿದ ಅಧಿಕಾರಿಗಳು ಸರ್ವೆ ನಡೆಸಿದ್ದಾರೆ.

### ವೈದ್ಯರ ಕೊರತೆ ನೀಗಿಸದಿದ್ದಲ್ಲಿ ಪ್ರತಿಭಟನೆ

• ಉದಯವಾಹಿನಿ ವಿರಾಜಪೇಟೆ

ತಾಲ್ಲೂಕು ಕೇಂದ್ರವಾದ ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ಬಹುತೇಕ ಎಲ್ಲಾ ಸೌಲಭ್ಯಗಳಿದ್ದರೂ ವೈದ್ಯರು ಸೇರಿ ಸಿಬ್ಬಂದಿ ಕೊರತೆಯಿಂದಾಗಿ ಸಾರ್ವಜನಿಕರು ಖಾಸಗಿ ಆಸ್ಪತ್ರೆಗಳತ್ತ ತೆರಳುತ್ತಿದ್ದಾರೆ ಎಂದು ಸಿಪಿಐಎಂ ಘಟಕದ ಕಾರ್ಯದರ್ಶಿ ಶಾಜಿ ರಮೇಶ್ ಹೇಳಿದರು. ಪತ್ರಿಕಾ ಹೇಳಿಕೆ ನೀಡಿದ ಅವರು, 250 ಹಾಸಿಗೆಗಳ ಸರ್ಕಾರಿ ಆಸ್ಪತ್ರೆಗೆ ಅಗತ್ಯ ಸಿಬ್ಬಂದಿ ನೇಮಿಸಲು ಜನಪ್ರತಿನಿಧಿಗಳು ಗಮನಹರಿಸಬೇಕು. ಆಸ್ಪತ್ರೆಯಲ್ಲಿ ಕಾಯಂ ಸ್ತ್ರೀರೋಗ ತಜ್ಞರು ಇಲ್ಲ. ತಜ್ಞ ವೈದ್ಯರ ಹುದ್ದೆಗಳು ಖಾಲಿ ಇವೆ. ಬೆರಳೆಣಿಕೆ ವೈದ್ಯರೇ ಎಲ್ಲಾ ರೋಗಿಗಳನ್ನೂ ಪರೀಕ್ಷಿಸಬೇಕಿದ್ದು, ರೋಗಿಗಳು ವೈದ್ಯರನ್ನು ಭೇಟಿ ಮಾಡಲು ಉದ್ದನೆ ಸಾಲಿನಲ್ಲಿ ನಿಲ್ಲುವ ಸಂಕಷ್ಟ ಅನುಭವಿಸುತ್ತಿದ್ದಾರೆ. ಆಸ್ಪತ್ರೆಯಲ್ಲಿ ಅಂಬುಲೆನ್ಸ್ ಇದ್ದರೂ ಇಲ್ಲದಂತಾಗಿದೆ. ತುರ್ತು ನಿಗಾ ಘಟಕ, ತುರ್ತು ಚಿಕಿತ್ಸಾ ಘಟಕ, ಡಯಾಲಿಸಿಸ್ ಸೆಂಟರ್, ಸ್ಕ್ಯಾನಿಂಗ್, ಎಕ್ಸ್‌ರೇ, ಪ್ರಯೋಗಾಲಯಗಳಲ್ಲಿ ಅಗತ್ಯ ಸಿಬ್ಬಂದಿಗಳಿಲ್ಲ. ಈ ಸಮಸ್ಯೆಗಳನ್ನು ಸರ್ಕಾರ ಬಗೆಹರಿಸದಿದ್ದರೆ ಪ್ರತಿಭಟನೆ ನಡೆಸಲಾಗುವುದು' ಎಂದು ಎಚ್ಚರಿಸಿದರು.

### ಕನ್ನಡದ ಉಳಿವು ನಮ್ಮ ಜವಾಬ್ದಾರಿ


ಉದಯವಾಹಿನಿ ಚಿತ್ರ

• ಉದಯವಾಹಿನಿ ತುಮಕೂರು


ಮಾತೃ ಭಾಷೆ ಕನ್ನಡ ಉಳಿಸಿ, ಬೆಳೆಸುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಜಿಲ್ಲಾ ಉಸ್ತುವಾರಿ ಸಚಿವ ಜಿ.ಪರಮೇಶ್ವರ ಹೇಳಿದರು. ನಗರದ ಜಿಲ್ಲಾಧಿಕಾರಿ ಕಚೇರಿ ಮುಂಭಾಗ 'ಕನ್ನಡ ಜ್ಯೋತಿ ರಥಯಾತ್ರೆ'ಗೆ ಚಾಲನೆ ನೀಡಿ ಮಾತನಾಡಿದರು. ಕನ್ನಡ ಸುಂದರ, ಸಿರಿವಂತ ಭಾಷೆ. ಸುಮಾರು 2 ಸಾವಿರ ವರ್ಷಗಳ ಇತಿಹಾಸ ಹೊಂದಿರುವ ಪ್ರಾಚೀನ ಭಾಷೆ. ಯುವ ಸಮುದಾಯಕ್ಕೆ ಕನ್ನಡ ಭಾಷೆಯ ಹಿರಿಮೆ-ಗರಿಮೆ, ನಾಡು-ನುಡಿ, ನೆಲ-ಜಲ ಸಂರಕ್ಷಣೆಯ ಬಗ್ಗೆ ಪರಿಚಯಿಸುವ ಉದ್ದೇಶದಿಂದ ರಥಯಾತ್ರೆ ಆರಂಭಿಸಲಾಗಿದೆ. ಅನ್ಯ ಭಾಷಿಕರಲ್ಲಿಯೂ ಕನ್ನಡದ ಬಗ್ಗೆ ಅಭಿಮಾನ ಮೂಡಿಸುವ ಪ್ರಯತ್ನವಾಗಿದೆ ಎಂದರು.

ಜಿಲ್ಲಾಧಿಕಾರಿ ಶುಭ ಕಲ್ಯಾಣ್ ರಥಯಾತ್ರೆಯು ಭಾನುವಾರ ಶಿರಾ ತಲುಪಿ, ಜುಲೈ 22ರಂದು ಪಾವಗಡ, 23ರಂದು ಮಧುಗಿರಿ, 24 ರಂದು ಕೊರಟಗೆರೆ ತಾಲ್ಲೂಕಿನ ಹೊಳವನಹಳ್ಳಿಯಲ್ಲಿ ಸಂಚರಿಸಲಿದೆ. ನಂತರ ಚಿಕ್ಕಬಳ್ಳಾಪುರ ಜಿಲ್ಲೆ ಗೌರಿಬಿದನೂರಿಗೆ ಬೀಳ್ಕೊಡಲಾಗುತ್ತದೆ' ಎಂದು ತಿಳಿಸಿದರು. ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಮಹೇಶ್ ಜೋಷಿ, ಜಿಲ್ಲಾ ಅಧ್ಯಕ್ಷ ಕೆ.ಎಸ್.ಸಿದ್ದಲಿಂಗಪ್ಪ, ಜಿ.ಪಂ ಸಿಇಒ ಜಿ.ಪ್ರಭು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ.ಅಶೋಕ್, ಮಹಾನಗರ ಪಾಲಿಕೆ ಆಯುಕ್ತೆ ಬಿ.ವಿ.ಅಶ್ವಿಜ, ಹೆಚ್ಚುವರಿ ಜಿಲ್ಲಾಧಿಕಾರಿ ಶಿವಾನಂದ ಬಿ.ಕರಾಳೆ, ಗೌರವ್‌ಕುಮಾರ್ ಶೆಟ್ಟಿ, ತಹಶೀಲ್ದಾರ್ ಎಂ.ಸಿದ್ದೇಶ್, ಡಿ.ಎಂ.ರವಿಕುಮಾರ್, ಕೆಂಕೆರೆ ಮಲ್ಲಿಕಾರ್ಜುನ್ ಇತರರು ಭಾಗವಹಿಸಿದ್ದರು.

### ಮನಸೂರೆಗೊಳ್ಳುತ್ತಿದೆ ಮಲ್ಲಳ್ಳಿ ಜಲಪಾತ

• ಉದಯವಾಹಿನಿ ಸೋಮವಾರಪೇಟೆ

ತಾಲ್ಲೂಕಿನ ಪುಷ್ಪಗಿರಿ ಮಡಿಲಿನಲ್ಲಿ ಜನ್ಮತಳೆಯುವ ಮುಂಗಾರು ಮಳೆ ಜೋರಾಗಿ ಸುರಿಯುತ್ತಿದ್ದು, ಇದರಿಂದಾಗಿ ಪಶ್ಚಿಮಘಟ್ಟ ಸಾಲಿನ ಮಲ್ಲಳ್ಳಿ ಜಲಪಾತ ಭೋರ್ಗರೆಯುತ್ತ ಧುಮ್ಮಿಕ್ಕುತ್ತಿದೆ. ಜಲಪಾತಕ್ಕೆ ಪ್ರವಾಸಿಗರು ಲಗ್ಗೆ ಇಡುತ್ತಿದ್ದಾರೆ. ಪುಷ್ಪಗಿರಿ ವನ್ಯಜೀವಿ ಅಭಯಾರಣ್ಯದಿಂದ ಪ್ರಾರಂಭವಾಗುವ ಈ ನದಿ, ಸರಾಸರಿ ಸಮುದ್ರ ಮಟ್ಟದಿಂದ 1,600 ಮೀಟರ್ ಎತ್ತರದಿಂದ ತನ್ನ ಹರಿವನ್ನು ಪ್ರಾರಂಭಿಸುತ್ತದೆ. ಪಶ್ಚಿಮಘಟ್ಟಗಳ ಸೊಂಪಾದ ನಿತ್ಯಹರಿದ್ವರ್ಣ ಕಾಡಿನ ಮೂಲಕ ಹಾದುಹೋಗುತ್ತದೆ.


ಉದಯವಾಹಿನಿ ಚಿತ್ರ

ಪುಷ್ಪಗಿರಿ ಪರ್ವದಲ್ಲಿ ಹುಟ್ಟುವ ಲಿಂಗದ ಹೊಳೆ, ಕುಡಿಗಾಣದ ಭಕ್ತಿಹೊಳೆ ಮತ್ತು ಬೀದಳ್ಳಿಯ ಹೊಳೆ ಸೇರಿ ಕುಮಾರಧಾರ ನದಿಯಾಗಿ ಹರಿಯುತ್ತದೆ. ಪುಷ್ಪಗಿರಿಯಲ್ಲಿಯೇ ಒಂದು ಚಿಕ್ಕ ಜಲಪಾತ ಇದ್ದು, ನಂತರ ಸಾಕಷ್ಟು ಚಿಕ್ಕಪುಟ್ಟ ಜಲಪಾತಗಳು ಸೇರಿದಂತೆ, ದೇಶದ ಪ್ರಮುಖ ಜಲಪಾತಗಳಲ್ಲೊಂದಾದ ಮಲ್ಲಳ್ಳಿ ಜಲಪಾತವನ್ನು ಇದು ಸೃಷ್ಟಿಸುತ್ತದೆ. ಇದನ್ನು ದೇಶದೆಲ್ಲೆಡೆಗಳಿಂದ ಪ್ರವಾಸಿಗರು ವರ್ಷಂಪ್ರತಿ ಆಗಮಿಸಿ, ಜಲಪಾತದ ಸೊಬಗನ್ನು ಸವಿಯುತ್ತಿದ್ದಾರೆ. ನಿಸರ್ಗ ರಮಣೀಯತೆಯನ್ನು ತನ್ನೊಡಲ್ಲಿರಿಸಿಕೊಂಡಿರುವ ಪುಷ್ಪಗಿರಿ ಬೆಟ್ಟತಪ್ಪಲಿನಲ್ಲಿ ಹುಟ್ಟುವ ಕುಮಾರಧಾರಾ ನದಿ ಮಲ್ಲಳ್ಳಿ ಗ್ರಾಮದ ಕಲ್ಲು ಬಂಡೆಯಿಂದ ಭೋರ್ಗರೆಯುತ್ತಾ ಧುಮುಕಿ ಜಲಧಾರೆಯಾಗಿ ಪ್ರವಹಿಸುವ ದೃಶ್ಯ ಪ್ರವಾಸಿಗರನ್ನು ಮಂತ್ರಮುಗ್ಧರನ್ನಾಗಿ ಮಾಡುತ್ತಿದೆ. ತಾಲ್ಲೂಕಿನ ಬೆಟ್ಟದಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಲ್ಲಳ್ಳಿ ಎಂಬ ಗ್ರಾಮದಲ್ಲಿ ಮಲ್ಲಳ್ಳಿ ಜಲಪಾತವಿದೆ. ಪಟ್ಟಣದಿಂದ 25 ಕಿ.ಮೀ ಕ್ರಮಿಸಿದರೆ, ಜಲಪಾತ ದರ್ಶನವಾಗುತ್ತದೆ.

ಅಂತರಾಳದಿಂದ.. EDITORIAL

# ಲೆ.ಗವರ್ನರಗೆ ಹೆಚ್ಚು ಅಧಿಕಾರ

## ಚುನಾಯಿತ ಸರ್ಕಾರದ ಮಹತ್ವಕ್ಕೆ ಕುತ್ತು

ಉದಯವಾಹಿನಿ ಚಿತ್ರ



ಕೇಂದ್ರಾಡಳಿತ ಪ್ರದೇಶವಾದ ಜಮ್ಮು ಮತ್ತು ಕಾಶ್ಮೀರದ ಲೆಫ್ಟಿನೆಂಟ್ ಗವರ್ನರ್ಗೆ ಹೆಚ್ಚಿನ ಅಧಿಕಾರ ವನ್ನು ನೀಡಿ ಕೇಂದ್ರ ಸರ್ಕಾರ ಆದೇಶ ಹೊರಡಿಸಿದೆ. ಆದರೆ, ಪ್ರಜಾಸತ್ತಾತ್ಮಕ ವಿಧಾನಗಳ ಮೂಲಕವೇ ಜನರನ್ನು ಸಶಕ್ತಗೊಳಿಸಬೇಕು ಎಂಬ ತತ್ವಕ್ಕೆ ಈ ನಿರ್ಧಾರವು ವಿರುದ್ಧವಾಗಿದೆ. ಜೊತೆಗೆ, ಕಾಶ್ಮೀರಕ್ಕೆ ರಾಜ್ಯದ ಸ್ಥಾನಮಾನ ನೀಡಲಾಗುವುದು ಎಂಬ ಭರವಸೆಯನ್ನು ನಿರ್ಲಕ್ಷಿಸಿದಂತಾಗಿದೆ.

**ಆಡಳಿತವು ಸುಲಲಿತವಾಗಿ ನಡೆಯುವುದಕ್ಕಾಗಿ ನಿಯಮಗಳನ್ನು ಬದಲಾಯಿಸಲಾಗಿದೆ: ಚುನಾಯಿತ ಸರ್ಕಾರ ಮತ್ತು ಲೆಫ್ಟಿನೆಂಟ್ ಗವರ್ನರ್ ಅವರ ಅಧಿಕಾರಗಳೇನು ಎಂಬುದನ್ನು ಸ್ಪಷ್ಟವಾಗಿ ವ್ಯಾಖ್ಯಾನಿಸಲಾಗಿದೆ ಎಂದು ಸರ್ಕಾರ ಹೇಳಿಕೊಂಡಿದೆ. ಆದರೆ, ಸರ್ಕಾರ ಹೇಳಿದಷ್ಟಕ್ಕೆ ಇದು ಸೀಮಿತವಾಗಿ ಇಲ್ಲ. ಈ ತಿದ್ದುಪಡಿಗಳು ಸರ್ಕಾರವನ್ನು ದುರ್ಬಲಗೊಳಿಸಿ. ಲೆಫ್ಟಿನೆಂಟ್ ಗವರ್ನರ್ಗೆ ಅತಿಯಾದ ಅಧಿಕಾರವನ್ನು ಕೊಡುತ್ತವೆ. ದೆಹಲಿ ಸರ್ಕಾರ ಮತ್ತು ಲೆಫ್ಟಿನೆಂಟ್ ಗವರ್ನರ್ ನಡುವೆ ನಿರಂತರವಾಗಿ ನಡೆದ ಜಟಾಪಟಿಯನ್ನು ನಾವು ನೋಡಿದ್ದೇವೆ.**

ಜಮ್ಮು ಮತ್ತು ಕಾಶ್ಮೀರ ಪುನರ್ಸಂಘಟನೆ ಕಾಯ್ದೆ – 2019ರ ನಿಯಮಗಳಿಗೆ ಕೇಂದ್ರವು ತಿದ್ದುಪಡಿ ತಂದಿದೆ.

ಗೃಹ ಇಲಾಖೆಗೆ ಸಂಬಂಧಿಸಿದ ನಿರ್ಧಾರಗಳನ್ನು ಕೈಗೊಳ್ಳುವ ತನಿಖೆಗೆ ಅನುಮತಿ ನೀಡುವ ಅಧಿಕಾರವನ್ನು ಲೆಫ್ಟಿನೆಂಟ್ ಗವರ್ನಗೆ?ರ ನೀಡಲಾಗಿದೆ. ಇದರಿಂದಾಗಿ, ಬೇರೆ ರಾಜ್ಯಗಳಲ್ಲಿ ಇರುವ ರೀತಿಯ ನಿರ್ಧಾರ ಕೈಗೊಳ್ಳುವ ಪ್ರಕ್ರಿಯೆ ಜಮ್ಮು ಕಾಶ್ಮೀರದಲ್ಲಿ ಇರುವುದಿಲ್ಲ. ಸಾಮಾನ್ಯವಾಗಿ ಸಚಿವಾಲಯಗಳು ನಿರ್ಧಾರಗಳನ್ನು ಕೈಗೊಳ್ಳುತ್ತವೆ. ಆದರೆ, ಜಮ್ಮು ಕಾಶ್ಮೀರದಲ್ಲಿ ಪೊಲೀಸ್ ಹಾಗೂ ಕಾನೂನು ಮತ್ತು ಸುವ್ಯವಸ್ಥೆಗೆ ಸಂಬಂಧಿಸಿದ ನಿರ್ಧಾರಗಳನ್ನು ಲೆಫ್ಟಿನೆಂಟ್ ಗವರ್ನರ್ ಅವರೇ ತೆಗೆದುಕೊಳ್ಳಬಹುದು. ಮುಖ್ಯ ಕಾರ್ಯದರ್ಶಿಯು ಇಂತಹ ನಿರ್ಧಾರಗಳಿಗೆ ಲೆಫ್ಟಿನೆಂಟ್ ಗವರ್ನರ್ ಅವರಿಂದ ನೇರವಾಗಿ ಅನುಮತಿ ಪಡೆದುಕೊಳ್ಳಬಹುದು.ಕೇಂದ್ರ ಸರ್ಕಾರವು ಜಮ್ಮು ಮತ್ತು ಕಾಶ್ಮೀರಕ್ಕೆ ಸಂಬಂಧಿಸಿದ ನಿಯಮಗಳಿಗೆ ಎರಡನೆಯ ಬಾರಿ ಅಧಿಸೂಚನೆಯ ಮೂಲಕ ತಿದ್ದುಪಡಿ ಮಾಡಿದೆ. ಇಲ್ಲಿ ವಿಧಾನಸಭೆ ಚುನಾವಣೆ ನಡೆಸಿ ಜನಾದೇಶ ಪಡೆದ ಸರ್ಕಾರವನ್ನು ಸ್ಥಾಪಿಸುವ ಯೋಚನೆ ಇದೆ ಎಂಬುದರ ಹಿನ್ನೆಲೆಯಲ್ಲಿ ಕೇಂದ್ರದ ನಿರ್ಧಾರವನ್ನು ನೋಡಬೇಕಿದೆ. ಸುಪ್ರೀಂ ಕೋರ್ಟ್ ಆದೇಶದ ಪ್ರಕಾರ, ಸೆಪ್ಟೆಂಬರ್ 30ರೊಳಗೆ ಚುನಾವಣೆ ನಡೆಸಬೇಕಿದೆ. ಸಾಮಾನ್ಯವಾಗಿ, ರಾಜ್ಯ ಸರ್ಕಾರಕ್ಕೆ ಇರುವ ಅಧಿಕಾರಗಳನ್ನು ಲೆಫ್ಟಿನೆಂಟ್ ಗವರ್ನರಗೆ ನೀಡುವ ಮೂಲಕ ಚುನಾಯಿತ ಸರ್ಕಾರದ ಮಹತ್ವವನ್ನು ಕೇಂದ್ರವು ಕುಂದಿಸಿದೆ. ಮಹತ್ವದ ವಿಚಾರಗಳ ಕುರಿತಂತೆ ಲೆಫ್ಟಿನೆಂಟ್ ಗವರ್ನರ್ ಅವರು ನಿರ್ಧಾರ ಕೈಗೊಳ್ಳುವ ವ್ಯವಸ್ಥೆಯು ಚುನಾಯಿತ ಸರ್ಕಾರ ಸ್ಥಾಪನೆಯಾದ ಮೇಲೆಯೂ ಮುಂದುವರಿಯಲಿದೆ. ಲೆಫ್ಟಿನೆಂಟ್ ಗವರ್ನರ್ ಅವರು ಕೇಂದ್ರದಿಂದ ನೇಮಕವಾಗಿರುವ, ಕೇಂದ್ರ ಸರ್ಕಾರ ಹೇಳಿದ್ದನ್ನು ಪಾಲಿಸುವವರಾಗಿಯೇ ಇರುತ್ತಾರೆ. ಪ್ರಜಾಸತ್ತಾತ್ಮಕ ಪ್ರಕ್ರಿಯೆ ಮರುಸ್ಥಾಪನೆ ಆಗಬೇಕು ಎಂಬ ಕುರಿತು ಅಲ್ಲಿನ ಜನರು ಕಾತರರಾಗಿದ್ದಾರೆ. ಲೋಕಸಭಾ ಚುನಾವಣೆಯಲ್ಲಿನ ಮತದಾನದ ಪ್ರಮಾಣವೇ ಅದಕ್ಕೆ ಪುರಾವೆಯಾಗಿದೆ. ಹತ್ತು ವರ್ಷಗಳ ಬಳಿಕ ನಡೆಯಲಿರುವುದರಿಂದ ವಿಧಾನಸಭೆ ಚುನಾವಣೆಗೆ ಹೆಚ್ಚಿನ ಮಹತ್ವ ಇದೆ. ಕಾಶ್ಮೀರವನ್ನು ಕೂಡ ಇಂತಹ ಸನ್ನಿವೇಶಕ್ಕೆ ತಳ್ಳುವುದು ಸರಿಯಲ್ಲ, ಪ್ರಜಾಸತ್ತಾತ್ಮಕ ವ್ಯವಸ್ಥೆ ಇಲ್ಲದಿರುವುದು ಮತ್ತು ಕೇಂದ್ರ ಸರ್ಕಾರದ ಮೇಲಿನ ವಿಶ್ವಾಸದ ಕೊರತೆಯು ಕಾಶ್ಮೀರದ ಜನರಲ್ಲಿ ಇರುವ ಅಸಮಾಧಾನಕ್ಕೆ ಕಾರಣ. ಪ್ರಜಾಸತ್ತಾತ್ಮಕ ಪ್ರಕ್ರಿಯೆ ಮತ್ತು ಚುನಾವಣೆ ಎಂಬುದು ಪ್ರಹಸನ ಎಂಬ ಭಾವನೆ ಜನರಲ್ಲಿ ಮೂಡುವಂತೆ ಮಾಡಬಾರದು. ಸರ್ಕಾರದ ಈಗಿನ ನಿರ್ಧಾರದಿಂದಾಗಿ ರಾಜ್ಯದ ಸ್ಥಾನ ಮರುಸ್ಥಾಪನೆಯ ಭರವಸೆ ಬಗ್ಗೆಯೂ ಅನುಮಾನ ಮೂಡುವಂತಾಗಿದೆ. ಏಕೆಂದರೆ, ರಾಜ್ಯ ಸ್ಥಾನ ಮರುಸ್ಥಾಪನೆಗೆ ಸರ್ಕಾರವು ಯಾವುದೇ ಕಾಲಮಿತಿಯನ್ನು ಹಾಕಿಕೊಂಡಿಲ್ಲ. ಈಗಿನ ಬದಲಾವಣೆಯು ಒಕ್ಕೂಟ ವ್ಯವಸ್ಥೆಯಲ್ಲಿ ಕೇಂದ್ರ, ರಾಜ್ಯಗಳ ಸಂಬಂಧದ ಕುರಿತು ಕೆಟ್ಟ ಮತ್ತು ವಿಕೃತ ಮಾದರಿಯೊಂದನ್ನು ರೂಪಿಸಿದೆ.

**ಪ್ರಜಾಸತ್ತಾತ್ಮಕ ಪ್ರಕ್ರಿಯೆ ಮರುಸ್ಥಾಪನೆ**



# ಮಹಾಭಾರತ

## ಶಾಂತಿಪರ್ವ

• ಹಿಂದಿನ ಸಂಚಿಕೆಯಿಂದ

ಮಹರ್ಷಿ, ನಾನು ಸುಖವಾಗಿರುವುದನ್ನು ಪಡೆದು ಬರಲಿಲ್ಲ. ರಾಧೇಯ ನಮ್ಮ ಅಣ್ಣ ಎಂದು ಅಮ್ಮ ಹೇಳಿದೊಡನೆ ಯುದ್ಧದ ಜಯದಿಂದ ನಮ್ಮದಾಗಬಹುದಾಗಿದ್ದ ಸಂತೋಷವೆಲ್ಲ ಹೊರಟುಹೋಯಿತು. ಇಂಥಾದೊಂದು ಘಟಿಸುವುದು ಹೇಗೆ ಸಾಧ್ಯವಾಯಿತು ಯುದ್ಧಕ್ಕೆ ಮುಂಚೆ ಒಮ್ಮೆ ಅವನನ್ನು ಭೇಟಿಯಾಗಿದ್ದೆ ಎಂದು ಅಮ್ಮ ಹೇಳುತ್ತಾಳೆ. ತಮ್ಮಂದಿರೊಟ್ಟಿಗೆ ಬಂದು ಸೇರಿಕೋ ಎಂದು ಕೇಳಿಕೊಂಡಳಂತೆ. ಕೃಷ್ಣನೂ ಕೇಳಿದನಂತೆ; ಆದರೂ ಅವನು ತನ್ನ ಗೆಳೆಯನನ್ನು ಕೈ ಬಿಟ್ಟು ಬರಲೊಲ್ಲ. ರಾಧೇಯನನ್ನು ಅವಲಂಬಿಸಿಯೇ ದುರ್ಯೋಧನನು ಯುದ್ಧವನ್ನಾರಂಭಿಸಿದ್ದು. ರಾಜ, ಯಜಮಾನ, ಗೆಳೆಯ ಮೂರೂ ಆಗಿದ್ದ ಅವನಿಗೆ ದ್ರೋಹ ಬಗೆಯುವ ಸ್ವಭಾವವಲ್ಲ ನನ್ನ ಅಣ್ಣನದು. ಪಾಂಡವರು ತನ್ನ ತಮ್ಮಂದಿರು ಎಂದು ತಿಳಿದಾಗ ಅವನಿಗೆಷ್ಟು ವೇದನೆಯಾಗಿರಬಹುದು ಅದೆಲ್ಲವನ್ನೂ ತನ್ನಲ್ಲಿಯೇ ನುಂಗಿಕೊಂಡ; ಕರ್ತವ್ಯಚ್ಯುತನಾಗಲಿಲ್ಲ. ಇಂಥ ನಮ್ಮಣ್ಣನನ್ನು ನಾವೇ ನಮ್ಮ ಕೈಯಾರೆ ಕೊಂದೆವು. ಅವನು ಸತ್ತಾಗ ನಾನು ಪಟ್ಟ ಸಂತೋಷವೆಷ್ಟು ದ್ವಂದ್ವಯುದ್ಧದ ಸಂದರ್ಭದಲ್ಲಿ ನಾನು ಅವನನ್ನು ಸೂತಪುತ್ರನೆಂದು ಜರಿದೆ. ಅವನು ನನ್ನನ್ನು ಸೋಲಿಸಿ ಅಪಮಾನಿಸಿದ. ನಮ್ಮನ್ನು ಹೀಗೆ ಬೇರ್ಪಡಿಸಿಟ್ಟಿದ್ದ ಇದು ಎಂಥ ವಿಧಿ, ದೇವ ನಾವು ಅವನ ತಮ್ಮಂದಿರು ಎಂದು ಗೊತ್ತಿದ್ದರೂ.ನಮಗೆ ಅದನ್ನು ಹೇಳಲೊಲ್ಲ.

''ಹಸ್ತಿನಾಪುರದ ಆಸ್ಥಾನದಲ್ಲಿನ ಆ ದಿನ ನೆನಪಾಗುತ್ತದೆ. ದ್ರೌಪದಿಯನ್ನು ಎಲ್ಲರೂ ಅಪಮಾನಿಸಿದರು; ಅದರಲ್ಲಿ ರಾಧೇಯನೇ ಮುಂದು. ನಾನು ಕೋಪದಿಂದಲೂ ನಾಚಿಕೆಯಿಂದಲೂ ತಲೆ ತಗ್ಗಿಸಿ ಕುಳಿತಿದ್ದೆ. ಅವನ ಕಡೆಗೆ ತಿರುಗಿದೆ. ದೃಷ್ಟಿ ಮೇಲೆತ್ತಿ ನೋಡಲಿಲ್ಲ; ಪಾದಗಳನ್ನಷ್ಟೇ ನೋಡಿದೆ; ತಕ್ಷಣ ಅವನ ಮೇಲಣ ನನ್ನ ಕೋಪ ಶಮನವಾಯಿತು. ಅನಂತರ ಕೋಪವೇ ಬರಲಿಲ್ಲ. ಅವನ ಪಾದಗಳು ನಮ್ಮಮ್ಮನ ಪಾದಗಳಂತೆಯೇ ಇದ್ದವು. ಇದನ್ನು ನೋಡಿ ನನಗೆ ಆಶ್ಚರ್ಯವಾಗಿತ್ತು. ವರ್ಷಗಟ್ಟಲೆ ಇದನ್ನು ನೆನಪಿಟ್ಟುಕೊಂಡಿದ್ದೇನೆ, ಸಮಸ್ಯೆ ಬಿಡಿಸಲು ಪ್ರಯತ್ನಿಸಿದ್ದೇನೆ: ಸೂತಪುತ್ರನಾದ ರಾಧೇಯನ ಕಾಲುಗಳು ಅಮ್ಮನ ಕಾಲುಗಳನ್ನು ಹೋಲುವುದು ಹೇಗೆ? ಅಯ್ಯೋ ದೇವ, ಆ ಹೋಲಿಕೆ ಇದ್ದದ್ದು ಹೇಗೆ ಎಂದು ಈಗ ತಿಳಿದ ಮೇಲೆ, ನನ್ನ ಹೃದಯ ಸಾವಿರ ಹೋಳಾಗಿ ಒಡೆದುಹೋಗುತ್ತಿದೆ ಕುರುರಾಜ್ಯದ ಸಾಮ್ರಾಟನಾಗಬೇಕಾಗಿದ್ದ ಈ ಮಹನೀಯನನ್ನು, ಈ ನನ್ನಣ್ಣ ರಾಧೇಯನನ್ನು ಕೊಂದಮೇಲೂ ನಾನು ಹೇಗೆ ಸುಖವಾಗಿರಲಿ ನನಗೆ ಎಂದೆಂದಿಗೂ, ಯಾವುದರಿಂದಲೂ ಶಾಂತಿಯಿಲ್ಲ, ಇರಲು ಸಾಧ್ಯವಿಲ್ಲ. ''ಅಮ್ಮ ಹೇಳುತ್ತಾಳೆ, ಅರ್ಜುನನ್ನುಳಿದು ಉಳಿದ ಪಾಂಡವರನ್ನು ಕೊಲ್ಲುವುದಿಲ್ಲ ಎಂದು ಅವನು ತಾನಾಗಿ ತಾನು ಒಂದು ವರ ಕೊಟ್ಟನೆಂದು. ಅರ್ಜುನನೊಂದಿಗೆ ಮಾತ್ರವೇ ಅವನು ನಿಜವಾಗಿ ದ್ವಂದ್ವಯುದ್ಧ ಮಾಡಬೇಕಾಗಿದ್ದುದು.

ಮುಂದುವರಿಯುವುದು...

# ಒಟಿಟಿ ಸಬ್‌ಸ್ಕ್ರಿಪ್ಶನ್ ಮೇಲೆ ಸೆಸ್ ವಿಧಿಸಲು ಮುಂದಾದ ಸರ್ಕಾರ

## ಸಾಂಸ್ಕೃತಿಕ ಕಲಾವಿದರಿಗೆ ಅನುಕೂಲವಾಗುವ ರೀತಿ ತೆರಿಗೆ ಸಂಗ್ರಹ ನಡೆಯಲಿದೆ

• ಉದಯವಾಹಿನಿ, ಬೆಂಗಳೂರು

ಇತ್ತೀಚಿನ ವರ್ಷಗಳಲ್ಲಿ ಜನ ಸಿನಿಮಾವನ್ನು ವೀಕ್ಷಿಸಲು ಥಿಯೇಟರ್ ನತ್ತ ಹೆಚ್ಚು ಬಾರದ ಕಾರಣ ಚಿತ್ರಮಂದಿರಗಳು ಮುಚ್ಚಿಹೋಗುತ್ತಿದ್ದು, ಅನೇಕ ಸಿನಿಮಾಗಳು ಬಾಕ್ಸ್ ಆಫೀಸ್‌ನಲ್ಲಿ ಮಕಾಡೆ ಮಲಗಿವೆ. ಸ್ಟಾರ್‌ನಟರ ಸಿನಿಮಾಗಳು ವರ್ಷಕ್ಕೊಮ್ಮೆ ತೆರೆ ಕಾಣುತ್ತಿರುವ ಈ ಸಮಯದಲ್ಲಿ ಜನರನ್ನು ಥಿಯೇಟರ್‌ಗೆ ಕರೆತರುವುದು ದೊಡ್ಡ ಸವಾಲಿನ ಕೆಲಸವಾಗಿದೆ.

**ಸಿನಿಮಾಗಳು ವರ್ಷಕ್ಕೊಮ್ಮೆ ತೆರೆ**

ಇದರ ನಡುವೆಯೇ ರಾಜ್ಯ ಕಾಂಗ್ರೆಸ್ ಸರ್ಕಾರ ಸಿನಿಮಾ ಹಾಗೂ ಒಟಿಟಿ ಸಬ್‌ಸ್ಕ್ರಿಪ್ಶನ್ ಮೇಲೆ ಸೆಸ್ ವಿಧಿಸಲು ಮುಂದಾಗಿದೆ ಎಂದು ತಿಳಿದು ಬಂದಿದೆ. ಹಾಲಿ ನಡೆಯುತ್ತಿರುವ ರಾಜ್ಯ ವಿಧಾನಸಭೆ ಅಧಿವೇಶನದಲ್ಲಿ ಕಾಂಗ್ರೆಸ್ ಸರ್ಕಾರವು ಕರ್ನಾಟಕ ಸಿನಿ ಮತ್ತು ಸಾಂಸ್ಕೃತಿಕ ಕಾರ್ಯಕರ್ತರ (ಕ್ಷೇಮಾಭಿವೃದ್ಧಿ) ಮಸೂದೆ 2024 ಅನ್ನು ಮಂಡಿಸಿದೆ. ಸರ್ಕಾರವು ಶೇ.1 ಮೀರದಂತೆ ಶೇ.2ಕ್ಕಿಂತ ಕಡಿಮೆಯಾಗದಂತೆ ಸೆಸ್ ವಿಧಿಸಲು ಸರ್ಕಾರ ಮುಂದಾಗಿದೆ. ಇದರಿಂದ ಸಿನಿಮಾ, ಸಾಂಸ್ಕೃತಿಕ ಕಲಾವಿದರಿಗೆ ಅನುಕೂಲವಾಗುವ ರೀತಿ ತೆರಿಗೆ ಸಂಗ್ರಹ ನಡೆಯಲಿದೆ ಎಂದು ಹೇಳಲಾಗಿದೆ. ಸಿನಿ ಮತ್ತು ಸಾಂಸ್ಕೃತಿಕ ಕಾರ್ಯಕರ್ತರ ಕ್ಷೇಮಾಭಿವೃದ್ಧಿ ಉಪತೆರಿಗೆ ಅಥವಾ ಉಪಕರವನ್ನು ಸಿನಿಮಾ ಟಿಕೆಟ್, ವಂತಿಗೆಗಳ ಮೇಲೆ ಹೇರತಕ್ಕದ್ದು ಎಂದು ರಾಜ್ಯ ಸರ್ಕಾರವು ಮಸೂದೆಯಲ್ಲಿ ಉಲ್ಲೇಖಿಸಿದೆ.

ಈ ತೆರಿಗೆಯು ಶೇ 2 ರಷ್ಟನ್ನು ದಾಟುವಂತಿಲ್ಲ ಆದರೆ ಶೇಕಡಾ ಒಂದಕ್ಕಿಂತಾ ಕಡಿಮೆಯೂ ಇರುವಂತಿರುವಂತಿಲ್ಲ ಎಂದು ಹೇಳಿದೆ. ಈ ಮಸೂದೆಯು ಅನುಮೋದನೆಯಾದರೆ ಸಿನಿಮಾ ಟಿಕೆಟ್ ಬೆಲೆ ಹಾಗೂ ಒಟಿಟಿ ಸಬ್‌ಸ್ಕ್ರಿಪ್ಷನ್ ಬೆಲೆಗಳು ಸಹ ಏರಿಕೆ ಆಗಲಿವೆ. ಈ ಶುಲ್ಕವನ್ನು ಸಿನಿ ಮತ್ತು ಸಾಂಸ್ಕೃತಿಕ ಕಾರ್ಯಕರ್ತರ ಕ್ಷೇಮಾಭಿವೃದ್ಧಿ ಬಳಸಿಕೊಳ್ಳಲಾಗುತ್ತದೆ ಎಂದು ಮಸೂದೆಯಲ್ಲಿ ವಿವರಿಸಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ತಮ್ಮ ಸಿಎಂ ಸೀಟನ್ನು ಉಳಿಸಿಕೊಳ್ಳಲು ನಾಡಿನ ಸಿನಿ ಪ್ರಿಯರ ಬೆನ್ನಿಗೂ ತೆರಿಗೆ ಬರೆ ಎಳೆಯಲು ಮುಂದಾಗಿದ್ದಾರೆ.

ಕನ್ನಡ ಚಿತ್ರರಂಗ ಸಂಕಷ್ಟಗಳಿಂದ ಬಳಲುತ್ತಿದ್ದರೂ, ಅವುಗಳಿಗೆ ಕಿವಿಗೊಡದ ಮುಖ್ಯಮಂತ್ರಿಗಳು, ಸಿನಿಮಾ ಟಿಕೆಟ್, ಒಟಿಟಿಗಳ ಚಂದಾದಾರಿಕೆಯ ಮೇಲೆ ಶೇ.2ರಷ್ಟು ತೆರಿಗೆಯನ್ನು ವಿಧಿಸಿ ಹಣದೋಚಲು ವಿಧಾನಸಭೆಯಲ್ಲಿ ಕರ್ನಾಟಕ ಸಿನಿಮಾ ಸಾಂಸ್ಕೃತಿಕ ಹೋರಾಟಗಾರರ (ಕ್ಷೇಮಾಭಿವೃದ್ಧಿ) ಮಸೂದೆ–2024 ಅನ್ನು ಅನುಮೋದನೆಗೆ ಇಟ್ಟಿದ್ದಾರೆ. ಈಗಾಗಲೇ ಎಲ್ಲದರ ಮೇಲೂ ತೆರಿಗೆಯನ್ನು ಹೇರಿರುವ ರಣಹೇಡಿ ಕಾಂಗ್ರೆಸ್ ಸರ್ಕಾರ ಈಗ ಸಿನಿಮಾ ಪ್ರೇಕ್ಷಕರ ಮೇಲೂ ತೆರಿಗೆ ಪ್ರಹಾರ ಮಾಡಲು 'ಕೈ' ಎತ್ತಿರುವುದು ನಾಚಿಕೆಗೇಡಿನ ಸಂಗತಿ ಎಂದು ಟ್ವೀಟ್ ಮಾಡಿ ಕಿಡಿಕಾರಿದೆ.



**ರಾಜ್ಯ ಕಾಂಗ್ರೆಸ್ ಸರ್ಕಾರ ಪೆಟ್ರೋಲ್ ಮೇಲಿನ ಕರ್ನಾಟಕ ಮಾರಾಟ ತೆರಿಗೆ (ಕೆಎಸ್‌ಟಿ) ಅನ್ನು ಶೇ. 25.92ರಿಂದ ಶೇ. 29.84ಕ್ಕೆ ಮತ್ತು ಡೀಸೆಲ್ ಮೇಲಿನ ತೆರಿಗೆಯನ್ನು ಶೇ. 14.34ರಿಂದ ಶೇ. 18.44ಕ್ಕೆ ಏರಿಕೆ ಮಾಡಿತ್ತು. ಇದೀಗ ಮನರಂಜನೆ ಕ್ಷೇತ್ರದ ಮೇಲೆ ಕಣ್ಣಿಟ್ಟಿರುವ ಸರ್ಕಾರ ಸಿನಿಮಾ ಟಿಕೆಟ್ ಮತ್ತೆ ಒಟಿಟಿ ಸಬ್‌ಸ್ಕ್ರಿಪ್ಶನ್ ಮೇಲೆ ಸೆಸ್ ವಿಧಿಸಲು ಮುಂದಾಗಿದ್ದು, ಇವು ಕೂಡ ದುಬಾರಿ ಆಗಲಿವೆ. ಇನ್ನೂ ಈ ಕುರಿತು ಟ್ವೀಟ್ ಮಾಡಿ ರಾಜ್ಯ ಬಿಜೆಪಿ ಕಿಡಿಕಾರಿದೆ.**

# ಸಿಎಂ ಸಿದ್ದರಾಮಯ್ಯ ಪತ್ನಿಗೆ ಬದಲಿ ನಿವೇಶನ ಹಂಚಿಕೆ

• ಉದಯವಾಹಿನಿ, ಬೆಂಗಳೂರು

ಮೈಸೂರು ನಗರ ಅಭಿವೃದ್ಧಿ ಪ್ರಾಧಿಕಾರ (ಮುಡಾ) ಸಿಎಂ ಸಿದ್ದರಾಮಯ್ಯ ಕುಟುಂಬದವರಿಗೆ ಕಾನೂನು ಬಾಹಿರವಾಗಿ 14 ಬದಲಿ ನಿವೇಶನಗಳ ಹಂಚಿಕೆ ಮಾಡಿರುವುದರಿಂದ ಸರ್ಕಾರದ ಬೊಕ್ಕಸಕ್ಕೆ ಬರೋಬ್ಬರಿ 40 ಕೋಟಿ ರೂ.ಗಿಂತ ಅಧಿಕ ಮೊತ್ತ ನಷ್ಟವಾಗಿದೆ ಎಂದು ಭ್ರಷ್ಟಚಾರ ವಿರೋಧಿ ವೇದಿಕೆ ಅಧ್ಯಕ್ಷ, ಬಿಜೆಪಿ ಮುಖಂಡ ಎನ್.ಆರ್.ರಮೇಶ್ ಗಂಭೀರ ಆರೋಪ ಮಾಡಿದ್ದಾರೆ.

ನಗರಾಭಿವೃದ್ಧಿ ಇಲಾಖೆ ನಿಯಮದನ್ವಯ ಬಡಾವಣೆ ನಿರ್ಮಾಣ ಉದ್ದೇಶಕ್ಕಾಗಿ ರೈತರ ಜಮೀನು ಸ್ವಾಧೀನ ಮಾಡಿಕೊಂಡರೆ, ಅದೇ ಬಡಾವಣೆಯಲ್ಲಿ ಭೂಮಾಲೀಕರಿಗೆ ನಿವೇಶನ ಹಂಚಿಕೆ ಮಾಡಬೇಕು. ಆ ಬಡಾವಣೆಯ ನಂತರ ಪ್ರಾಧಿಕಾರವು ಅಭಿವೃದ್ಧಿಪಡಿಸುವ ಬಡಾವಣೆಯಲ್ಲಿ ಬದಲಿ ನಿವೇಶನ ಹಂಚಿಕೆ ಮಾಡಬೇಕು. ಮುಂಚಿತವಾಗಿ ಅಭಿವೃದ್ಧಿಪಡಿಸಿದ ಬಡಾವಣೆಗಳಲ್ಲಿ ಬದಲಿ ನಿವೇಶನ ಹಂಚಿಕೆ ಮಾಡುವಂತಿಲ್ಲ. ಆದರೆ, ಸಿಎಂ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಅವರಿಗೆ ದೇವನೂರು 3ನೇ ಹಂತದ ಬಡಾವಣೆಯಲ್ಲಿ ಹಂಚಿಕೆಯಾಗಿದ್ದ ನಿವೇಶನಗಳ ಬದಲಾಗಿ ವಿಜಯನಗರ 3 ಮತ್ತು 4ನೇ ಹಂತದ ಬಡಾವಣೆಗಳಲ್ಲಿದ್ದ 14 ದುಬಾರಿ ನಿವೇಶನಗಳನ್ನು ಹಂಚಿಕೆ ಮಾಡಿರುವುದು ಕಾನೂನುಬಾಹಿರ ಎಂದು ಸುದ್ದಿಗೋಷ್ಠಿಯಲ್ಲಿ ದಾಖಲೆ ಸಮೇತ ವಿವರಿಸಿದರು.

ಮುಡಾ ಹಿಂದಿನ ಅಧ್ಯಕ್ಷ ರಾಜೀವ್, ಆಗ ಆಯುಕ್ತರಾಗಿದ್ದ ಡಿ.ಬಿ. ನಟೇಶ್ ಕಾನೂನುಬಾಹಿರ ಕಾರ್ಯದಲ್ಲಿ ತೊಡಗಿದ್ದಾರೆ. ಸಿದ್ದರಾಮಯ್ಯ ಅವರು 199798ರ ಅವಧಿಯಲ್ಲಿ ಜೆ.ಎಚ್.ಪಟೇಲ್ ಹಾಗೂ 2004ರಿಂದ 2006ರಲ್ಲಿ ಧರ್ಮಸಿಂಗ್ ಸಂಪುಟದಲ್ಲೂ ಡಿಸಿಎಂ ಆಗಿದ್ದರು. 2013ರಿಂದ 2018ರವರೆಗೆ ಮುಖ್ಯಮಂತ್ರಿ. ಹೀಗೆ ಸಿದ್ದರಾಮಯ್ಯ ಅಧಿಕಾರದಲ್ಲಿ ಇರುವಾಗಲೇ ಬದಲಿ ನಿವೇಶನ ಪ್ರಕರಣ ನಡೆದಿದೆ ಎಂದು ಎನ್.ಆರ್. ರಮೇಶ್ ದೂರಿದರು.

ಮೈಸೂರಿನ ದೇವನೂರು 3ನೇ ಹಂತದ ಬಡಾವಣೆಯಲ್ಲಿ ಪ್ರತಿ ಚದರಡಿಗೆ ಐದು ಸಾವಿರ ರೂ. ಇದೆ. ವಿಜಯನಗರ 3 ಮತ್ತು 4ನೇ ಹಂತದ ಬಡಾವಣೆಗಳಲ್ಲಿ ಪ್ರತಿ ಚದರಡಿಗೆ 12 ಸಾವಿರ ರೂ. ಇದೆ. ದೇವನೂರು ಬಡಾವಣೆ ಬದಲಾಗಿ ವಿಜಯನಗರದಲ್ಲಿ ಒಟ್ಟು 38,284 ಚದರಡಿ ವಿಸ್ತೀರ್ಣದ 14 ನಿವೇಶನಗಳನ್ನು ಬದಲಿಯಾಗಿ ಸಿಎಂ ಪತ್ನಿ ಹೆಸರಿಗೆ ಹಂಚಿಕೆ ಮಾಡಿ ಅಕ್ರಮವೆಸಗಿದ್ದಾರೆ.



**ಲೋಕಾಯುಕ್ತಕ್ಕೆ ದೂರು ದಾಖಲು ಸುದ್ದಿಗೋಷ್ಠಿ ನಡೆಸಿದ ಬಳಿಕ ಎನ್.ಆರ್.ರಮೇಶ್, 383 ಪುಟಗಳಸಹಿತ ಮುಡಾ ಹಗರಣ ಕುರಿತು ಲೋಕಾಯುಕ್ತದಲ್ಲಿ ದೂರು ಸಲ್ಲಿಸಿದ್ದಾರೆ. ಸಿದ್ದರಾಮಯ್ಯ, ಪತ್ನಿ ಪಾರ್ವತಿ, ಮಲ್ಲಿಕಾರ್ಜುನಸ್ವಾಮಿ, ಬಸವೇಗೌಡ, ರಾಜೀವ್, ನಟೇಶ್ ವಿರುದ್ಧ ಅಧಿಕಾರ ದುರುಪಯೋಗ, ವಂಚನೆ, ಭ್ರಷ್ಟಾಚಾರ ಕೇಸ್ ದಾಖಲಿಸಿಕೊಂಡು ಕಠಿಣ ಕ್ರಮಕ್ಕೈಗೊಳ್ಳುವಂತೆ ಲೋಕಾಯುಕ್ತರಿಗೆ ಮನವಿ ಮಾಡಿದರು.**

# ಮಹಿಳಾ ಸಾಧಕಿ ಹೆಚ್. ಎಸ್. ಪ್ರತಿಮಾ ಹಾಸನ್ ರವರಿಗೆ ರೈತರ ಸಂಘದಿಂದ ಸನ್ಮಾನ



ಉದಯವಾಹಿನಿ ಚಿತ್ರ




ಹೆಚ್.ಎಸ್. ಪ್ರತಿಮಾ

21-07-2024 ರಂದು ಕರ್ನಾಟಕ ರಾಜ್ಯ ರೈತ ಹಸಿರು ಜನ ಜಾಗೃತಿ ಸಂಘಟನೆ. ಚನ್ನರಾಯಪಟ್ಟಣ. ಇಲ್ಲಿ 44ನೇ ರೈತ ಹುತಾತ್ಮರ ದಿನಾಚರಣೆಯನ್ನು ಆಚರಿಸಿದ್ದು. ಸಾಧಕರಿಗೆ ಸನ್ಮಾನವನ್ನು ವಿಶೇಷವಾಗಿ ಮಾಡಲಾಯಿತು. ಹಾಸನ ನಗರದ ಬಹುಮುಖ ಪ್ರತಿಭೆ, ಸದಾ ಕ್ರಿಯಾಶೀಲರಾಗಿ ಕಾರ್ಯ ನಿರ್ವಹಿಸುವಂತಹ ಸಾಹಿತಿ, ಶಿಕ್ಷಕಿ, ಸಾಮಾಜಿಕ ಚಿಂತಕಿ, ನಿರೂಪಕಿ, ಸಮಾಜ ಸೇವಕಿ, ಪತ್ರಕರ್ತೆ, ಪ್ರತಿಮಾ ಸಾಮಾಜಿಕ ಸಾಂಸ್ಕೃತಿಕ ಅಭಿವೃದ್ಧಿ ಪ್ರತಿಷ್ಠಾನದ ಸಂಸ್ಥಾಪಕ ಅಧ್ಯಕ್ಷರಾದ ಶ್ರೀಮತಿ ಹೆಚ್‌ಎಸ್ ಪ್ರತಿಮಾ ಹಾಸನ್ ರವರಿಗೆ ಮಹಿಳಾ ಸಾಧಕಿ ಎಂದು ಅತಿಥಿಯಾಗಿ ಆಹ್ವಾನಿಸಿ ಗೌರವಪೂರ್ಣವಾಗಿ ಸಿ. ಎ. ನಾಗರತ್ನ ರಾಜ್ಯ ಅಧ್ಯಕ್ಷರು ಸನ್ಮಾನಿಸಿದರು ಅವರ ಕಾರ್ಯವನ್ನು ಸ್ಮರಿಸಿದರು. ಕಾರ್ಯಕ್ರಮದಲ್ಲಿ ರಾಜ್ಯ ಉಪಾಧ್ಯಕ್ಷರು ಕುಮಾರ್, ರಾಜ್ಯ ಕಾರ್ಯದರ್ಶಿಗಳು ಹರೀಶ್, ಶಂಕರ್, ಹಾಸನ ಜಿಲ್ಲಾಧ್ಯಕ್ಷರು ಸಂತೋಷ ಇನ್ನೂ ಹಲವರು ಜಿಲ್ಲಾ ತಾಲ್ಲೂಕು ಪದಾಧಿಕಾರಿಗಳು ಉಪಸ್ಥಿತರಿದ್ದರು

# ಶ್ರೀ ಗುರು ರಾಯರ ಸನ್ನಿಧಿಗೆ ಭಕ್ತ ಜನ ಸಾಗರ ವಿಶೇಷ ಪೂಜೆ

ಉದಯವಾಹಿನಿ ಚಿತ್ರ



• ಉದಯವಾಹಿನಿ, ಬೆಂಗಳೂರು

ಜಯನಗರ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶ ಅನುಗ್ರಹದೊಂದಿಗೆ ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್. ಕೆ. ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಗುರು ಪೌರ್ಣಿಮಾ ಪ್ರಯುಕ್ತ ಶ್ರೀ ಗುರುರಾಯರ ಬೃಂದಾವನಕ್ಕೆ ಅಭಿಷೇಕ, ಮುಖ್ಯಪ್ರಾಣ ದೇವರಿಗೆ ರತ್ನ ಕವಚ ಹಾಗೂ ಶ್ರೀ ಗುರುರಾಯರ ಬೃಂದಾವನಕ್ಕೆ ಸುವರ್ಣ ಕವಚದ ಅಲಂಕಾರ ಮತ್ತು ವಿಶೇಷ ಉತ್ಸವಗಳನ್ನು ನೆರವೇರಿಸಲಾಯಿತು.

ಪೌರ್ಣಮಿ ಪ್ರಯುಕ್ತ ಸಾಮೂಹಿಕ ಶ್ರೀ ಸತ್ಯನಾರಾಯಣವ್ರತ ಪೂಜೆಯನ್ನು ಪುಷ್ಪಾರ್ಚನೆ, ಕಥಾಶ್ರವಣದೊಂದಿಗೆ ಪುರೋಹಿತರಾದ ಶ್ರೀ ನಂದಕಿಶೋರಾಚಾರ್ಯರು, ಕಟ್ಟಿ ರಾಘವೇಂದ್ರ ಆಚಾರ್ಯರು ನೆರವೇರಿಸಿದರು. ಈ ಸಂದರ್ಭದಲ್ಲಿ ಸೇವಾಕರ್ತರು ಗುರುರಾಯರಿಗೆ ಬೆಳ್ಳಿಯ ರಜತ ತಟ್ಟೆಯನ್ನು ಸಮರ್ಪಿಸಿದರು. ಹಾಗೂ ಸೇವಾ ಕರ್ತೃಗಳು ನೂರಾರು ಭಕ್ತರು ಸಂಕಲ್ಪವನ್ನು ಮಾಡಿ ಮಹಾ ಮಂಗಳಾರತಿ ಪ್ರಸಾದವನ್ನು ಸ್ವೀಕರಿಸಿ ಶ್ರೀಹರಿ ವಾಯು ಗುರುಗಳ ಅನುಗ್ರಹಕ್ಕೆ ಪಾತ್ರರಾದರು.


# ಮರೆಯಲಾಗದ ಮಹಾನ್ ಅವಧೂತ: ಶ್ರೀ ಸದಾಶಿವ ಬ್ರಹ್ಮೇಂದ್ರರು

• ಉದಯವಾಹಿನಿ, ಬೆಂಗಳೂರು





ಉದಯವಾಹಿನಿ ಚಿತ್ರ





ಭಾವದ ಅನುಸಂಧಾನದೊಡನೆ ಅವರ ಕೃತಿಗಳ ಗಾಯನ ಪ್ರಸ್ತುತಪಡಿಸುವ ಪ್ರಯತ್ನವಾಗಬೇಕು – ಸಂಗೀತಜ್ಞ ಡಾ.ಎನ್.ರಘು ಅಭಿಮತ

ಕೋಲಾರದ ಗೊಲ್ಲಾಪಿನ್ನಿ ಮನೆತನ ಪ್ರಕಟಪಡಿಸಿರುವ ಪ್ರಾಧ್ಯಾಪಕ– ಲೇಖಕ ಕೆ. ಎಸ್. ರಾಮಮೂರ್ತಿ ರವರ ಮಹಾನ್ ಅವಧೂತ : ಶ್ರೀ ಸದಾಶಿವ ಬ್ರಹ್ಮೇಂದ್ರರು ಕೃತಿಯ ಲೋಕಾರ್ಪಣೆಯನ್ನು ಬೆಂಗಳೂರು ಗಿರಿನಗರದ ಶಾರದಾಂಬ ದೇಗುಲ ಆವರಣದ ಶ್ರೀ ಶಂಕರ ಕೃಪಾ ಸಭಾಂಗಣದಲ್ಲಿ ಆಯೋಜಿಸಲಾಗಿತ್ತು.

ಬೆಂಗಳೂರು ದಕ್ಷಿಣ ವಲಯ ಆಕಾಶವಾಣಿ ದೂರದರ್ಶನ ಸಹಾಯಕ ನಿರ್ದೇಶಕ ಕಾರ್ಯಕ್ರಮ ಡಾ. ಎನ್. ರಘು ರವರು ಗ್ರಂಥ ಲೋಕಾರ್ಪಣೆಗೊಳಿಸಿ ಮಾತನಾಡುತ್ತಾ ಶಾಂಕರ ಅದ್ವೈತ ಸಿದ್ಧಾಂತದ ನಿಜ ತತ್ವವನ್ನು ಇಹ ಜೀವನ ದಲ್ಲಿ ಅನುಭವ ಪೂರ್ವಕವಾಗಿ ಅನುಸಂಧಾನಿಸಿ ಜಿಜ್ಞಾಸುಗಳಿಗೆ ಮಾದರಿಯಾಗಿ ಬಾಳಿ ಜೀವನವನ್ನು ಸಾರ್ಥಕ ಪಡಿಸಿಕೊಂಡ ಮರೆಯಲಾಗದ ಮಹಾನ್ ಅವಧೂತ ಶ್ರೀ ಸದಾಶಿವ ಬ್ರಹ್ಮೇಂದ್ರರು, ಸಗುಣೋಪಾಸನೆಯೇ ನಿರ್ಗುಣೋಪಾಸನೆಗೆ ಸೋಪಾನ ಎನ್ನುವ ಕ್ರಮವನ್ನು ಅನುಸರಿಸಿ ಸರಳ ಸಂಸ್ಕೃತದಲ್ಲಿ ಮಾಡಲಾದ ಗೇಯಪೂರ್ಣ ರಚನೆಗಳಿಗೆ ರಾಗ ಸಂಯೋಜನೆ ಮಾಡುವುದು ಸವಾಲಿನ ಕೆಲಸ . ಮಂತ್ರ ಜಪಕ್ಕೆ ಹತ್ತಿರವಾದ ಅವರ ರಚನೆಗಳನ್ನು ಮನನ ಮಾಡುತ್ತಾ ಆತ್ಮ ತೃಪ್ತಿಯ ಭಾವದ ಅನುಸಂಧಾನದೊಡನೆ ಪ್ರಸ್ತುತಪಡಿಸುವ ಪ್ರಯತ್ನವಾಗಬೇಕು, ಇವರ ಕೃತಿಗಳನ್ನು ಇನ್ನು ವೈವಿಧ್ಯಪೂರ್ಣವಾಗಿ ಸಂಯೋಜನೆಯ ಪ್ರಯೋಗಗಳಿಗೆ ಒಳಪಡಿಸಲು ಎಲ್ಲಾ ಸಾಧ್ಯತೆಗಳಿವೆ ಎಂದು ಅಭಿಪ್ರಾಯ ಪಟ್ಟರು.

ಗುರುಪೂರ್ಣಿಮೆಯ ಅಂಗವಾಗಿ ಕೆ.ಎಸ್ ರಾಮ ಮೂರ್ತಿ ರವರ ಶಿಷ್ಯರಾದ ಗಣಿತ ಪ್ರಾಧ್ಯಾಪಕಿ ಸೌಭಾಗ್ಯ ಕೃಷ್ಣಮೂರ್ತಿ ವಿಜಯಪುರದ ಕೋದಂಡರಾಮ ರವರು ಗುರುವಂದನೆಯನ್ನು ಸಲ್ಲಿಸಿದರು. ಕೃತಿ ಪ್ರಕಟಣೆಗೆ ನೆರವಾದ ಸಾತವಲ್ಲಿ ಶೇಷಗಿರಿ ಬಾಬು, ಸುನಂದ ರಂಗನಾಥಸ್ವಾಮಿ ಮೊದಲಾದವರನ್ನು ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಸದಾಶಿವ ಬ್ರಹ್ಮೇಂದ್ರರ ರಚನೆಗಳನ್ನು ವಿದುಷಿ ಸುಮಲತಾ ಮಂಜುನಾಥ್ ,ಸುಜಯ ಭುಜಗಶಯನ ಮತ್ತು ಶಾರದಾ ವಿಶ್ವನಾಥ್ ಪ್ರಸ್ತುತಪಡಿಸಿದರು. ಕೃತಿ ಮತ್ತು ಕೃತಿಕಾರರ ಕುರಿತು ಶಾಂಕರೋತ್ತರ ದಾರ್ಶನಿಕರಲ್ಲಿ ವಿಶಿಷ್ಟ ರನಿಸಿರುವ ಸದಾಶಿವ ಬ್ರಹ್ಮೇಂದ್ರರ ಜೀವನ ಸಾಧನೆ ಮೋಕ್ಷಗಾಮಿಗಳಿಗೆ ಪ್ರೇರಣೆ ಎನಿಸಿದೆ. ಅದ್ವೈತದ ಸಾರಾಮೃತವಿರುವ ಇವರ ಗೇಯ ಗೀತೆಗಳು ಜನಪ್ರಿಯವಾಗಿದೆ. ಅವಧೂತರಾದ ಸದಾಶಿವ ಬ್ರಹ್ಮೇಂದ್ರರು ಲೌಕಿಕ ವ್ಯವಹಾರಗಳನ್ನು ಉಪಸಂಹಾರ ಮಾಡಿಕೊಂಡು ಸಿದ್ಧಿ ಸಾಧನೆಯ ಪಥದಲ್ಲಿ ಮೌನ ತಪಸ್ವಿಯಾಗಿ ಬಾಳ್ವೆ ನಡೆಸಿದ ಮಹಾನ್ ಚೇತನ. ಪ್ರಸ್ತುತ ಕೃತಿಯಲ್ಲಿ ಸದಾಶಿವ ಬ್ರಹ್ಮೇಂದ್ರರ ಜೀವನ ಸಾಧಕರಿಗೆ ದಾರಿ ದೀಪಗಳಾದ ಅವರ ಕೃತಿಗಳ ಕಿರು ಪರಿಚಯ ಅವರ ರಚನೆಗಳ ಮೂಲ ಪಾಠ,ಕನ್ನಡ ಅನುವಾದ ಮಾಡಿಕೊಟ್ಟಿರುವ ಲೇಖಕ ಶ್ರೀರಾಮ ಮೂರ್ತಿರವರು ಮೂಲತಃ ಕೋಲಾರದವರು,ಮೈಸೂರು ವಿಶ್ವವಿದ್ಯಾಲಯದ ಕನ್ನಡ ಸ್ನಾತಕೋತ್ತರ ಪದವೀಧರರಾಗಿ, ಕನ್ನಡ ಉಪನ್ಯಾಸಕರು, ಆಕಾಶವಾಣಿ ಕಲಾವಿದರು, ಅನುವಾದಕರು,ಸಂಶೋಧಕರು ಹಾಗೂ ಸಂಪನ್ಮೂಲ ವ್ಯಕ್ತಿಗಳಾಗಿದ್ದಾರೆ. ಹಲವು ಪತ್ರಿಕೆಗಳಲ್ಲಿ ಬರಹಗಳು ಪ್ರಕಟವಾಗಿದೆ. ಪಿಟೀಲು ಟಿ ಚೌಡಯ್ಯ ಪ್ರತಿಷ್ಠಾನದಿಂದ ಮೈಸೂರು ರಾಜವಂಶಸ್ತ ಯದುವೀರ ಕೃಷ್ಣರತ್ತ ಒಡೆಯರ್ ರವರಿಂದ ಸನ್ಮಾನಿತರಾಗಿರುವ ಶ್ರೀಯುತರು ಬರೆದಿರುವ ತಿರುಮಲೆಯ ಹಿನ್ನೆಲೆಯ ಶ್ರೀ ವೆಂಕಟೇಶ ಸುಪ್ರಭಾತ ಕೃತಿ ಜನಪ್ರಿಯವಾಗಿದೆ.

**ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಜಿಗಣಿಯ ಎಸ್ ವ್ಯಾಸ ವಿಶ್ವವಿದ್ಯಾಲಯದ ಕುಲಸಚಿವ ಡಾ. ಎಂ.ಕೆ.ಶ್ರೀಧರ್ ಮಾತನಾಡುತ್ತಾ ಗುರುಪೂರ್ಣಿಮೆಯ ಸಂದರ್ಭದಲ್ಲಿ ಹಠಯೋಗಿ, ಸಿದ್ಧಿಪುರುಷ, ಅವಧೂತ ಶ್ರೀ ಸದಾಶಿವ ಬ್ರಹ್ಮೇಂದ್ರದ ಕುರಿತು ಕೆ.ಎಸ್ ರಾಮಮೂರ್ತಿ ರವರು ಸಮರ್ಪಣ ಭಾವದಿಂದ ಅರಳುಗನ್ನಡದಲ್ಲಿ ಭಾವಕ ಭಕ್ತ ಜನರಿಗೆ ನೀಡಿ ಗುರು ಕೈಂಕರ್ಯ ಮಾಡಿರುವುದು ಶ್ಲಾಘನೀಯ ಎಂದು ತಿಳಿಸಿದರು.**

# ಶೇ.25 ಸೇವಾ ಶುಲ್ಕ ಪಾವತಿಸಿ ಲಾಭ ಪಡೆಯಿರಿ

## ಬಿಬಿಎಂಪಿ ಮುಖ್ಯ ಆಯುಕ್ತರ ಸಲಹೆ

• ಉದಯವಾಹಿನಿ, ಬೆಂಗಳೂರು

ಬಿಬಿಎಂಪಿ ವ್ಯಾಪ್ತಿಯಲ್ಲಿ ಬರುವ ಶೈಕ್ಷಣಿಕ ಸಂಸ್ಥೆಗಳು 'ಒಂದು ಪರಿಹಾರ ಯೋಜನೆಯಡಿ ಶೇ. 25 ಸೇವಾ ಶುಲ್ಕ ಪಾವತಿಸಿ ಯೋಜನೆಯ ಲಾಭ ಪಡೆಯಬೇಕೆಂದು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಸಲಹೆ ನೀಡಿದ್ದಾರೆ. ವೈದ್ಯಕಿಯ,ಇಂಜಿನಿಯರಿಂಗ್ ಕಾಲೇಜು ಸೇರಿ ಇತರೆ ಶೈಕ್ಷಣಿಕ ಸಂಸ್ಥೆಗಳ ಸಹಯೋಗದಲ್ಲಿ ಟೌನ್‌ಹಾಲ್‌ನಲ್ಲಿ ಬಿಬಿಎಂಪಿ ಆಯೋಜಿಸಿದ್ದ ಸಭೆಯಲ್ಲಿ ಮಾತನಾಡಿದರು. ಪಾಲಿಕೆ ವ್ಯಾಪ್ತಿಯಲ್ಲಿ ಒಂದು ಬಾರಿ ಪರಿಹಾರ'ಯೋಜನೆಯಡಿ ಬಾಕಿ ಇರುವ ಆಸ್ತಿ ತೆರಿಗೆಯಲ್ಲಿ ಸಾಕಷ್ಟು ವಿನಾಯ್ತಿ ನೀಡಲಾಗಿದೆ. 31ಕ್ಕೆ ಯೋಜನೆ ಮುಗಿಯಲಿರುವ ಹಿನ್ನೆಲೆಯಲ್ಲಿ ಶೈಕ್ಷಣಿಕ ಸಂಸ್ಥೆಗಳ ಮುಖ್ಯಸ್ಥರು, ಪ್ರತಿನಿಧಿಗಳು ಇದರ ಸದುಪಯೋಗ ಪಡೆದು ಬಾಕಿ ಇರುವ ಶೇವಾ ಶುಲ್ಕ ಪಾವತಿಸಬೇಕು. ಶೈಕ್ಷಣಿಕ ಸಂಸ್ಥೆಗಳು ಆಸ್ತಿ ತೆರಿಗೆಯಿಂದ ವಿನಾಯಿತಿ ಕೋರಿ ಶೇ. 25 ಸೇವಾ ಶುಲ್ಕ ಪಾವತಿಸಲು ಅರ್ಜಿ ಸಲ್ಲಿಸಿ ಅನುಮೋದನೆ ನಂತರ ಪಾವತಿಸಲು ಅವಕಾಶ ಕಲ್ಪಿಸಲಾಗಿತ್ತು.

ಪ್ರಸ್ತುತ ಒಂದು ಬಾರಿ ಪರಿಹಾರ ಯೋಜನೆ ಅವಧಿ ಯಲ್ಲಿ ಶೈಣಿಕ ಸಂಸ್ಥೆಯ ಸ್ವತ್ತುಗಳು ಸರ್ಕಾರದಿಂದ ಮಾನ್ಯತೆ ಪಡೆದಿದ್ದಲ್ಲಿ ಸೇವಾ ಶುಲ್ಕವನ್ನು ಪಾವತಿಸಲು ಶೈಣಿಕ ಉದ್ದೇಶಕ್ಕೆ ಬಳಸುತ್ತಿರುವ ಅವಧಿಯಿಂದ ಪಾವತಿ ಅನ್ವಯವಾಗುವಂತೆ ಅವಕಾಶ ಕಲ್ಪಿಸಲಾಗಿದೆ ಎಂದರು.

**25 ಸೇವಾ ಶುಲ್ಕ ಪಾವತಿಸಲು ಅರ್ಜಿ**

ಪಾಲಿಕೆ ವಿಶೇಷ ಆಯುಕ್ತ ಮುನೀಶ್ ಮೌದ್ಗಿಲ್ ಮಾತನಾಡಿ, ಸರ್ಕಾರದಿಂದ ತಂದಿರುವ 'ಒಂದು ಬಾರಿ ಪರಿಹಾರ ಯೋಜನೆ' ಲಾಭವನ್ನು ಶೈಣಿಕ ಸಂಸ್ಥೆಗಳು ಪಡೆದುಕೊಳ್ಳಬೇಕು.

ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಮಾದರಿ ಕಾರ್ಯವಿಧಾನ ನೀಡಲಾಗುವುದು ಎಂದರು. ವಲಯ ಆಯುಕ್ತರಾದ ಕರೀಗೌಡ, ರಮ್ಯಾ, ಕಂದಾಯ ವಿಭಾಗದ ಜಂಟಿ ಆಯುಕ್ತೆ ಲಕ್ಷ್ಮೀದೇವಿ, ವಲಯ ಜಂಟಿ ಆಯುಕ್ತರು, ಶೈಣಿಕ ಸಂಸ್ಥೆಗಳ ಮುಖ್ಯಸ್ಥರು, ಪ್ರತಿನಿಧಿಗಳು ಮತ್ತಿತರರಿದ್ದರು.



**ಚರ್ಚೆಯಾದ ಪ್ರಮುಖ ಅಂಶಗಳು**

- ಶೈಕ್ಷಣಿಕ ಸಂಸ್ಥೆಗಳು ಈಗಾಗಲೇ ಆಸ್ತಿ ತೆರಿಗೆ ಜಾಲದಲ್ಲಿವೆ. ಸ್ವಯಂ ಘೋಷಣಾ ಪದ್ಧತಿ (ಎಸ್‌ಎಎಸ್) ಅಡಿಯಲ್ಲಿ ಅರ್ಜಿ ಸಂಖ್ಯೆ ಹೊಂದಿರುವ ಪ್ರಕರಣಗಳಲ್ಲಿ ಆನ್‌ಲೈನ್ ಮೂಲಕ ಶೇ. 25 ಸೇವಾ ತೆರಿಗೆ ಪಾವತಿಗೆ ಅವಕಾಶ.
- ಈವರೆಗೆ ಆಸ್ತಿ ತೆರಿಗೆ ಪಾವತಿಸದ, ಎಸ್‌ಎಎಸ್ ಅರ್ಜಿ ಸಂಖ್ಯೆ ಹೊಂದಿರದ ಎಲ್ಲಾ ಶೈಕ್ಷಣಿಕ ವಿದ್ಯಾ ಸಂಸ್ಥೆಗಳು ಬಾಕಿ ಇರುವ ಸಾಲಿನಿಂದ ಸೇವಾ ಶುಲ್ಕ ಕಟ್ಟಡದ ಅನುಸಾರ ಶೇ.25 ಸೇವಾ ಶುಲ್ಕ ಲೆಕ್ಕಾಚಾರ ಮಾಡಿ ಮನವಿ ಪತ್ರದೊಂದಿಗೆ, ಡಿಡಿ ಹಾಗೂ ಸರ್ಕಾರದಿಂದ ಶೈಕ್ಷಣಿಕ ಸಂಸ್ಥೆಗೆ ಮಾನ್ಯತೆ ಪಡೆದಿರುವ ಪ್ರಮಾಣ ಪತ್ರದೊಂದಿಗೆ ಸಂಬಂಧಪಟ್ಟ ಆಯಾ ವಲಯ ಜಂಟಿ ಆಯುಕ್ತರಿಗೆ ಅರ್ಜಿ ಸಲ್ಲಿಕೆಗೆ ಅವಕಾಶ
- ಬಿಬಿಎಂಪಿ ಕಾಯ್ದೆಯಲ್ಲಿ 2021-22ನೇ ಸಾಲಿನ ಖಾಸಗಿ ಶೈಕ್ಷಣಿಕ ಸಂಸ್ಥೆಗಳಿಗೆ ಆಸ್ತಿ ತೆರಿಗೆಯಲ್ಲಿ ಯಾವುದೇ ವಿನಾಯಿತಿ ಇರುವುದಿಲ್ಲ. ನ್ಯಾಯಾಲಯದ ಪ್ರಕರಣಗಳನ್ನು ಹೊರತುಪಡಿಸಿ ಬೇರೆ ಎಲ್ಲಾ ಶೈಕ್ಷಣಿಕ ಸಂಸ್ಥೆಗಳು ಮೊತ್ತದ ಆಸ್ತಿ ತೆರಿಗೆ ಪಾವತಿ.
- ಶೇ.25 ಸೇವಾ ಶುಲ್ಕವನ್ನು ಪಾವತಿಸಬಹುದು. ಬಡ್ಡಿ ಮೊತ್ತಕ್ಕೆ ಸಂಪೂರ್ಣ ವಿನಾಯ್ತಿ . ಶೈಕ್ಷಣಿಕ ಸಂಸ್ಥೆಗಳಲ್ಲಿ ವಿಭಿನ್ನ ಸಮಸ್ಯೆ ಇದೆ. ಕೆಲವೊಮ್ಮೆ ಆನ್‌ಲೈನ್‌ನಲ್ಲಿ ತೆರಿಗೆ ಪಾವತಿಗೆ ಸಮಸ್ಯೆ ಎದುರಾಗಿರುವ ಬಗ್ಗೆ ಗಮನಕ್ಕೆ ಬಂದಿದೆ. ಆನ್‌ಲೈನ್‌ನಲ್ಲಿ ಪಾವತಿಸಲು ಸಾಧ್ಯವಿಲ್ಲದವರಿಗೆ ಚೆಕ್, ಪೇ ಆರ್ಡರ್, ಡಿಡಿ ಮೂಲಕ ಪಾವತಿಸಲು ಅವಕಾಶ ನೀಡಲಾಗುವುದು. ಆಯಾ ವಲಯ ಜಂಟಿ ಆಯುಕ್ತರಿಗೆ ನಿಮ್ಮ ಸಂಸ್ಥೆಗಳ ಬಾಕಿ ಆಸ್ತಿ ತೆರಿಗೆ ಡಿಡಿ ಸಲ್ಲಿಸಬಹುದು. ತುಷಾರ್ ಗಿರಿನಾಥ್. ಬಿಬಿಎಂಪಿ ಮುಖ್ಯ ಆಯುಕ್ತ

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
| ಗುಳಿಕ ಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡ ಕಾಲ | ಬೆಳಿಗ್ಗೆ | 10:30 ರಿಂದ 12:00 |

**ಮೇಷ:** ನಿಮ್ಮ ಶಕ್ತಿಯು ಮಟ್ಟ ಹೆಚ್ಚಿರುತ್ತದೆ ಮತ್ತು ನೀವು ಇದನ್ನು ಬಾಕಿಯಿರುವ ಕೆಲಸಗಳನ್ನು ಪೂರ್ಣಗೊಳಿಸಲು ಬಳಸಬೇಕು. ನೀವು ಹಣಕಾಸಿನ ಲಾಭ ತರುವ ಅದ್ಭುತವಾದ ಹೊಸ ಕಲ್ಪನೆಗಳನ್ನು ಪ್ರಸ್ತುತಪಡಿಸುತ್ತೀರಿ.

**ವೃಷಭ:** ಇಂದು ನೀವು ಚೈತನ್ಯಯುಕ್ತವಾಗಿರುತ್ತೀರಿ. ನೀವೇನೇ ಮಾಡಿದರೂ ಸಾಮಾನ್ಯವಾಗಿ ನೀವು ತೆಗೆದುಕೊಳ್ಳುವ ಅರ್ಧ ಸಮಯದಲ್ಲಿ ಅದನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ.

**ಮಿಥುನ:** ರಕ್ತದೊತ್ತಡವಿರುವ ರೋಗಿಗಳು ತಮ್ಮ ರಕ್ತದೊತ್ತಡ ಕಡಿಮೆ ಮಾಡಲು ಮತ್ತು ಕೊಲೆಸ್ಟರಾಲ್ ನಿಯಂತ್ರಣದಲ್ಲಿರಿಸಲು ಕೆಂಪು ವೈನ್ ತೆಗೆದುಕೊಳ್ಳಬಹುದು. ಇದು ಅವರಿಗೆ ಮತ್ತಷ್ಟು ವಿಶ್ರಾಂತಿ ತರುತ್ತದೆ.

**ಕರ್ಕಾಟಕ:** ಕೆಲವು ಕುಟುಂಬದ ಸದಸ್ಯರು ತಮ್ಮ ಅಸೂಯೆಯ ವರ್ತನೆಯಿಂದ ನಿಮಗೆ ಕಿರಿಕಿರಿ ಮಾಡಬಹುದು. ಆದರೆ ತಾಳ್ಮೆ ಕಳೆದುಕೊಳ್ಳುವುದು ಬೇಡ. ಇಲ್ಲದಿದ್ದರೆ ಪರಿಸ್ಥಿತಿ ನಿಯಂತ್ರಣ ಮೀರಬಹುದು.

**ಸಿಂಹ:** ನಿಮ್ಮ ಸ್ನೇಹಿತರು ನಿಮಗೆ ಅವರ ಅವಶ್ಯಕತೆ ಅತ್ಯಂತ ಹೆಚ್ಚಿದ್ದಾಗ ನಿಮ್ಮನ್ನು ನಿರಾಸೆಗೊಳಿಸಬಹುದು. ನಿಮ್ಮ ಹೃದಯಕ್ಕೆ ಪ್ರಿಯವಾಗುವ ಯಾರನ್ನಾದರೂ ಸಂಧಿಸುವ ಅವಕಾಶಗಳು ಇಂದು ಬಲವಾಗಿವೆ.

**ಕನ್ಯಾ:** ನಿಮ್ಮ ಒತ್ತಡ ನಿವಾರಿಸಲು ಕುಟುಂಬದ ಸದಸ್ಯರ ಬೆಂಬಲ ಪಡೆಯಿರಿ. ಅವರ ಸಹಾಯವನ್ನು ಗೌರವದಿಂದ ಸ್ವೀಕರಿಸಿ. ನೀವು ಭಾವನೆಗಳು ಮತ್ತು ಒತ್ತಡಗಳನ್ನು ಒಳಗೆ ಅದುಮಿಡಬಾರದು.

**ತುಲಾ:** ಸಂತಸದ ಪ್ರಯಾಣ ಮತ್ತು ಸಾಮಾಜಿಕ ಕಾರ್ಯಕ್ರಮಗಳು ನಿಮಗೆ ಆರಾಮ ಮತ್ತು ಸಂತೋಷತರುತ್ತವೆ. ಹೂಡಿಕೆ ಮಾಡುವುದು ಅನೇಕ ಬಾರಿ ನಿಮಗೆ ಪ್ರಯೋಜನಕಾರಿಯೆಂದು ಸಾಬೀತುಪಡಿಸುತ್ತದೆ.

**ವೃಶ್ಚಿಕ:** ಸಂತೃಪ್ತಿಯ ಜೀವನಕ್ಕಾಗಿ ನಿಮ್ಮ ಮಾನಸಿಕ ದೃಢತೆಯನ್ನು ಸುಧಾರಿಸಿ. ಹಣವನ್ನು ಬೆಟ್ಟಿಂಗ್‌ನಲ್ಲಿ ಖರ್ಚು ಮಾಡಿದರೆ ನೀವು ಇಂದು ನಷ್ಟ ಅನುಭವಿಸುವ ಸಾಧ್ಯತೆಯಿದೆ. ಬೆಟ್ಟಿಂಗ್‌ನಿಂದ ದೂರವಿರಲು ನಿಮಗೆ ಸೂಚಿಸಲಾಗಿದೆ.

**ಧನಸ್ಸು:** ನೀವು ಹೇರಳ ಶಕ್ತಿಯನ್ನು ಹೊಂದಿರುತ್ತೀರಿ. ಕೆಲಸದ ಒತ್ತಡ ನಿಮ್ಮನ್ನು ಉದ್ವಿಗ್ನಗೊಳಿಸುವಂತೆ ತೋರುತ್ತದೆ. ಇಂದು ನೀವು ನಿಮ್ಮ ಮನೆಯ ಸದಸ್ಯರನ್ನು ಎಲ್ಲಿಗಾದರೂ ಸುತ್ತಾಡಲು ಕರೆದುಕೊಂಡು ಹೋಗಬಹುದು.

**ಮಕರ:** ನಿಮ್ಮ ಆಕರ್ಷಕ ವರ್ತನೆ ಗಮನ ಸೆಳೆಯುತ್ತದೆ. ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಇಂದು ಪರಿಹರಿಸಬಹುದು ಮತ್ತು ನೀವು ಹಣದಿಂದ ಲಾಭ ಪಡೆಯಬಹುದು.

**ಕುಂಭ:** ಪ್ರಭಾವಿ ಮತ್ತು ಪ್ರಮುಖ ಜನರೊಡನೆ ನಿಮ್ಮ ಬಾಂಧವ್ಯವನ್ನು ಸುಧಾರಿಸಲು ಒಂದು ಪರಿಪೂರ್ಣ ಅವಕಾಶವಾಗಿರುತ್ತದೆ. ಪ್ರೀತಿಯ ಸಂಕಟವನ್ನು ಎದುರಿಸುವ ಸಾಧ್ಯತೆಗಳು ಇಂದು ಹೆಚ್ಚಿವೆ.

**ಮೀನ:** ಸ್ನೇಹಿತನ ಜೊತೆಗಿನ ನಿಮ್ಮ ಅಪಾರ್ಥ ಕೆಲವು ಅಹಿತಕರ ಪ್ರತಿಕ್ರಿಯೆಗಳನ್ನು ಉಂಟುಮಾಡಬಹುದು - ಯಾವುದೇ ನಿರ್ಧಾರಕ್ಕೆ ಬರುವ ಮೊದಲು ಸಮತೋಲಿತ ನೋಟ ಹೊಂದಿ.

## ಕೆಂಚವೀರಪ್ಪಗೆ ಸನ್ಮಾನ

• ಉದಯವಾಹಿನಿ ಚಿತ್ರದುರ್ಗ


ಉದಯವಾಹಿನಿ ಚಿತ್ರ

ಜೀವನದಲ್ಲಿ ಪೋಷಕರ ಪಾತ್ರ ಎಷ್ಟಿದೆಯೋ, ಅಷ್ಟೇ ಗುರುಗಳ ಪಾತ್ರವೂ ಇದೆ. ನಮ್ಮಲ್ಲಿರುವ ಅಂಧಕಾರವನ್ನು ದೂರಮಾಡಿ, ಜ್ಞಾನವೆಂಬ ಬೆಳಕನ್ನು ನೀಡುವ ಮಹಾನ್ ಶಕ್ತಿಯೇ ಗುರು. ಬದುಕಲ್ಲಿ ಏನಾದರೂ ಸಾಧಿಸಬೇಕೆಂದರೆ ಗುರುವಿನ ಮಾರ್ಗದರ್ಶನ ಬೇಕೇ ಬೇಕು. ಇಂತಹ ಗುರುವಿಗೆ ನಮನ ಸಲ್ಲಿಸುವ ದಿನವೇ ಗುರುಪೂರ್ಣಿಮೆ ಸರ್ವರಿಗೂ ಗುರುಪೂರ್ಣಿಮೆ ಶುಭವನ್ನು ತರಲಿ ಎಂದು ಯೋಗಗುರುಗಳಾದ ಕೆಂಚವೀರಪ್ಪ ಹೇಳಿದರು.

ಭಾನುವಾರ ನಗರದ ಚಂದ್ರವಳ್ಳಿಯ ಜ್ಞಾನಭಾರತಿ ವಿದ್ಯಾ ಮಂದಿರ ಯೋಗ ಕೇಂದ್ರದ ಯೋಗ ಸಾಧಕರು ಗುರುಪೂರ್ಣಿಮೆ ದಿನದ ಅಂಗವಾಗಿ ಆಯೋಜಿಸಿದ್ದ ಗುರುವಂದನಾ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು. ಕಾರ್ಯಕ್ರಮದಲ್ಲಿ ಕಾಂತರಾಜು ಪೊಲೀಸ್ ರಥ ರಂಗಪ್ಪ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಪರಶುರಾಮ್ ಯೋಗ ಸಾಧಕರಾದ ವಿಜಯಲಕ್ಷ್ಮಿ ಕಮಲಮ್ಮ ಮೌನಿ ರವೀಂದ್ರ, ರಾಘವೇಂದ್ರ, ಷಣ್ಮುಖಪ್ಪ ಮುಂತಾದವರು ಭಾಗವಹಿಸಿದ್ದರು.

## ಶಿರೂರು ಗುಡ್ಡ ಕುಸಿತ ಸ್ಥಳಕ್ಕೆ 'ಮಿಲಿಟರಿ ಪಡೆ' ಎಂಟ್ರಿ; ಸೈನಿಕರಿಂದ 'ಮೆಗಾ ಕಾರ್ಯಾಚರಣೆ'

• ಉದಯವಾಹಿನಿ, ಕಾರವಾರ

ಇಲ್ಲಿನ ಶಿರೂರು ಬಳಿಯ ಹೆದ್ದಾರಿಯಲ್ಲಿ ಗುಡ್ಡ ಕುಸಿತದಿಂದಾಗಿ ಅದರಡಿ ಲಾರಿಯೊಂದು ಸಿಲುಕಿತ್ತು. ಇಂತಹ ಲಾರಿ ಸೇರಿದಂತೆ ಅದರಡಿಯಲ್ಲಿ ಸಿಲುಕಿರುವಂತ ಕೆಲವರ ಮೃತದೇಹವನ್ನು ಹೊರತೆಗೆಯಲು ಮಿಲಿಟರಿ ಎಂಟ್ರಿ ಕೊಡಲಿಗೆದೆ.

ಬೆಳಗಾವಿಯಿಂದ ಆಗಮಿಸುತ್ತಿರುವಂತ ಸೈನಿಕರ ಪಡೆಯು, ಶಿರೂರು ಬಳಿಯಲ್ಲಿ ಹೆದ್ದಾರಿಯಲ್ಲಿ ಕುಸಿತಗೊಂಡಿರುವಂತ ಗುಡ್ಡವನ್ನು ತೆರವುಗೊಳಿಸಲಿದೆ. ಅಲ್ಲದೇ ಕೇರಳ ಮೂಲದ ಲಾರಿಯೊಂದು ಗುಡ್ಡದ ಮಣ್ಣಿನಡಿ ಕುಸಿತಗೊಂಡಿದ್ದು, ಅದನ್ನು ಹೊರತೆಗೆಯುವ ಕಾರ್ಯಾಚರಣೆಯನ್ನು ಆರಂಭಿಸಲಿದೆ. ಈಗಾಗಲೇ ಎನ್‌ಡಿಆರ್‌ಎಫ್, ಅಗ್ನಿಶಾಮಕ ಸಿಬ್ಬಂದಿಗಳು ಮಣ್ಣು ತೆರವುಕಾರ್ಯಾಚರಣೆಯಲ್ಲಿ ತೊಡಗಿದ್ದಾರೆ. ಈಗ ಬೆಳಗಾವಿಯಿಂದ ಆಗಮಿಸಲಿರುವಂತ ಮಿಲಿಟರಿ ಪಡೆಯು, ಶಿರೂರು ಗುಡ್ಡ ಕುಸಿತದ ಮಣ್ಣು ತೆರವು ಕಾರ್ಯಾಚರಣೆಗೆ ಇಳಿಯಲಿದೆ.

ಮತ್ತೊಂದೆಡೆ ಕಂದಾಯ ಸಚಿವ ಕೃಷ್ಣಭೈರೇಗೌಡ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭಾನುವಾರ ಶಿರೂರು ಗುಡ್ಡ ಕುಸಿತದ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿ, ಅಧಿಕಾರಿಗಳಿಂದ ಮಾಹಿತಿ ಪಡೆದಿದ್ದಾರೆ.

## ಶೀಘ್ರದಲ್ಲೇ ರಾಜ್ಯದ 2ನೇ ಅಧಿಕೃತ ರಾಜ್ಯ ಭಾಷೆಯಾಗಿ ತುಳು; ಶಾಸಕ ಅಶೋಕ್ ರೈ

• ಉದಯವಾಹಿನಿ ಪುತ್ತೂರು

ರಾಜ್ಯದಲ್ಲಿ ತುಳು ಭಾಷೆಯನ್ನು 2ನೇ ಅಧಿಕೃತ ರಾಜ್ಯ ಭಾಷೆಯಾಗಿ ಘೋಷಿಸುವ ನಿಟ್ಟಿನಲ್ಲಿ ಪ್ರಯತ್ನ ಮಾಡಲಾಗುತ್ತಿದೆ. ಶೀಘ್ರದಲ್ಲೇ ಈ ಪ್ರಯತ್ನ ಕೈಗೂಡುವ ವಿಶ್ವಾಸವಿದೆ ಎಂದು ಶಾಸಕ ಅಶೋಕ್ ರೈ ಹೇಳಿದರು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಪುತ್ತೂರು ತಾಲ್ಲೂಕು ಘಟಕದ ನೇತೃತ್ವದಲ್ಲಿ, ಕನ್ನಡ ಸಾಹಿತ್ಯ ಪರಿಷತ್ ಪುತ್ತೂರು ತಾಲ್ಲೂಕು ಘಟಕ ಮತ್ತು ರೋಟರಿ ಕ್ಲಬ್ ಪುತ್ತೂರು ಯುವ ಇವರ ಸಹಯೋಗದಲ್ಲಿ ಪುತ್ತೂರಿನ ರೋಟರಿ ಮನೀಷಾ ಸಭಾಂಗಣದಲ್ಲಿ ಶನಿವಾರ ನಡೆದ ಪತ್ರಿಕಾ ದಿನಾಚರಣೆ - ಉಪನ್ಯಾಸ - ಸನ್ಮಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಪಶ್ಚಿಮ ಬಂಗಾಳ ಸೇರಿದ ಅನೇಕ ರಾಜ್ಯಗಳಲ್ಲಿ 2ನೇ ರಾಜ್ಯ ಭಾಷೆ ಘೋಷಣೆ ಸಂದರ್ಭ ಯಾವ್ಯಾವ ಮಾನದಂಡ ಅನುಸರಿಸಲಾಗಿದೆ ಎಂಬುದರ ಅಧ್ಯಯನ ನಡೆಸಿ ವರದಿ ತಯಾರಿಸಲಾಗಿದೆ. ಇದನ್ನು ಸರ್ಕಾರ ಪರಿಶೀಲಿಸಿ ಶೀಘ್ರದಲ್ಲೇ ತುಳು ಭಾಷೆಯನ್ನು 2ನೇ ಅಧಿಕೃತ ರಾಜ್ಯ ಭಾಷೆಯಾಗಿ ಘೋಷಣೆ ಮಾಡುವ ಸಂಬಂಧ ಸಂಪುಟದಲ್ಲಿ ಚರ್ಚಿಸಿ ನಿರ್ಣಯ ಕೈಗೊಂಡು ಮೇಲೆ ಗೆಜೆಟ್ ನೋಟಿಫಿಕೇಶನ್ ಹೊರಡಿಸಲಾಗುವುದು ಎಂದು ಹೇಳಿದರು.

# ತನು ಮನ ಭಾವ ಶುದ್ಧಿಯಿಂದ ಸಮ ಸಮಾಜ ನಿರ್ಮಾಣ

### ಹಡಪದ ಅಪ್ಪಣ್ಣನವರ ಮಾರ್ಗದರ್ಶನದಲ್ಲಿ ನಡೆದುಕೊಂಡು ಹೋದರೆ ಸಮ ಸಮಾಜ ನಿರ್ಮಿಸಬಹುದು: ಎಂ.ಕಾರ್ತಿಕ್

• ಉದಯವಾಹಿನಿ ಚಿತ್ರದುರ್ಗ


ಪ್ರತಿಯೊಬ್ಬರು ತನು, ಮನ, ಭಾವ ಶುದ್ಧಿಯಾಗಿಟ್ಟುಕೊಂಡು ತಮ್ಮ ಕೆಲಸ ಕಾರ್ಯಗಳಲ್ಲಿ ಸರಿಯಾದ ರೀತಿಯಲ್ಲಿ ತೊಡಗಿಕೊಂಡಾಗ ಮಾತ್ರ ಉತ್ತಮ ಸಮಾಜ ನಿರ್ಮಾಣ ಮಾಡಲು ಸಾಧ್ಯವಿದೆ ಎಂದು ಉಪ ವಿಭಾಗಾಧಿಕಾರಿ ಎಂ.ಕಾರ್ತಿಕ್ ಹೇಳಿದರು.

**ಅಪ್ಪಣ್ಣನವರ ಆಶಯಗಳನ್ನು ಮನಗಂಡು ಮುನ್ನಡೆಯಬೇಕು**

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಭಾನುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ವತಿಯಿಂದ ಆಯೋಜಿಸಲಾದ ಶಿವಶರಣ ಹಡಪದ ಅಪ್ಪಣ್ಣ ಜಯಂತಿ ಕಾರ್ಯಕ್ರಮದಲ್ಲಿ ಹಡಪದ ಅಪ್ಪಣ್ಣನವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು. ಹಡಪದ ಅಪ್ಪಣ್ಣನವರ ಮಾರ್ಗದರ್ಶನದಲ್ಲಿ ನಡೆದುಕೊಂಡು ಹೋದರೆ ಸಮ ಸಮಾಜ ನಿರ್ಮಿಸಬಹುದು. ಅವರು ತಮ್ಮ ಸುತ್ತ ಮುತ್ತಲಿನ ವಾತಾವರಣ, ಸಮಾಜ, ಜೀವನವನ್ನು ಅರ್ಥೈಸಿಕೊಂಡು ಅತ್ಯಂತ ಸರಳವಾಗಿ, ಅರ್ಥಗರ್ಭಿತವಾಗಿ ವಚನಗಳನ್ನು ಕಟ್ಟಿಕೊಟ್ಟಿದ್ದಾರೆ. ಬಸವಾದಿ ಶರಣರ ವಚನಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡರೆ ಉತ್ತಮ ಸಮಾಜ ಕಟ್ಟಬಹುದು. ಈ ನಿಟ್ಟಿನಲ್ಲಿ ಇಂತಹ ಹಲವು ಕಾರ್ಯಗಳಲ್ಲಿ ತೊಡಗಿಕೊಂಡು ನಾವೆಲ್ಲರೂ ಸೇರಿ ಸಮ ಸಮಾಜ ನಿರ್ಮಾಣ ಮಾಡೋಣ ಎಂದರು.

ಲೌಕಿಕವಾಗಿ ಹಾಗೂ ಪಾರಮಾರ್ಥಿಕವಾಗಿ ಈ ಎರಡರಲ್ಲೂ ವಿಶೇಷ ಸಾಧನೆ ಮಾಡಿದ ಪ್ರತಿಫಲವಾಗಿ ಅಲ್ಲಮ್ಮ ಪ್ರಭು ಅವರು ಹಡಪದ ಅಪ್ಪಣ್ಣ ಅವರನ್ನು ''ನಿಜಸುಖಿ ಹಡಪದ ಅಪ್ಪಣ್ಣ'' ಎಂದು ಕರೆದಿದ್ದಾರೆ ಎಂದು ಹೇಳಿದರು.

ಒಬ್ಬರ ಮನೆ, ಒಬ್ಬರ ಮನಸ್ಸು ಮುರಿಯದವನೇ ನಿಜವಾದ ಶರಣ. ಅಂತಹ ಶರಣರು ಹಡಪದ ಅಪ್ಪಣ್ಣ. ನೇರವಾದ ಮಾತುಗಳಿಂದ ಪ್ರೀತಿಯಿಂದ ಸರ್ವರನ್ನು ಅಪ್ಪಿಕೊಂಡರು.


ಉದಯವಾಹಿನಿ ಚಿತ್ರ

ದಿಕ್ಕೆಟ್ಟವರ ಬದುಕಿಗೆ ದಿಕ್ಸೂಚಿಯಾದವರು ಹಡಪದ ಅಪ್ಪಣನವರು ಎಂದರು.

ಪ್ರತಿಯೊಬ್ಬರೂ ಹಡಪದ ಅಪ್ಪಣ್ಣನವರ ಕೊಡುಗೆ, ಆಶಯಗಳನ್ನು ಮನಗಂಡು ಮುನ್ನಡೆಯಬೇಕಿದೆ. ತಮ್ಮ ಮಕ್ಕಳಿಗೆ ವೃತ್ತಿ ಬದುಕಿನ ಜತೆಗೆ ಉತ್ತಮ ಸಂಸ್ಕಾರ, ವಿದ್ಯಾಭ್ಯಾಸ ನೀಡಿ ಸಾತ್ವಿಕ ಸಮಾಜ ನಿರ್ಮಾಣ ಮಾಡುವ ಮೂಲಕ ಸಮಾಜಕ್ಕೆ ಉತ್ತಮ ಕೊಡುಗೆ ನೀಡಬೇಕಿದೆ ಎಂದರು.

ಚಿತ್ರದುರ್ಗದ ಉಮೇಶ್ ಪತ್ತಾರ ಮತ್ತು ತಂಡದವರು ಗೀತ ಗಾಯನ ಪ್ರಸ್ತುತ ಪಡಿಸಿದರು. ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್ ಸ್ವಾಗತಿಸಿದರು. ರಂಗನಿರ್ದೇಶಕ ಕೆ.ಪಿ.ಎಂ. ಗಣೇಶಯ್ಯ ಕಾರ್ಯಕ್ರಮ ನಿರೂಪಿಸಿದರು.

ಕಾರ್ಯಕ್ರಮದಲ್ಲಿ ಹಡಪದ ಅಪ್ಪಣ್ಣ ಸಮಾಜ ಸೇವಾ ಸಂಘದ ಅಧ್ಯಕ್ಷ ಬಿ.ಕೆ.ಜಯಪ್ಪ, ಕಾರ್ಯದರ್ಶಿ ಎಲ್.ಆರ್.ವೀರಭದ್ರಪ್ಪ ಲೋಕದೊಳಲು, ತಾಲ್ಲೂಕು ಅಧ್ಯಕ್ಷ ವೃಷಬೇಂದ್ರಪ್ಪ, ಜಿಲ್ಲಾ ಸಂಚಾಲಕ ಟಿ.ಸಿ.ಶಿವಪ್ರಕಾಶ್ ಸಾಹಿತಿಗಳಾದ ಜಗನ್ನಾಥ್, ವೇದಮೂರ್ತಿ ಹಾಗೂ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಚಿದಾನಂದಪ್ಪ, ಹಡಪದ ಅಪ್ಪಣ್ಣ ಸೇವಾ ಸಂಘದ ಮುಖಂಡರು ಹಾಗೂ ಗಣ್ಯರು ಇದ್ದರು.

> ಸಾಹಿತಿ ಎಂ.ಬಿ.ನಾಗರಾಜ್ ಕಾಕನೂರು ಅವರು ಶಿವಶರಣ ಹಡಪದ ಅಪ್ಪಣ್ಣನವರ ಕುರಿತು ಉಪನ್ಯಾಸ ನೀಡಿ, 12ನೇ ಶತಮಾನದ ಶಿವಶರಣರು ಅಸಮಾನತೆಯ ಕಂದರ ಮುಚ್ಚಿ ಸರ್ವರಿಗೆ ಸಮಾನತೆಯ ಬೆಳಕನ್ನು ಕೊಟ್ಟರು. ಕೆಲವರು ಸ್ವತ್ತಾಗಿದ್ದ ಜ್ಞಾನವನ್ನು ಸರ್ವರ ಸ್ವತ್ತಾಗಿ ಮಾಡಿದರು. ಕಾಯಕ ಸಿದ್ಧಾಂತದ ಮೂಲಕ ಹೊಸ ಆರ್ಥಿಕ ನೀತಿಯನ್ನು ತರಲಾಯಿತು. ಲಿಂಗ ಜಾತಿಯ ಸೂಚಕವಲ್ಲ. ಅದು ಜ್ಯೋತಿಯ ಸೂಚಕ ಎಂದು ಹೇಳಿದರು. -ಎಂ.ಬಿ.ನಾಗರಾಜ್ ಕಾಕನೂರು, ಸಾಹಿತಿ

**ಹಡಪದ ಅಪ್ಪಣ್ಣ ಬಹಳ ಸೇವಾನಿಷ್ಟ ಹಾಗೂ ಪ್ರಮಾಣಿಕರಾಗಿದ್ದರು**

ಹಡಪದ ಅಪ್ಪಣ್ಣ ಬಹಳ ಸೇವಾನಿಷ್ಟ ಹಾಗೂ ಪ್ರಮಾಣಿಕರಾಗಿದ್ದರು. ಕಲ್ಲಿಗೆ ಸಂಸ್ಕಾರ ಕೊಟ್ಟರೆ ಶಿಲೆ, ಮಣ್ಣಿಗೆ ಸಂಸ್ಕಾರ ಕೊಟ್ಟರೆ ಮಡಕೆ, ಬಿದಿರಿಗೆ ಸಂಸ್ಕಾರ ಕೊಟ್ಟರೆ ಕೊಳಲು, ಸಗಣಿಗೆ ಸಂಸ್ಕಾರ ಕೊಟ್ಟರೆ ಭಸ್ಮ, ಆಹಾರಕ್ಕೆ ಸಂಸ್ಕಾರ ಕೊಟ್ಟರೆ ಪ್ರಸಾದ, ನರನಿಗೆ ಸಂಸ್ಕಾರ ಕೊಟ್ಟರೆ ಹರ, ನೀರಿಗೆ ಸಂಸ್ಕಾರ ಕೊಟ್ಟರೆ ತೀರ್ಥ, ಜೀವಕ್ಕೆ ಸಂಸ್ಕಾರ ಕೊಟ್ಟರೆ ಜಂಗಮ ಸ್ವರೂಪಿಯಾಗುತ್ತಾನೆಂದು ತೋರಿಸಿಕೊಟ್ಟವರು ಬಸವಣ್ಣ ಹಾಗೂ ಹಡಪದ ಅಪ್ಪಣ್ಣ ಎಂದು ಹೇಳಿದರು.

## ಶಿವಶರಣ ಹಡಪದ ಅಪ್ಪಣ್ಣ ಬಸವಣ್ಣನವರ ಬಲಗೈ ಬಂಟನೆಂದೇ ಹೆಸರು ಪಡೆದಿದ್ದರು

• ಉದಯವಾಹಿನಿ, ಚಿಂಚೋಳಿ

ಶಿವಶರಣ ಹಡಪದ ಅಪ್ಪಣ್ಣ 12ನೇ ಶತಮಾನದ ವಚನ ಚಳುವಳಿ ಮತ್ತು ಸಾಮಾಜಿಕ ಕ್ರಾಂತಿಯ ಹರಿಕಾರರಲ್ಲಿ ಒಬ್ಬರಾಗಿ ಇವರು ಹಡಪದ ಸಮಾಜದವರಾಗಿದ್ದು ಬಸವಣ್ಣನವರ ಬಲಗೈ ಬಂಟನೆಂದೇ ಹೆಸರು ಪಡೆದಿದ್ದರು ಎಂದು ತಹಶೀಲ್ದಾರ್ ಸುಬ್ಬಣ್ಣ ಜಮಖಂಡಿ ಹೇಳಿದರು.

ಪಟ್ಟಣದ ಚಂದಾಪೂರದ ತಹಶೀಲ್ ಕಾರ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಶಿವಶರಣ ಹಡ ಪದ ಅಪ್ಪಣ್ಣನವರ ಜಯಂತಿಯ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರ ಅವರು, ಬಸವಣ್ಣನವರ ಬಾಲ್ಯದ ಒಡನಾಡಿಗಳಾಗಿ ವಿಶ್ವದ ಪ್ರಪ್ರ ಥಮ ಪ್ರಜಾಪ್ರಭುತ್ವದ ಸಂಸತ್ತು ಎಂದೇ ಹೆಸರಾದ ಅನುಭವ ಮಂಟಪದಲ್ಲಿ ಬಸವಣ್ಣನವರಿಗೆ ಪ್ರಧಾನ ಕಾರ್ಯದರ್ಶಿಗಳಾಗಿ ಬಸವಣ್ಣನವರಿಗೆ ಯಾವುದೇ ರೀತಿಯ ಮುಜುಗುರವಾಗದಂತೆ ಕಾರ್ಯನಿರ್ವಹಿಸಿದ ಹೆಗ್ಗಳಿಕೆ ಇವರ ಕಾರ್ಯಕ್ಷಮತೆಗೆ ಇಂದಿನವರೆಗೆ ಕನ್ನಡಿಯಾಗಿದೆ.


ಉದಯವಾಹಿನಿ ಚಿತ್ರ

ಹಡಪದ ಅಪ್ಪಣ್ಣನವರ ಧರ್ಮಪತ್ನಿ ಲಿಂಗಮ್ಮನವರೂ ಸಹ ಮಹಾನ ವಚನಗಾರ್ತಿಯಾಗಿದ್ದರು, ಇವರು ವಿಜಯಪುರ ಜಿಲ್ಲೆಯ ತಂಗಡಗಿ ಗ್ರಾಮದವರು ಅಲ್ಲಿಯೆ ಸಮಾಧಿಯೂ ಸಹಯಿದ್ದು ಅಪ್ಪಣ್ಣನವರು ಸುಮಾರು 250ಕ್ಕೂ ಹೆಚ್ಚು ವಚನಗಳನ್ನು ಅಪ್ಪಣ್ಣಪ್ರಿಯ ಚನ್ನಬಸವಣ್ಣ ಎಂಬ ಅಂಕಿತನಾಮದಿಂದ ವಚನಗಳನ್ನು ರಚಿಸಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಪುರಸಭೆ ಕಾಶಿನಾಥ ಧನ್ನಿ, ಪಿಆರ್‌ಇ ಎಇಇ ಇಂದುಧರ ಮಂಗಲಗಿ, ಕೃಷಿ ವೀರಶೆಟ್ಟಿ ರಾಠೋಡ್, ಸುಭಾಷ್ ನಿಡಗುಂದಾ, ಸಂತೋಷಕುಮಾರ ಹಡಪದ, ರೇವಣಸಿದ್ದಪ್ಪಾ ಮೋಘಾ, ಮಲ್ಲಪ್ಪ, ವೀರೇಶ ಚಿಮ್ಮಾಯಿದ್ಲಾಯಿ, ಬಸವರಾಜ, ಮಂಜುನಾಥ, ಚಿತ್ರಶೇಖರ, ಅಂಬರೀಶ್, ಸಂತೋಷ, ಗಣೇನ, ಸಿದ್ದಲಿಂಗ, ಕಮಲಾಕರ, ಮಲ್ಲಿಕಾರ್ಜುನ, ಫಾಳಪ್ಪ, ನಾಗಣ್ಣ, ನಾಗೇಶ, ಸುಧಾಕರ, ಆನಂದ, ಜಗನ್ನಾಥ, ಅನೇಕರಿದ್ದರು.


> ಬಸವಣ್ಣನವರಿಗೆ ಅಪ್ಪಣ್ಣನವರು ಪ್ರಾಣವೇ ಆಗಿದ್ದರೆಂಬುದಕ್ಕೆ ಕಲ್ಯಾಣಕ್ರಾಂತಿಯ ಕೊನೆಯ ದಿನಗಳನ್ನು ತಿಳಿದುಕೊಳ್ಳಬೇಕು, ಒಬ್ಬ ಕಾರ್ಯದರ್ಶಿ ಹೇಗೆ ಕಾರ್ಯನಿರ್ವಹಿಸಬೇಕೆಂಬುದಕ್ಕೆ ಹಡಪದ ಆಪ್ಪಣ್ಣನವರು ಒಂದು ಉತ್ತಮ ಉದಾಹರಣೆಯಾಗಿದೆ ಇವರ ಜೀವನದ ಬಗ್ಗೆ ಇನ್ನೂ ಹೆಚ್ಚಿನ ಸಂಶೋದನೆಯಾಗಬೇಕಾಗಿದೆ -ಪ್ರೋ.ಮಲ್ಲಿಕಾರ್ಜುನ ಪಾಲಾಮೋರ್

## ಸ್ವಾಮಿನಾಥನ್ ವರದಿ ಜಾರಿಗೊಳಿಸಲು ಮನವಿ

• ಉದಯವಾಹಿನಿ, ಶಿವಮೊಗ್ಗ

ಕೇಂದ್ರ ಸರ್ಕಾರದಿಂದ ಕೃಷಿಗಾಗಿ ಪ್ರತ್ಯೇಕ ಬಜೆಟ್ ರೂಪಿಸಬೇಕು. ಡಾ.ಸ್ವಾಮಿನಾಥನ್ ವರದಿಗೆ ಕಾಯ್ದೆಯ ಸ್ವರೂಪ ನೀಡಬೇಕು ಎಂಬುದು ಸೇರಿದಂತೆ ಹಲವು ಬೇಡಿಕೆಗಳ ಈಡೇರಿಸಲು ಒತ್ತಾಯಿಸಿ ರೈತ ಸಂಘದಿಂದ ಶುಕ್ರವಾರ ಪ್ರತಿಭಟನೆ ನಡೆಸಿ ಸಂಸದ ಬಿ.ವೈ. ರಾಘವೇಂದ್ರ ಅವರಿಗೆ ಮನವಿ ಸಲ್ಲಿಸಲಾಯಿತು.

ಕೇಂದ್ರ ಸರ್ಕಾರ ರೈತರ ಬಗ್ಗೆ ನಿರ್ಲಕ್ಷ್ಯ ಧೋರಣೆ ಹೊಂದಿದೆ. ಕೃಷಿ ಕಾಯ್ದೆಗಳನ್ನು ಹಿಂತೆಗೆದುಕೊಳ್ಳುವಂತೆ ಒತ್ತಾಯಿಸಿ ದೆಹಲಿಯ ಗಡಿಗಳಲ್ಲಿ ನಡೆದ ಹೋರಾಟದಲ್ಲಿ ಸುಮಾರು 736 ರೈತರು ಹುತಾತ್ಮರಾಗಿದ್ದಾರೆ. ರೈತರಿಗೆ ಸಂಬಂಧಿಸಿದಂತೆ ಅನೇಕ ಜ್ವಲಂತ ಸಮಸ್ಯೆಗಳಿವೆ. ಲೋಕಸಭೆ ಅಧಿವೇಶನದಲ್ಲಿ ಅವುಗಳತ್ತ ಗಮನಹರಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಯಿತು. ಎಲ್ಲಾ ಬೆಳೆಗಳಿಗೂ ಕನಿಷ್ಠ ಬೆಂಬಲ ಬೆಲೆ ನೀಡಬೇಕು. ರೈತರ ಆತ್ಮಹತ್ಯೆ ತಪ್ಪಿಸಬೇಕು. ಕೃಷಿ ಕ್ಷೇತ್ರದಲ್ಲಿ ಖಾಸಗೀಕರಣ ನಿಲ್ಲಿಸಬೇಕು.


ಉದಯವಾಹಿನಿ ಚಿತ್ರ

ರೈತರು ಕೃಷಿ ಕಾರ್ಮಿಕರಿಗೆ ಪಿಂಚಣಿ ವ್ಯವಸ್ಥೆ ಜಾರಿಗೆ ತರಬೇಕು. ಭೂಸ್ವಾಧೀನ ಮತ್ತು ಪರಿಹಾರ ಪುನರ್ವಸತಿ ಕಾಯ್ದೆ ಪರಿಷ್ಕರಣೆ ಮಾಡಬೇಕು. ರೈತರ ಜೀವ ಹಾನಿಗೆ ನೀಡುವ ಪರಿಹಾರ ಮೊತ್ತ 1 ಕೋಟಿಗೆ ಏರಿಸಬೇಕು. ಕೃಷಿಯನ್ನು ಖಾಸಗೀಕರಣ ಗೊಳಿಸಬಾರದು. ಜಿಎಸ್ಟಿ ಕಾಯ್ದೆಗೆ ತಿದ್ದುಪಡಿ ತರಬೇಕು ಎಂಬುದು ಸೇರಿದಂತೆ ಹಲವು ಬೇಡಿಕೆಗಳ ಈಡೇರಿಸುವಂತೆ ಒತ್ತಾಯಿಸಲಾಯಿತು.

## ಕನ್ನಡಿಗರಿಗೆ ಶೇ. 75ರಷ್ಟು ಮೀಸಲಾತಿ ಕಲ್ಪಿಸಲು ಆಗ್ರಹ

• ಉದಯವಾಹಿನಿ, ಲಿಂಗಸುಗೂರು

ರಾಜ್ಯದ ಸರ್ಕಾರಿ, ಅರೆ ಸರ್ಕಾರಿ ಸೇರಿದಂತೆ ಖಾಸಗಿ ಕಂಪನಿಗಳಲ್ಲಿ ವಿವಿಧ ಹುದ್ದೆಗಳ ನೇಮಕಾತಿಯಲ್ಲಿ ಕನ್ನಡಿಗರಿಗೆ ಶೇ 75ರಷ್ಟು ಮೀಸಲಾತಿ ಸೌಲಭ್ಯ ಕಲ್ಪಿಸಲು ಸರ್ಕಾರ ವಿಧೇಯಕ ಜಾರಿ ಮಾಡಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣಶೆಟ್ಟಿ ಬಣ) ಕಾರ್ಯಕರ್ತರು ಒತ್ತಾಯಿಸಿದರು.

ಉಪ ವಿಭಾಗಾಧಿಕಾರಿ ಶಿಂಧೆ ಅವಿನಾಶ ಸಂಜೀವನ್ ಅವರಿಗೆ ಮನವಿ ಸಲ್ಲಿಸಿ,'ರಾಜ್ಯದಲ್ಲಿ ಸ್ಥಾಪನೆಗೊಳ್ಳುವ ಕಂಪನಿಗಳಲ್ಲಿ ಸ್ಥಳೀಯರಿಗೆ ಉದ್ಯೋಗ ಕಲ್ಪಿಸುವ ವಿಧೇಯಕ-2024 ಅನುಷ್ಠಾನಕ್ಕೆ ತರಬೇಕು. ವೃಂದವಾರು ಮೀಸಲಾತಿ ಘೋಷಿಸುವ ಬದಲು ಕನಿಷ್ಠ ಶೇ 75ರಷ್ಟು ಹುದ್ದೆಗಳಲ್ಲಿ ನಮ್ಮವರಿಗೆ ಆದ್ಯತೆ ನೀಡಲು ಸರ್ಕಾರ ದಿಟ್ಟ ನಿರ್ಧಾರ ಪ್ರಕಟಿಸಬೇಕು' ಎಂದು ಗಮನ ಸೆಳೆದರು.


ಉದಯವಾಹಿನಿ ಚಿತ್ರ

ಕನ್ನಡ ನೆಲ, ಜಲ, ವಿದ್ಯುತ್ ಸೇರಿ ಸರ್ಕಾರಿ ಸೌಲಭ್ಯ ಪಡೆದುಕೊಳ್ಳುವ ಕಂಪನಿಗಳು ವಿವಿಧ ಹುದ್ದೆಗಳಲ್ಲಿ ಶೇ 75ರಷ್ಟು ಅವಕಾಶ ಕಲ್ಪಿಸದೆ ಹೋದರೆ ನಿಷೇಧಿಸಬೇಕು. ಅಧಿವೇಶನದಲ್ಲಿ ವಿಶೇಷ ವಿಧೇಯಕ ಮಂಡಿಸಿ ಜಾರಿಗೆ ತರಬೇಕು. ಇಲ್ಲದಿದ್ದರೆ ಹೋರಾಟ ನಡೆಸುತ್ತೇವೆ ಎಂದು ಎಚ್ಚರಿಕೆ ನೀಡಿದರು. ತಾಲ್ಲೂಕು ಘಟಕದ ಅಧ್ಯಕ್ಷ ಆಂಜನೇಯ ಭಂಡಾರಿ, ಮುಖಂಡರಾದ ಭೀಮೇಶ ನಾಯಕ, ಕುರುಮೇಶ ನಾಯಕ, ಪ್ರಭಾಕರ ಗಸ್ತಿ, ಸಲೀಂಖಾನ್, ಶಿವು ಪತ್ತಾರ, ಮುತ್ತುರಾಜು, ನಾಗರಾಜ ಗುತ್ತೆದಾರ ಹಾಗೂ ಸಿದ್ದು ಚಲುವಾದಿ ಭಾಗವಹಿಸಿದ್ದರು.

## ಲೇಖಕನಿಗೆ ಪ್ರಭುತ್ವ ಪ್ರಶ್ನಿಸುವ ಬದ್ಧತೆ ಇರಬೇಕು: ಡಾ.ವೀರಶೇಟ್ಟಿ ಗಾರಂಪಳ್ಳಿ

• ಉದಯವಾಹಿನಿ, ಚಿಂಚೋಳಿ

ಲೇಖಕನಿಗೆ ಪ್ರಭುತ್ವ ಪ್ರಶ್ನಿಸುವ ಬದ್ಧತೆ ಇರಬೇಕು ಬರಹಗಾರ ಸ್ವತಂತ್ರ ವಿಚಾರಧಾರೆಯೊಂದಿಗೆ ಸಮರ್ಥವಾಗಿ ಸರ್ಕಾರಕ್ಕೆ ಸಮಸ್ಯೆಗಳ ಅರಿವು ಮಾಡಿಕೊಡಬೇಕು,ಕೇವಲ ಸಮಸ್ಯೆಗಳನ್ನು ಹೇಳಿದರೆ ಮಾತ್ರ ಸಾಲದು ಅವುಗಳಿಗೆ ಪರಿಹಾರವನ್ನೂ ಸೂಚಿಸಬೇಕು,ಅಂತಹವರು ಮಾತ್ರ ಸಾಮಾಜಿಕ ಕಳಕಳಿಯುಳ್ಳ ಲೇಖಕರಾಗುತ್ತಾರೆಂದು ಕಲಬುರ್ಗಿ ವಿಭಾಗೀಯ,ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆಯ ನಿರ್ದೇಶಕ ಡಾ.ವೀರಶೆಟ್ಟಿ ಗಾರಂಪಳ್ಳಿ ಅಭಿಪ್ರಾಯ ವ್ಯಕ್ತಪಡಿಸಿದರು.

ಪಟ್ಟಣದ ಚಂದಾಪೂರದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ತಾಲ್ಲೂಕ ಘಟಕ ವತಿಯಿಂದ ಏರ್ಪಡಿಸಿದ ಶಿಕ್ಷಕ ಬಸವರಾಜ ಐನೋಳಿಯವರು ರಚಿಸಿದ ಇಂಜಿನಿಯರುಗಳು ಶಿಕ್ಷಕರಾದರೆ... ಕೃತಿಯನ್ನು ಪರಿಚಯಿಸುತ್ತಾ ಮಾತನಾಡಿದರು.


ಉದಯವಾಹಿನಿ ಚಿತ್ರ

**ವಿದ್ಯಾರ್ಥಿಗಳಿಗೆ ಪುಸ್ತಕಗಳಿಂದ ಮಾತ್ರ ಪರಿಪೂರ್ಣವಾದ ಜ್ಞಾನ**

ಕಲಬುರ್ಗಿ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಡಾ.ಮಲ್ಲಿಕಾರ್ಜುನ ವಡ್ಡನ ಕೇರಿ ಯವರು ಪುಸ್ತಕ ಲೋಕಾರ್ಪಣೆ ಮಾಡಿ ಮಾತನಾಡಿದ ಅವರು, ಗ್ರಂಥಗಳು ಜ್ಞಾನದ ಭಂಡಾರಗಳಾಗಿವೆ. ವಿದ್ಯಾರ್ಥಿಗಳಿಗೆ ಪುಸ್ತಕಗಳಿಂದ ಮಾತ್ರ ಪರಿಪೂರ್ಣವಾದ ಜ್ಞಾನ ಲಭಿಸುತ್ತದೆ, ಇದಕ್ಕೆ ಪರ್ಯಾಯ ಮಾರ್ಗಗಳಿಲ್ಲ,ಅದಕ್ಕಾಗಿ ವಿದ್ಯಾರ್ಥಿಗಳು ಗ್ರಂಥ ಭಂಡಾರಗಳನ್ನು ಸರಿಯಾಗಿ ಉಪಯೋಗಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಬಿಇಓ ವಿ.ಲಕ್ಷ್ಮಯ್ಯ,ಬಿ ಆರ್ ಸಿ ಸಮನ್ವಯಾಧಿಕಾರಿ ನಾಗಶೆಟ್ಟಿ ಭದ್ರಶೆಟ್ಟಿ,ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ದೇವೇಂದ್ರಪ್ಪ ಹೋಳ್ಕರ್, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸುರೇಶ ಕೊರವಿ,ಕಮಲಾಪುರ ತಾಲ್ಲೂಕ ಶರಣ ಸಾಹಿತ್ಯ ಪರಿಷತನ ಅಧ್ಯಕ್ಷ ಡಾ.ಶರಣಬಸಪ್ಪ ವಡ್ಡನಕೇರಿ,ವಿಶ್ವನಾಥ ಮಂಗಲಗಿ, ಸುರೇಶ ದೇಶ ಪಾಂಡೆ,ಶಾಮರಾವ ಉಪಸ್ಥಿತರಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶರಣ ಸಾಹಿತ್ಯ ಪರಿಷತ್ತಿನ ಗೌರವಾಧ್ಯಕ್ಷ ಪ್ರೊ.ಮಲ್ಲಿಕಾರ್ಜುನ ಪಾಲಾಮೂರ ವಹಿಸಿದ್ದರು. ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇ.90ಕ್ಕೂ ಹೆಚ್ಚು ಅಂಕಗಳನ್ನು ಗಳಿಸಿದ ತಾಲ್ಲೂಕಿನ 29 ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ನೀಡಿ ಸನ್ಮಾನಿಸಲಾಯಿತು. ಶ.ಸಾ.ಪ.ಅಧ್ಯಕ್ಷ ಬಸವರಾಜ ಐನೋಳಿ ಪ್ರಸ್ತಾವಿಕ ಮಾತನಾಡಿದರು,ಗಣಪತ ದೇವಕತ್ತೆ ಸ್ವಾಗತಿಸಿದರು.

## ಹಡಪದ ಅಪ್ಪಣ್ಣನವರ ತತ್ವ ಆದರ್ಶ ಜೀವನದಲ್ಲಿ ಅಳವಡಿಸಿಕೊಳ್ಳಿ: ಶರಣಬಸವ ಕಲ್ಲಾ

• ಉದಯವಾಹಿನಿ, ಜೇವರ್ಗಿ

ತಾಲ್ಲೂಕ ಆಡಳಿತ ವತಿಯಿಂದ ಮಿನಿ ವಿಧಾನಸೌಧದ ಕಚೇರಿಯಲ್ಲಿ ಶರಣ ಹಡಪದ ಅಪ್ಪಣ್ಣನವರ ಜಯಂತೋತ್ಸವ ಆಚರಿಸಲಾಯಿತು. ತಾಲ್ಲೂಕ ದಂಡಾಧಿಕಾರಿ ಮಲ್ಲಣ್ಣ ಯಲಗೋಡ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು. ಸಮಸ್ತ ಕುಲಬಾಂಧವರಿಗೂ ಹಾಗೂ ಸಮಾಜದ ಗಣ್ಯರಿಗೂ ಮತ್ತು ವಚನಕಾರ ಶರಣ ಹಡಪದ ಅಪ್ಪಣ್ಣನವರ ಅವರ ಅಭಿಮಾನಿಗಳಿಗೂ ಹಡಪದ ಅಪ್ಪಣ್ಣನವರ ಜಯಂತೋತ್ಸವದ ಶುಭಾಶಯಗಳು ತಿಳಿಸಿದರು. ನಂತರ ಬಸವ ಕೇಂದ್ರದ ತಾಲ್ಲೂಕ ಅಧ್ಯಕ್ಷರಾದ ಶರಣಬಸವ ಕಲ್ಲಾ ಮಾತನಾಡಿದರು. ಮೊಟ್ಟ ಮೊದಲನೆಯದಾಗಿ ಸರಕಾರಕ್ಕೆ ಧನ್ಯವಾದಗಳು ತಿಳಿಸುತ್ತೇನೆ. ಏಕೆಂದರೆ ಎಲ್ಲಾ ವಚನಕಾರರ ಜಯಂತೋತ್ಸವ ಮಾಡುತ್ತಿರುವ ಸರ್ಕಾರಕ್ಕೆ ಧನ್ಯವಾದಗಳು ಹೇಳುತ್ತೇನೆ ಎಂದು ಹೇಳಿದರು. ಬಸವಣ್ಣನವರ ಆಪ್ತ ಕಾರ್ಯದರ್ಶಿಯಾಗಿ ಸಮಾಜದ ಹೋರಾ ಕೋರೆಗಳನ್ನು ತಮ್ಮ ವಚನದ ಮೂಲಕ ತಿದ್ದಿದ ಮಾಹನ ಶರಣ ಹಡಪದ ಅಪ್ಪಣ್ಣನವರು. ಜಾತಿ ಪದ್ಧತಿ ಮೂಢನಂಬಿಕೆಯನ್ನು ವಿರೋಧಿಸಿ ತುಳಿತಕ್ಕೆ ಒಳಪಟ್ಟ ಜನಾಂಗದ ಧ್ವನಿಯಾಗಿ ಬಸವಣ್ಣನವರ ಬಲಗೈ ಬಂಟನಾಗಿ ಅನೇಕ ವಚನಗಳ ರಚನೆ ಮಾಡಿ ಜನರಲ್ಲಿ ವಚನ ಕ್ರಾಂತಿಯನ್ನು ಮೂಡಿಸಿದ ಅಪ್ಪಣ್ಣನವರು. ಜಗಜ್ಯೋತಿ ಬಸವಣ್ಣನವರ ಹಾಕಿಕೊಟ್ಟ ತತ್ವದ ಮೇಲೆ ತಮ್ಮ ಕಾಯಕವನ್ನು ಮಾಡಿ ಸಾರ್ವಜನಿಕರ ಮುಖ ಸೌಂದರ್ಯವನ್ನು ಅಂಧಗೊಳಿಸಿ ಕಾಯಕದಲ್ಲಿ ಕೈಲಾಸವನ್ನು ಕಂಡ ಶರಣ ಹಡಪದ ಅಪ್ಪಣ್ಣನವರು. ಇಂಥಹ ಮಹಾನ್ ಶರಣರ ತತ್ವ ಆದರ್ಶ ಮತ್ತು ವಚನಗಳು ತಮ್ಮ ಜೀವನದಲ್ಲಿ ಇಂದಿನ ಯುವಕರು ಅಳವಡಿಸಿಕೊಳ್ಳಬೇಕು ಎಂದು ಶರಣಬಸು ಕಲ್ಲಾ ಹೇಳಿದರು.


ಉದಯವಾಹಿನಿ ಚಿತ್ರ

ತಾಲ್ಲೂಕ ಹಡಪದ ಸಮಾಜದ ಅಧ್ಯಕ್ಷರಾದ ತಿಪ್ಪಣ್ಣ ನರಬೋಳ, ಚಂದ್ರಶೇಖರ್ ಸಿರಿ, ಬಂಡೆಪ್ಪ ಕೊಳುಕೂರ, ಸಂತೋಷ್ ಮದರಿ, ಮಲ್ಲು ಅಡಪದ್, ಶಿವಪ್ಪ ಗುಬ್ಬ್ಯಾಡ್, ಶಿವರಾಯ ಹಡಪದ ಹನ್ನನೂರ್, ಸಂತೋಷ್, ಸಾಯ್ಬಣ್ಣ ಕಲ್ಯಾಣಕರ್, ಲಕ್ಷ್ಮಿಕಾಂತ್, ಗೌಡಪ್ಪಗೌಡ, ಗಂಗಾಧರ್ ವಂದಿಸಿದರು.

## ಕಡಲ್ಕೊರೆತ: ಪರಿಹಾರ ತಕ್ಷಣ ಬಿಡುಗಡೆಗೆ ಕ್ರಮ

• ಉದಯವಾಹಿನಿ, ಉಡುಪಿ

ಜಿಲ್ಲೆಯ ವಿವಿಧೆಡೆ ಕಲ್ಕೊರೆತ ಸಂಭವಿಸಿದ್ದು, ತಕ್ಷಣ 5 ಕೋಟಿ ಪರಿಹಾರ ಬಿಡುಗಡೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮಿ ಹೆಬ್ಬಾಳಕರ ಹೇಳಿದರು. ಜಿಲ್ಲೆಯಲ್ಲಿ ಕಡಲ್ಕೊರೆತ ಉಂಟಾಗಿರುವ ಮತ್ತು ನೆರೆಯಿಂದ ಹಾನಿ ಸಂಭವಿಸಿರುವ ಪ್ರದೇಶಗಳಿಗೆ ಭಾನುವಾರ ಭೇಟಿ ನೀಡಿ ಪರಿಶೀಲಿಸಿದ ಬಳಿಕ ಆವರು ಸುದ್ದಿಗಾರರ ಜೊತೆ ಮಾತನಾಡಿದರು. ಹಳೆ ಬಾಕಿ ಬಿಡುಗಡೆಗೂ ಪ್ರಸ್ತಾವನೆ ಸಲ್ಲಿಸಲಿದ್ದೇವೆ ಎಂದರು. ಮಳೆ, ಪ್ರವಾಹದ ಸಂದರ್ಭದಲ್ಲಿ ಪ್ರಾಣಹಾನಿ ಸಂಭವಿಸದಂತೆ ಜಿಲ್ಲಾಡಳಿತ ಮುನ್ನೆಚ್ಚರಿಕೆ ವಹಿಸಿದೆ ಎಂದು ಸಚಿವೆ ತಿಳಿಸಿದರು. ತೀವ್ರ ಕಡಲ್ಕೊರೆತ ಉಂಟಾಗಿರುವ ಮಲ್ಪೆ ಸಮೀಪದ ಗುಜ್ಜರಬೆಟ್ಟಿಗೆ ಭೇಟಿ ನೀಡಿದ ಸಚಿವೆ ಸ್ಥಳೀಯರಿಂದ ಮಾಹಿತಿ ಪಡೆದರು.


ಉದಯವಾಹಿನಿ ಚಿತ್ರ

# ನಾನು ರಾಜ್ಯಕ್ಕೆ ಬರುವುದು ಕಾಂಗ್ರೇಸ್ ಸರ್ಕಾರಕ್ಕೆ ಸಹಿಸಲಾಗುತ್ತಿಲ್ಲ

### ಕುಮಾರಸ್ವಾಮಿ ಮಳೆಹಾನಿ ಸಮೀಕ್ಷೆ ನಡೆಸಿದ್ದನ್ನು ವರದಿ ಮಾಡಬಾರದು ಎಂದು ಮಾಧ್ಯಮಗಳಿಗೆ ನಿರ್ಬಂಧ ಹೇರಿದ್ದು ಎಷ್ಟು ಸರಿ

• ಉದಯವಾಹಿನಿ ಸಕಲೇಶಪುರ

ನಾನು ರಾಜ್ಯದ ಸಂಸದನಾಗಿ, ಕೇಂದ್ರ ಸಚಿವನಾಗಿ ರಾಜ್ಯಕ್ಕೆ ಬರುವುದನ್ನು ಸಹಿಸಲು ಕಾಂಗ್ರೆಸ್ ನಾಯಕರಿಗೆ ಸಾಧ್ಯವಾಗುತ್ತಿಲ್ಲ. ಅದಕ್ಕಾಗಿಯೇ ರಾಜ್ಯ ಸರಕಾರ ನನಗೆ ಹೆಜ್ಜೆ ಹೆಜ್ಜೆಗೂ ಅಡ್ಡಿಪಡಿಸುತ್ತಿದೆ ಎಂದು ಕೇಂದ್ರದ ಭಾರೀ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರು ನೇರ ಆರೋಪ ಮಾಡಿದರು.

ಇಲ್ಲಿನ ಮಳೆಹಾನಿ ಪ್ರದೇಶಗಳಿಗೆ ಪ್ರತಿಪಕ್ಷ ನಾಯಕ ಆರ್.ಅಶೋಕ್ ಅವರೊಂದಿಗೆ ಭೇಟಿ ನೀಡಿದ ನಂತರ ಅವರು ಮಾಧ್ಯಮಗಳ ಜತೆ ಮಾತನಾಡಿದರು. ಸಕಲೇಶಪುರ ತಾಲ್ಲೂಕಿನ ದೊಡ್ಡ ತಪ್ಪಲು ಗ್ರಾಮದಲ್ಲಿ ಅವರು ಮಾಧ್ಯಮಗಳ ಪ್ರಶ್ನೆಗಳಿಗೆ ಉತ್ತರಿಸಿದರು.

ಪ್ರತಿಯೊಂದಕ್ಕೂ ಕೇಂದ್ರ ಸರಕಾರದ ಸಹಕಾರ ಕೇಳುವ ರಾಜ್ಯ ಸರಕಾರವು ಒಬ್ಬ ಕೇಂದ್ರ ಸಚಿವ ರಾಜ್ಯಕ್ಕೆ ಬರುವುದನ್ನು ಸಹಿಸುತ್ತಿಲ್ಲ. ನಿನ್ನೆಯ ದಿನ ಉತ್ತರ ಕನ್ನಡ ಜಿಲ್ಲೆಯ ಶಿಶೂರು ಬಳಿ ಗುಡ್ಡ ಕುಸಿದ ಸ್ಥಳಕ್ಕೆ ನಾನು ಭೇಟಿ ನೀಡಿದಾಗ ಐದು ಕಿ.ಮೀ. ಹಿಂದೆಯೇ ಬ್ಯಾರಿಕೇಡ್‌ಗಳನ್ನು ಹಾಕಿ ಮಾಧ್ಯಮಗಳಿಗೆ ನಿರ್ಬಂಧ ಹೇರಲಾಯಿತು. ಕುಮಾರಸ್ವಾಮಿ ಮಳೆಹಾನಿ ಸಮೀಕ್ಷೆ ನಡೆಸಿದ್ದನ್ನು ವರದಿ ಮಾಡಬಾರದು ಎಂದು ಮಾಧ್ಯಮಗಳಿಗೆ ನಿರ್ಬಂಧ ಹೇರಿದ್ದು ಎಷ್ಟು ಸರಿ ಎಂದು ಕುಮಾರಸ್ವಾಮಿ ಅವರು ಪ್ರಶ್ನಿಸಿದರು.

ಯಾವ ಸರಕಾರವೂ ಹತ್ತು ಲಕ್ಷ ಪರಿಹಾರ ನೀಡಲು ಸಾಧ್ಯವೇ ಇಲ್ಲ ಎಂದು ಸಚಿವ ಮಂಕಾಳ ವೈದ್ಯ ಹೇಳಿಕೆ ಬಗ್ಗೆ ಪ್ರತಿಕ್ರಿಯೆ ನೀಡಿದ ಕೇಂದ್ರ ಸಚಿವರು ಅವರಿಗೆ ಯಾವ ಸಂದರ್ಭದಲ್ಲಿ ಎಷ್ಟೆಷ್ಟು ಪರಿಹಾರ ನೀಡಲಾಗಿದೆ ಎಂಬ ಮಾಹಿತಿ ಇದ್ದಂತೆ ಇಲ್ಲ. ಅವರಿಗೆ ಸಮಯ ಸಿಕ್ಕಿದರೆ ಕೊಡುಗು ಜಿಲ್ಲೆಗೆ ಭೇಟಿ ನೀಡಲಿ. 2018ರಲ್ಲಿ ನಾನು ಸಿಎಂ ಆಗಿದ್ದಾಗ ಅಲ್ಲಿ ಭಾರೀ ಪ್ರಮಾಣದಲ್ಲಿ ಭೂಕುಸಿತ ಉಂಟಾದಾಗ ಅನೇಕರು ಮನೆ ಮಠ ಆಸ್ತಿಗಳನ್ನು ಕಳೆದು ನಿರಾಶ್ರಿತರಾಗಿದ್ದರು. ಕೆಲವೇ ತಿಂಗಳಲ್ಲಿ ಎಲ್ಲಾ ನಿರಾಶ್ರಿತ ಕುಟುಂಬಗಳಿಗೆ ತಲಾ ಹತ್ತು ಲಕ್ಷ ರೂ. ವೆಚ್ಚದಲ್ಲಿ ಸುಸಜ್ಜಿತ ಮನೆಗಳನ್ನು ಕಟ್ಟಿಕೊಡಲಾಯಿತು. ಜತೆಗೆ ಒಂದು ಲಕ್ಷ ರೂ. ಪರಿಹಾರ ಕೊಟ್ಟಿದ್ದೇವೆ, ಆಹಾರ ಪದಾರ್ಥ ಕೊಳ್ಳಲು ಐವತ್ತು ಸಾವಿರ ರೂ. ಕೊಟ್ಟಿದ್ದೇವೆ. ಬಹುಶಃ ಸಚಿವರಿಗೆ ಇದೆಲ್ಲಾ ಗೊತ್ತಿಲ್ಲದೆ ಇರಬಹುದು. ದಯಮಾಡಿ ಅವರು ಬಿಡುವು ಮಾಡಿಕೊಂಡು ಹೋಗಿ ಕೊಡಗಿನಲ್ಲಿ ಪರಿಸ್ಥಿತಿ ಯನ್ನು ಅವಲೋಕನ ಮಾಡಲಿ ಎಂದು ಸಲಹೆ ಮಾಡಿದರು.ಮಳೆಹಾನಿ ಪ್ರದೇಶಗಳಿಗೆ ನಾನು, ಅಶೋಕ್ ಒಟ್ಟಿಗೆ ಭೇಟಿ ನೀಡಿದ್ದೇವೆ.

ಈ ಸಂದರ್ಭದಲ್ಲಿ ಮಾಜಿ ಸಚಿವರಾದ ಹೆಚ್.ಕೆ.ಕುಮಾರಸ್ವಾಮಿ, ಶಾಸಕ ಸಿ.ಎನ್.ಬಾಲಕೃಷ್ಣ, ಸ್ವರೂಪ್ ಪ್ರಕಾಶ್, ಸಿಮೆಂಟ್ ಮಂಜುನಾಥ್, ಹೆಚ್.ಕೆ.ಸುರೇಶ್ ಮುಂತಾದವರು ಹಾಜರಿದ್ದರು.

**ಕೇಂದ್ರ ಸಚಿವರು ತಿರುಗೇಟು**



> ಕರ್ನಾಟಕಕ್ಕೆ ನಾನು ಬರುವುದನ್ನೇ ಸಹಿಸಲ್ಲ ಅಂದರೆ ನನ್ನಿಂದ ಏನು ನಿರೀಕ್ಷೆ ಮಾಡುತ್ತಾರೆ ಇವರು? ನಾನು ಬರಲೇಬಾರದು ಎನ್ನುವ ರೀತಿ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಹಾಗೂ ಸಚಿವರು ಹೇಳಿಕೆ ಗಳನ್ನು ನೀಡುತ್ತಿದ್ದಾರೆ. ಸ್ಥಳ ಪರಿಶೀಲನೆ ಮಾಡುವುದು ಜನಪ್ರತಿನಿಧಿಯಾಗಿ ನನ್ನ ಧರ್ಮ. ಮಂಡ್ಯಕ್ಕೆ ಹೋದರೂ ಬೇಡ ಎನ್ನುತ್ತಾರೆ, ಉತ್ತರ ಕನ್ನಡ ಜಿಲ್ಲೆಗೆ ಹೋದರೂ ಅಂದರೆ ಅಲ್ಲಿಗೂ ಬೇಡ ಅಂತಾರೆ. ಸದ್ಯ ಹಾಸನಕ್ಕೆ ಬರಬೇಡಿ ಅನ್ನಲಿಲ್ಲ. ನಾನು ಕರ್ನಾಟಕಕ್ಕೆ ಬರುತ್ತೇನೆ ಎಂದರೆ ಇವರಿಗೆ ಕೈಕಾಲು ನಡುಗುತ್ತದೆ ಎಂದು ಕೇಂದ್ರ ಸಚಿವರು ತಿರುಗೇಟು ಕೊಟ್ಟರು. -ಹೆಚ್.ಡಿ.ಕುಮಾರಸ್ವಾಮಿ

**ನಾನು ಯಾರನ್ನೂ ಟೀಕೆ ಮಾಡಲು ಹೋಗಲ್ಲ**

ಇಲ್ಲಿ ಜಿಲ್ಲಾಡಳಿತ ಸೂಕ್ಷ್ಮವಾಗಿ ನೋಡಲು ಸ್ವಲ್ಪ ಸಹಕಾರ ಕೊಟ್ಟಿದ್ದಾರೆ. ನಿನ್ನೆ ದಿನ ಶಿಶೂರು ಗುಡ್ಡದಲ್ಲಿ ಐದು ಕಿಲೋಮೀಟರ್ ದೂರದಲ್ಲಿ ಮಾಧ್ಯಮಗಳಿಗೆ ತಡೆಗೋಡೆ ಇಟ್ಟು ಏನು ಚಿತ್ರೀಕರಣ ಮಾಡದ ರೀತಿ ಆದೇಶ ಮಾಡಿದ್ದರು. ನಾನು ಯಾರನ್ನೂ ಟೀಕೆ ಮಾಡಲು ಹೋಗಲ್ಲ. ಕೇಂದ್ರ ಹಾಗೂ ರಾಜ್ಯ ಸರಕಾರಗಳು ಪರಸ್ಪರ ವಿಶ್ವಾಸದಲ್ಲಿ ಕೆಲಸ ಮಾಡಬೇಕು. ಬಹುಶಃ ರಾಜ್ಯದ ಸರಕಾರದಲ್ಲಿ ಕೆಲಸ ಮಾಡುತ್ತಿರುವ ಕೆಲ ಸಚಿವರಿಗೆ ಅಂಥ ವಿವೇಕ ಇದ್ದಂತೆ ಇಲ್ಲ ಎಂದು ಅವರು ಕಟುವಾಗಿ ಟೀಕಿಸಿದರು.

# ಭಾರತದ ಅಜೇಯ ಓಟ; ಸತತ 2ನೇ ಜಯ

ಶ್ರೀಲಂಕಾದ ರಂಗಿರಿ ದಂಬುಲ್ಲಾ ಅಂತರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆದ ಮಹಿಳೆಯರ ಟಿ20 ಏಷ್ಯಾಕಪ್‌ನ 5ನೇ ಪಂದ್ಯದಲ್ಲಿ ಯುಎಇ ಮಹಿಳಾ ತಂಡವನ್ನು 78 ರನ್‌ಗಳಿಂದ ಮಣಿಸಿದ ಹರ್ಮನ್‌ಪ್ರೀತ್ ಕೌರ್ ನಾಯಕತ್ವದ ಭಾರತ ಮಹಿಳಾ ತಂಡ ಟೂರ್ನಿಯಲ್ಲಿ ಸತತ ಎರಡನೇ ಗೆಲುವು ದಾಖಲಿಸಿದೆ. ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಟೀಂ ಇಂಡಿಯಾ ನಿಗದಿತ 20 ಓವರ್‌ಗಳಲ್ಲಿ 5 ವಿಕೆಟ್ ಕಳೆದುಕೊಂಡು ದಾಖಲೆಯ 201 ರನ್ ಕಲೆಹಾಕಿತು.

**ದಾಖಲೆಯ 201 ರನ್ ಕಲೆ**



ಈ ದಾಖಲೆ ಮೊತ್ತದ ಗುರಿ ಬೆನ್ನಟ್ಟಿದ ಯುಎಇ ತಂಡ ನಿಯಮಿತ ಅಂತರದಲ್ಲಿ ವಿಕೆಟ್ ಕಳೆದುಕೊಳ್ಳುತ್ತಾ 20 ಓವರ್‌ಗಳಲ್ಲಿ 7 ವಿಕೆಟ್ ಕಳೆದುಕೊಂಡು 123 ರನ್ ಕಲೆಹಾಕಲಷ್ಟೇ ಶಕ್ತವಾಯಿತು. ಭಾರತದ ಪರ ಬ್ಯಾಟಿಂಗ್‌ನಲ್ಲಿ ಮಿಂಚಿದ ನಾಯಕಿ ಹರ್ಮನ್‌ಪ್ರೀತ್ ಕೌರ್ ಹಾಗೂ ರಿಚಾ ಘೋಷ್ ತಲಾ ಅರ್ಧಶತಕ ಸಿಡಿಸಿದರೆ, ಬೌಲಿಂಗ್‌ನಲ್ಲಿ ತಂಡದಿಂದ ಸಾಂಘಿಕ ಪ್ರದರ್ಶನ ಕಂಡು ಬಂತು. ಭಾರತದ ಪರ ಬೌಲಿಂಗ್ ಮಾಡಿದ ಎಲ್ಲಾ ಐವರು ಬೌಲರ್‌ಗಳು ವಿಕೆಟ್ ಪಡೆಯುವಲ್ಲಿ ಯಶಸ್ವಿಯಾದರು.

ಯುಎಇಗೆ 78 ರನ್ ಸೋಲು ಭಾರತ ನೀಡಿದ 202 ರನ್‌ಗಳ ಗುರಿ ಬೆನ್ನಟ್ಟಿದ ಯುಎಇ ತಂಡದ ಯಾವ ಬ್ಯಾಟರ್‌ಗೂ ಬಿಗ್ ಇನ್ನಿಂಗ್ಸ್ ಆಡಲು ಸಾಧ್ಯವಾಗಲಿಲ್ಲ. ಇಡೀ ತಂಡ ನಿಗದಿತ 20 ಓವರ್‌ಗಳಲ್ಲಿ 7 ವಿಕೆಟ್ ಕಳೆದುಕೊಂಡು 123 ರನ್ ಗಳಿಸಲಷ್ಟೇ ಶಕ್ತವಾಯಿತು. ಕವಿಶ ಆಗೋಡೆಗೆ ತಂಡದ ಪರ ಹೆಚ್ಚಿನ ರನ್ ಗಳಿಸಿದರು. ಅವರು 32 ಎಸೆತಗಳಲ್ಲಿ 40 ರನ್‌ಗಳ ಇನಿಂಗ್ಸ್ ಆಡಿದರು. ಇವರನ್ನು ಹೊರತುಪಡಿಸಿ ನಾಯಕಿ ಇಶಾ ರೋಹಿತ್ ಓಜಾ 36 ಎಸೆತಗಳಲ್ಲಿ 38 ರನ್‌ಗಳಿಸಿ ಇನ್ನಿಂಗ್ಸ್ ಆಡಿದರು. ಟೀಂ ಇಂಡಿಯಾ ಪರ ದೀಪ್ತಿ ಶರ್ಮಾ ಅತ್ಯಧಿಕ ಎರಡು ವಿಕೆಟ್ ಪಡೆದರು. ಇವರಲ್ಲದೆ ರೇಣುಕಾ ಠಾಕೂರ್ ಸಿಂಗ್, ತನುಜಾ ಕನ್ವರ್, ಪೂಜಾ ವಸ್ತ್ರಾಕರ್, ರಾಧಾ ಯಾದವ್ ತಲಾ ಒಂದು ವಿಕೆಟ್ ಪಡೆದರು.

### ಹರ್ಮನ್- ರಿಚಾ ಅರ್ಧಶತಕ

**ಇದಾದ ಬಳಿಕ ಹರ್ಮನ್‌ಪ್ರೀತ್ ಮತ್ತು ರಿಚಾ ಘೋಷ್ ಅದ್ಭುತ ಬ್ಯಾಟಿಂಗ್ ಪ್ರದರ್ಶಿಸಿದರು. ಇಬ್ಬರೂ ಅರ್ಧಶತಕ ಬಾರಿಸಿದರು. ಆದರೆ ಹರ್ಮನ್‌ಪ್ರೀತ್ 20ನೇ ಓವರ್‌ನ ಮೊದಲ ಎಸೆತದಲ್ಲಿ ರನೌಟ್ ಆದರು. ಅಂತಿಮವಾಗಿ ಹರ್ಮನ್‌ಪ್ರೀತ್ 47 ಎಸೆತಗಳಲ್ಲಿ 7 ಬೌಂಡರಿ ಹಾಗೂ 1 ಸಿಕ್ಸರ್ ನೆರವಿನಿಂದ 66 ರನ್ ಬಾರಿಸಿದರೆ, ಸಿಡಿಲಬ್ಬರದ ಬ್ಯಾಟಿಂಗ್ ಮಾಡಿದ ರಿಚಾ ಘೋಷ್ 29 ಎಸೆತಗಳಲ್ಲಿ 12 ಬೌಂಡರಿ ಹಾಗೂ 1 ಸಿಕ್ಸರ್ ನೆರವಿನಿಂದ ಅಜೇಯ 64 ರನ್ ಸಿಡಿಸಿದರು. ಈ ಇಬ್ಬರ ಆಟದಿಂದಾಗಿ ಟೀಂ ಇಂಡಿಯಾ 200ರ ಗಡಿ ದಾಟಿತು. ಯುಎಇ ಪರ ಕವಿಶ ಎಗೋಡಗೆ 2 ವಿಕೆಟ್ ಪಡೆದರೆ, ಸಮೈರಾ ಧರಣೀಧಾರಿಕಾ ಮತ್ತು ಹೀನಾ ಹೊಚ್ಚಂದನಿ ತಲಾ 1 ವಿಕೆಟ್ ಪಡೆದರು.**

### ಪವರ್ ಪ್ಲೇನಲ್ಲಿ ಸಮಬಲದ ಹೋರಾಟ

**ಈ ಪಂದ್ಯದಲ್ಲಿ ಯುಎಇ ಟಾಸ್ ಗೆದ್ದು ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿತು. ಹೀಗಾಗಿ ಮೊದಲು ಬ್ಯಾಟಿಂಗ್ ಮಾಡಿದ ಟೀಂ ಇಂಡಿಯಾಕ್ಕೆ ಸ್ಫೋಟಕ ಆರಂಭ ಸಿಕ್ಕಿತು. ತಂಡ ಪವರ್ ಪ್ಲೇನಲ್ಲೇ ಮೊದಲ 3 ವಿಕೆಟ್ ಕಳೆದುಕೊಂಡು 52 ರನ್ ಗಳಿಸಿತ್ತು. ಆರಂಭಿಕ ಆಟಗಾರ್ತಿ ಸ್ಮೃತಿ ಮಂಧಾನ 13, ಶಫಾಲಿ ವರ್ಮಾ 37 ಮತ್ತು ಹೇಮಲತಾ 2 ರನ್ ಗಳಿಸಿ ಔಟಾದರು. ಹೀಗಾಗಿ ಟೀಂ ಇಂಡಿಯಾ 5.1 ಓವರ್ ಗಳಲ್ಲಿ 3 ವಿಕೆಟ್ ನಷ್ಟಕ್ಕೆ 52 ರನ್ ಕಲೆಹಾಕಿತು. ಆ ಬಳಿಕ ಜೊತೆಯಾದ ನಾಯಕಿ ಹರ್ಮನ್‌ಪ್ರೀತ್ ಕೌರ್ ಮತ್ತು ಜೆಮಿಮಾ ರಾಡ್ರಿಗಸ್ ನಾಲ್ಕನೇ ವಿಕೆಟ್‌ಗೆ 54 ರನ್‌ಗಳ ಜೊತೆಯಾಟ ನೀಡಿದರು. ನಂತರ ಜೆಮಿಮಾ 13 ಎಸೆತಗಳಲ್ಲಿ 14 ರನ್ ಗಳಿಸಿ ಔಟಾದರು.**

# ವಿವಿಎಸ್ ಲಕ್ಷ್ಮಣ್‌ಗೆ ಐಪಿಎಲ್ ಫ್ರಾಂಚೈಸಿಯಿಂದ ಬಂತು ಮೆಗಾ ಆಫರ್

ಐಪಿಎಲ್ ತಂಡ ಲಕ್ನೋ ಸೂಪರ್ ಜೈಂಟ್ಸ್ ತನ್ನ ಕೋಚಿಂಗ್ ಸ್ಟಾಫ್‌ನಲ್ಲಿ ವಿವಿಎಸ್ ಲಕ್ಷ್ಮಣ್ ಅವರನ್ನು ಸೇರಿಸಿಕೊಳ್ಳಲು ಆಸಕ್ತಿ ತೋರಿಸಿದೆ. ಪ್ರಸ್ತುತ ಲಕ್ಷ್ಮಣ್ ಬೆಂಗಳೂರಿನ ರಾಷ್ಟ್ರೀಯ ಕ್ರಿಕೆಟ್ ಅಕಾಡೆಮಿ (ಎನ್‌ಸಿಎ) ಮುಖ್ಯಸ್ಥರಾಗಿದ್ದು, ಅವರ ಅಧಿಕಾರಾವಧಿ ಸೆಪ್ಟೆಂಬರ್‌ನಲ್ಲಿ ಕೊನೆಗೊಳ್ಳುತ್ತದೆ.
2025 ರ ಐಪಿಎಲ್ ಆರಂಭಕ್ಕೆ ಇನ್ನು ಸಾಕಷ್ಟು ಸಮಯವಿದೆ. ಆದರೂ ಹಲವು ಫ್ರಾಂಚೈಸಿಗಳು ಮುಂದಿನ ಸೀಸನ್‌ಗೆ ಈಗಾಗಲೇ ಸಿದ್ಧತೆ ಆರಂಭಿಸಿವೆ. ವಾಸ್ತವವಾಗಿ ಮುಂದಿನ ಐಪಿಎಲ್ ಆರಂಭಕ್ಕೂ ಮೊದಲು ಮೆಗಾ ಹರಾಜು ನಡೆಯಲಿದೆ. ಹೀಗಾಗಿ ಎಲ್ಲಾ ಫ್ರಾಂಚೈಸಿಗಳು ಹೊಸದಾಗಿ ತಂಡವನ್ನು ರಚಿಸಬೇಕಾಗಿದೆ. ಈ ಕಾರಣಕ್ಕಾಗಿ, ಫ್ಯ್ರಾಂಚೈಸ್‌ಗಳು ಈಗಾಗಲೇ ಖ್ಯಾತನಾಮರ ಹಿಂದೆ ಬಿದ್ದಿವೆ.

ವರದಿ ಪ್ರಕಾರ, ಐಪಿಎಲ್ ತಂಡ ಲಕ್ನೋ ಸೂಪರ್ ಜೈಂಟ್ಸ್ ತನ್ನ ಕೋಚಿಂಗ್ ಸ್ಟಾಫ್‌ನಲ್ಲಿ ವಿವಿಎಸ್ ಲಕ್ಷ್ಮಣ್ ಅವರನ್ನು ಸೇರಿಸಿಕೊಳ್ಳಲು ಆಸಕ್ತಿ ತೋರಿಸಿದೆ. ಪ್ರಸ್ತುತ ಲಕ್ಷ್ಮಣ ಬೆಂಗಳೂರಿನ ರಾಷ್ಟ್ರೀಯ ಕ್ರಿಕೆಟ್ ಅಕಾಡೆಮಿ (ಎನ್‌ಸಿಎ) ಮುಖ್ಯಸ್ಥರಾಗಿದ್ದು, ಅವರ ಅಧಿಕಾರಾವಧಿ ಸೆಪ್ಟೆಂಬರ್‌ನಲ್ಲಿ ಕೊನೆಗೊಳ್ಳುತ್ತದೆ.

ರಾಹುಲ್ ದ್ರಾವಿಡ್ ಭಾರತ ತಂಡದ ಮುಖ್ಯ ಕೋಚ್ ಆದ ನಂತರ, ಅವರ ಸ್ಥಾನ ತುಂಬಿದ್ದ ಲಕ್ಷ್ಮಣ್ ಎನ್‌ಸಿಎ ಮುಖ್ಯಸ್ಥರಾಗಿದ್ದರು. ಆದರೆ ಇದೀಗ ಸಿಕ್ಕಿರುವ ಮಾಹಿತಿ ಪ್ರಕಾರ ಲಕ್ಷ್ಮಣ್, ಎನ್‌ಸಿಎಯಲ್ಲಿ ತನ್ನ ಅಧಿಕಾರಾವಧಿಯನ್ನು ವಿಸ್ತರಿಸಲು ನಿರಾಕರಿಸಿದ್ದಾರೆ. ರಾಹುಲ್ ದ್ರಾವಿಡ್ ಭಾರತ ತಂಡದ ಮುಖ್ಯ ಕೋಚ್ ಆದ ನಂತರ, ಅವರ ಸ್ಥಾನ ತುಂಬಿದ್ದ ಲಕ್ಷ್ಮಣ್ ಎನ್‌ಸಿಎ ಮುಖ್ಯಸ್ಥರಾಗಿದ್ದರು. ಆದರೆ ಇದೀಗ ಸಿಕ್ಕಿರುವ ಮಾಹಿತಿ ಪ್ರಕಾರ ಲಕ್ಷ್ಮಣ್, ಎನ್‌ಸಿಎಯಲ್ಲಿ ತನ್ನ ಅಧಿಕಾರಾವಧಿಯನ್ನು ವಿಸ್ತರಿಸಲು ನಿರಾಕರಿಸಿದ್ದಾರೆ. ಅಲ್ಲದೆ ಗೌತಮ್ ಗಂಭೀರ್‌ಗೂ ಮೊದಲು ಟೀಂ ಇಂಡಿಯಾದ ಮುಖ್ಯ ಕೋಚ್ ಆಗುವಂತೆ ಬಿಸಿಸಿಐ, ವಿವಿಎಸ್ ಲಕ್ಷ್ಮಣ್‌ಗೆ ಮನವಿ ಮಾಡಿತ್ತು.

ಆದರೆ ಲಕ್ಷ್ಮಣ್ ಅವರು ತಂಡದೊಂದಿಗೆ ಹೆಚ್ಚು ಪ್ರಯಾಣಿಸಲು ಇಷ್ಟವಿಲ್ಲದ ಕಾರಣ ಈ ಪ್ರಸ್ತಾಪವನ್ನು ತಿರಸ್ಕರಿಸಿದ್ದರು. ಇದೀಗ ಎನ್‌ಸಿಎ ಮುಖ್ಯಸ್ಥ ಸ್ಥಾನದಿಂದ ಕೆಳಗಿಳಿಯುತ್ತಿರುವ ಲಕ್ಷ್ಮಣ್‌ರನ್ನು ತಂಡಕ್ಕೆ ಸೇರಿಸಿಕೊಳ್ಳಲು ಲಕ್ನೋ ಸೂಪರ್‌ಜೈಂಟ್ಸ್ ಫ್ರಾಂಚೈಸಿ ಮುಂದಾಗಿದೆ ಎಂದು ವರದಿಯಾಗಿದೆ.

ಈಗಾಗಲೇ ಲಕ್ನೋ ಸೂಪರ್‌ಜೈಂಟ್ಸ್ ಆಡಳಿತ ವರ್ಗ ಲಕ್ಷ್ಮಣ್ ಜೊತೆ ಅನೌಪಚಾರಿಕ ಮಾತುಕತೆ ನಡೆಸಿದೆ ಎಂದು ತಿಳಿದುಬಂದಿದೆ. ಮೂಲಗಳ ಪ್ರಕಾರ, ಲಕ್ನೋ ಸೂಪರ್ ಜೈಂಟ್ಸ್ ಅಲ್ಲದೆ ಬೇರೆ ಫ್ರಾಂಚೈಸಿಗಳು ಸಹ ಲಕ್ಷ್ಮಣ್ ಹಿಂದೆ ಬಿದ್ದಿವೆ ಎಂದು ಹೇಳಲಾಗುತ್ತಿದೆ.



# ಶ್ರೀಲಂಕಾ ಪ್ರವಾಸಕ್ಕೆ ಟೀಂ ಇಂಡಿಯಾಗೆ ಹಂಗಾಮಿ ಬೌಲಿಂಗ್ ಕೋಚ್ ನೇಮಕ

ಭಾರತದ ಬೌಲಿಂಗ್ ಕೋಚ್ ಆಗಿ ದಕ್ಷಿಣ ಆಫ್ರಿಕಾದ ಮಾಜಿ ವೇಗದ ಬೌಲರ್ ಮೋರ್ನೆ ಮೊರ್ಕೆಲ್ ಹೆಸರು ಮುಂಚೂಣಿಯಲ್ಲಿದೆ. ಆದರೆ ಶ್ರೀಲಂಕಾ ಪ್ರವಾಸದಲ್ಲಿ ಅವರು ಟೀಂ ಇಂಡಿಯಾದಲ್ಲಿ ಕಾಣಿಸಿಕೊಳ್ಳುವ ಸಾಧ್ಯತೆ ತೀರ ಕಡಿಮೆ. ಆದ್ದರಿಂದ ಭಾರತ ತಂಡಕ್ಕೆ ತಾತ್ಕಾಲಿಕ ಬೌಲಿಂಗ್ ಕೋಚ್ ಆಯ್ಕೆ ಮಾಡಲು ಮುಂದಾಗಿರುವ ಬಿಸಿಸಿಐ, ಸಾಯಿರಾಜ್ ಬಹುತುಲೆ ಅವರನ್ನು ಹಂಗಾಮಿ ಬೌಲಿಂಗ್ ಕೋಚ್ ಆಗಿ ನೇಮಿಸಿದೆ.

ಕಳೆದ ತಿಂಗಳಷ್ಟೇ ಟಿ20 ವಿಶ್ವಕಪ್ ಎತ್ತಿ ಹಿಡಿದಿರುವ ಭಾರತ ತಂಡ ಇದೀಗ ದ್ವಿಪಕ್ಷೀಯ ಸರಣಿಗಾಗಿ ಶ್ರೀಲಂಕಾ ಪ್ರವಾಸ ಕೈಗೊಳ್ಳಲಿದೆ. ಈ ಪ್ರವಾಸದಲ್ಲಿ ಟೀಂ ಇಂಡಿಯಾ 3 ಪಂದ್ಯಗಳ ಟಿ20 ಹಾಗೂ 3 ಪಂದ್ಯಗಳ ಏಕದಿನ ಸರಣಿಯನ್ನು ಆಡಲಿದೆ. ಈಗಾಗಲೇ ಈ ಎರಡು ಸರಣಿಗಳಿಗಾಗಿ ಬಿಸಿಸಿಐ ಎರಡೂ ತಂಡಗಳನ್ನು ಪ್ರಕಟಸಿದ್ದು, ಭಾರತ ತಂಡ ಜುಲೈ 22ರಂದು ಶ್ರೀಲಂಕಾಕ್ಕೆ ತೆರಳುವ ಸಾಧ್ಯತೆಗಳಿವೆ.

ಈ ಪ್ರವಾಸದೊಂದಿಗೆ ಭಾರತ ತಂಡದ ಕೋಚಿಂಗ್ ವಿಭಾಗದಲ್ಲಿ ಹೊಸಬರ ಮುಖ ಕಾಣಿಸಿಕೊಳ್ಳಲಿದೆ. ಇಷ್ಟು ದಿನ ರಾಹುಲ್ ದ್ರಾವಿಡ್ ನಿಭಾಯಿಸಿದ ಮುಖ್ಯ ಕೋಚ್ ಹುದ್ದೆಯನ್ನು ಮಾಜಿ ಟೀಂ ಇಂಡಿಯಾ ಆಟಗಾರ ಗೌತಮ್ ಗಂಭೀರ್ ನಿಭಾಯಿಸಲಿದ್ದಾರೆ. ಗಂಭೀರ್ ಹೊರತುಪಡಿಸಿ ಉಳಿದ ಸಿಬ್ಬಂದಿಗಳನ್ನು ಆಯ್ಕೆ ಮಾಡುವ ಕಾರ್ಯದಲ್ಲಿ ಬಿಸಿಸಿಐ ನಿರತವಾಗಿದೆ. ಲಂಕಾ ಪ್ರವಾಸಕ್ಕೂ ಮುನ್ನ ತಂಡಕ್ಕೆ ಬೌಲಿಂಗ್ ಕೋಚ್, ಬ್ಯಾಟಿಂಗ್ ಕೋಚ್ ಹಾಗೂ ಫಿಲ್ಡಿಂಗ್ ಕೋಚ್ ಆಯ್ಕೆ ಮಾಡಬೇಕಾಗಿದೆ. ಈಗಾಗಲೇ ಈ ಹುದ್ದೆಗಳಿಗೆ ಹಲವರ ಹೆಸರುಗಳು ಕೇಳಿ ಬರುತ್ತಿವೆಯಾದರೂ, ಯಾರ ಹೆಸರೂ ಇನ್ನು ಅಂತಿಮವಾಗಿಲ್ಲ. ಇದರೊಳಗೆ ಬೌಲಿಂಗ್ ಕೋಚ್ ಆಗಿ ದಕ್ಷಿಣ ಆಫ್ರಿಕಾದ ಮಾಜಿ ವೇಗದ ಬೌಲರ್ ಮೋರ್ನೆ ಮೊರ್ಕೆಲ್ ಹೆಸರು ಮುಂಚೂಣಿಯಲ್ಲಿದೆ. ಆದರೆ ಶ್ರೀಲಂಕಾ ಪ್ರವಾಸದಲ್ಲಿ ಅವರು ಟೀಂ ಇಂಡಿಯಾದಲ್ಲಿ ಕಾಣಿಸಿಕೊಳ್ಳುವ ಸಾಧ್ಯತೆ ತೀರ ಕಡಿಮೆ. ಮೇಲೆ ಹೇಳಿದಂತೆ ಶ್ರೀಲಂಕಾ ಪ್ರವಾಸದಲ್ಲಿ ಟೀಂ ಇಂಡಿಯಾ ಏಕದಿನ ಮತ್ತು ಟಿ20 ಸರಣಿಗಳನ್ನು ಆಡಲಿದೆ. ಒಂದೆಡೆ ರೋಹಿತ್ ಶರ್ಮಾ ಏಕದಿನ ಸರಣಿಯಲ್ಲಿ ತಂಡದ ನಾಯಕರಾಗಿ ಕಾಣಿಸಿಕೊಂಡರೆ, ಟಿ20 ಸರಣಿಯಲ್ಲಿ ಸೂರ್ಯಕುಮಾರ್ ಯಾದವ್ ತಂಡದ ನಾಯಕರಾಗಲಿದ್ದಾರೆ. ವಿರಾಟ್ ಕೊಹ್ಲಿ ಕೂಡ ಏಕದಿನ ಸರಣಿಯಲ್ಲಿ ಪುನರಾಗಮನ ಮಾಡಲಿದ್ದಾರೆ. ಟಿ20 ಸರಣಿಯೊಂದಿಗೆ ಈ ಪ್ರವಾಸ ಆರಂಭವಾಗಲಿದೆ. ಟಿ20 ಸರಣಿಯ ಮೊದಲ ಪಂದ್ಯ ಜುಲೈ 27 ರಂದು ನಡೆಯಲಿದೆ.

ರಾಹುಲ್ ದ್ರಾವಿಡ್ ನಂತರ ಗೌತಮ್ ಗಂಭೀರ್ ಟೀಂ ಇಂಡಿಯಾದ ಮುಖ್ಯ ಕೋಚ್ ಆಗಿ ನೇಮಕಗೊಂಡಿದ್ದು, ಇದೀಗ ಟೀಂ ಇಂಡಿಯಾ ತನ್ನ ಮೊದಲ ಸರಣಿಯನ್ನು ಶ್ರೀಲಂಕಾ ಪ್ರವಾಸದಲ್ಲಿ ಗಂಭೀರ್ ಕೋಚಿಂಗ್‌ನಲ್ಲಿ ಆಡಲಿದೆ. ಗೌತಮ್ ಗಂಭೀರ್ ಶ್ರೀಲಂಕಾ ಪ್ರವಾಸದಲ್ಲಿ ಏಕದಿನ ಮತ್ತು ಟಿ20 ಸರಣಿಗಳನ್ನು ಗೆಲ್ಲುವ ಮೂಲಕ ತಮ್ಮ ಅಧಿಕಾರಾವಧಿಯನ್ನು ಪ್ರಾರಂಭಿಸುವ ಇರಾದೆಯಲ್ಲಿದ್ದಾರೆ.



**ಆದ್ದರಿಂದ ಭಾರತ ತಂಡಕ್ಕೆ ತಾತ್ಕಾಲಿಕ ಬೌಲಿಂಗ್ ಕೋಚ್ ಆಯ್ಕೆ ಮಾಡಲು ಮುಂದಾಗಿರುವ ಬಿಸಿಸಿಐ, ಪ್ರಸ್ತುತ ಬೆಂಗಳೂರಿನಲ್ಲಿರುವ ರಾಷ್ಟ್ರೀಯ ಕ್ರಿಕೆಟ್ ಅಕಾಡೆಮಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಾಯಿರಾಜ್ ಬಹುತುಲೆ ಅವರನ್ನು ಶ್ರೀಲಂಕಾ ಪ್ರವಾಸಕ್ಕಾಗಿ ಟೀಮ್ ಇಂಡಿಯಾದ ಬೌಲಿಂಗ್ ಕೋಚ್ ಆಗಿ ನೇಮಿಸಿದೆ. ಕ್ರಿಕ್‌ಬಜ್ ವರದಿಯ ಪ್ರಕಾರ, ಬಹುತುಲೆ ಶೀಘ್ರದಲ್ಲೇ ಗೌತಮ್ ಗಂಭೀರ್ ನೇತೃತ್ವದ ಕೋಚಿಂಗ್ ಪಡೆಯನ್ನು ಸೇರಿಕೊಳ್ಳಲಿದ್ದಾರೆ ಎಂದು ಹೇಳಲಾಗುತ್ತಿದೆ.**

# ಜೀವನದ ರಿಯಲ್ ಹೀರೋಯಿನ್ ಬಗ್ಗೆ ಗುಡ್ ನ್ಯೂಸ್ ಕೊಡಲು ಸಜ್ಜಾದ 'ಕಾಟೇರ' ಡೈರೆಕ್ಟರ್

ಸ್ಯಾಂಡಲ್‌ವುಡ್ ನಿರ್ದೇಶಕ ತರುಣ್ ಸುಧೀರ್ ಮತ್ತು ನಟಿ ಸೋನಲ್ ಮದುವೆ ವಿಚಾರ ಕೆಲದಿನಗಳಿಂದ ಚರ್ಚೆಗೆ ಗ್ರಾಸವಾಗಿದೆ. ಆದರೆ ಮದುವೆ ಯಾವಾಗ? ಯಾರ ಜೊತೆ ಎಂಬುದು ತರುಣ್ ನೇರವಾಗಿ ಮಾತನಾಡಿರಲಿಲ್ಲ. ಈಗ ಜೀವನದ ರಿಯಲ್ ಹೀರೋಯಿನ್ ಬಗ್ಗೆ 'ಕಾಟೇರ' ನಿರ್ದೇಶಕ ತರುಣ್ ಘೋಷಣೆ ಮಾಡೋದಾಗಿ ತಿಳಿಸಿದ್ದಾರೆ. ದರ್ಶನ್‌ರನ್ನು ತರುಣ್ ಜೈಲಿನಲ್ಲಿ ಭೇಟಿಯಾದ ಬೆನ್ನಲ್ಲೇ ಮದುವೆ ಬಗ್ಗೆ ಗುಡ್ ನ್ಯೂಸ್ ಕೊಡಲು ಸಜ್ಜಾಗಿದ್ದಾರೆ.

ಮದುವೆ ಹಾಗೂ ತನ್ನ ಬದುಕಿನ ಹೀರೋಯಿನ್ ಕುರಿತು ಬೆಳಗ್ಗೆ 11:08ಕ್ಕೆ ಮಾಹಿತಿ ನೀಡುವುದಾಗಿ ನಿರ್ದೇಶಕ ತರುಣ್ ಸೋಷಿಯಲ್ ಮೀಡಿಯಾದಲ್ಲಿ ತಿಳಿಸಿದ್ದಾರೆ. ಈವರೆಗೂ ವದಂತಿ ಬಿಟ್ಟರೇ ತರುಣ್ ಆಗಲಿ, ಸೋನಲ್ ಆಗಲಿ ಪ್ರೀತಿ ಅಥವಾ ಮದುವೆ ಕುರಿತು ಮಾತಾಡಿರಲಿಲ್ಲ. ವಿಶೇಷ ವಿಡಿಯೋವೊಂದನ್ನ ಪೋಸ್ಟ್ ಮಾಡಿ ಸೋನಲ್ ಜೊತೆಗಿನ ಮದುವೆ ವದಂತಿಗೆ ತೆರೆ ಎಳೆಯಲಿದ್ದಾರೆ 'ರಾಬರ್ಟ್' ನಿರ್ದೇಶಕ ತರುಣ್. ಸೋನಲ್ ಮತ್ತು ತರುಣ್ ಒಂದೇ ರೀತಿಯ ಪೋಸ್ಟ್ ಶೇರ್ ಮಾಡಿರೋದು ಸೋಷಿಯಲ್ ಮೀಡಿಯಾದಲ್ಲಿ ಗಮನ ಸೆಳೆದಿದೆ. ಅಂದಹಾಗೆ, 'ರಾಬರ್ಟ್' ಸಿನಿಮಾ ಸೆಟ್‌ನಲ್ಲಿ ಸೋನಲ್ ಜೊತೆಗಿನ ಪರಿಚಯವೇ ಮದುವೆಗೆ ಮುನ್ನಡಿ ಬರೆದಿದೆ. ಇಬ್ಬರ ಮದುವೆಗೆ ಮುನ್ನುಡಿ ಬರೆದಿದ್ದೇ ದರ್ಶನ್. ಇದೀಗ ಇದೇ ಆಗಸ್ಟ್ 10, 11ರಂದು ಹೊಸ ಬಾಳಿಗೆ ಸೋನಲ್, ತರುಣ್ ದಾಂಪತ್ಯ ಜೀವನಕ್ಕೆ ಕಾಲಿಡಲಿದ್ದಾರೆ. ಈ ಕುರಿತು ಅಧಿಕೃತ ಘೋಷಣೆ ಆಗಲಿದೆ.



# ಪ್ರಭಾಸ್ ಸಿನಿಮಾಗೆ ಪಾಕಿಸ್ತಾನಿ ಹೀರೋಯಿನ್

ಭಾರತದಲ್ಲಿ ನಟಿಯರ ಸಂಖ್ಯೆ ಕಡಿಮೆ ಏನೂ ಇಲ್ಲ. ಹಾಗಿದ್ದರೂ ಕೂಡ ಪಾಕಿಸ್ತಾನದ ನಟಿಗೆ ಅವಕಾಶ ನೀಡುವುದು ಏಕೆ ಎಂಬ ಪ್ರಶ್ನೆ ನೆಟ್ಟಿಗರಿಗೆ ಮೂಡುತ್ತಿದೆ. ಪ್ರಭಾಸ್ ಅಭಿನಯಿಸಲಿರುವ ಹೊಸ ಸಿನಿಮಾಗೆ ಪಾಕಿಸ್ತಾನದ ನಟಿ ಸಜಲ್ ಅಲಿ ನಾಯಕಿ ಆಗುವ ಸಾಧ್ಯತೆ ಇದೆ ಎನ್ನಲಾಗಿದೆ. ಈ ಬಗ್ಗೆ ಕೆಲವು ಮಾಧ್ಯಮಗಳು ವರದಿ ಪ್ರಕಟ ಮಾಡಿವೆ. ಪ್ರಭಾಸ್ ಹೊಸ ಸಿನಿಮಾಗೆ ಪಾಕಿಸ್ತಾನಿ ಹೀರೋಯಿನ್ ಸುಂದರಿ ಬಗ್ಗೆ ಇಲ್ಲಿದೆ ಮಾಹಿತಿ..
ನಟ ಪ್ರಭಾಸ್ ಅವರು ಬ್ಯಾಕ್ ಟು ಬ್ಯಾಕ್ ಸಿನಿಮಾಗಳನ್ನು ಒಪ್ಪಿಕೊಂಡು ನಟಿಸುತ್ತಿದ್ದಾರೆ. ಇತ್ತೀಚೆಗೆ ಅವರು ನಟಿಸಿದ 'ಕಲ್ಕಿ 2898 ಎಡಿ' ಸಿನಿಮಾ ಅಭೂತಪೂರ್ವ ಯಶಸ್ಸು ಕಂಡಿದೆ. ಇದರಿಂದ ಅವರಿಗೆ ಇದ್ದ ಡಿಮ್ಯಾಂಡ್ ಹೆಚ್ಚಾಗಿದೆ. ಇತ್ತೀಚಿನ ವರ್ಷಗಳಲ್ಲಿ ಎದುರಾಗಿದ್ದ ಸೋಲುಗಳನ್ನು ಮರೆಸುವ ರೀತಿಯಲ್ಲಿ 'ಕಲ್ಕಿ 2898 ಎಡಿ' ಚಿತ್ರ ಗೆದ್ದಿದೆ. ಹಾಗಾಗಿ ಅವರ ಮುಂಬರುವ ಸಿನಿಮಾಗಳ ಬಗ್ಗೆ ನಿರೀಕ್ಷೆ ಹೆಚ್ಚಾಗಿದೆ. ಪ್ರಭಾಸ್ ಅವರ ಹೊಸ ಸಿನಿಮಾದಲ್ಲಿ ಪಾಕಿಸ್ತಾನದ ನಟಿ ಸಜಲ್ ಅಲಿ ಅವರು ಹೀರೋಯಿನ್ ಆಗುತ್ತಾರೆ ಎಂದು ಗಾಸಿಪ್ ಹಬ್ಬಿದೆ. ಪ್ರಭಾಸ್ ಅವರು ಈಗ 'ದಿ ರಾಜಾ ಸಾಬ್' ಸಿನಿಮಾದ ಕೆಲಸಗಳಲ್ಲಿ ಬ್ಯುಸಿ ಆಗಿದ್ದಾರೆ. ಹಾರರ್ ಕಾಮಿಡಿ ಪ್ರಕಾರದ ಆ ಸಿನಿಮಾಗೆ ಮಾರುತಿ ನಿರ್ದೇಶನ ಮಾಡುತ್ತಿದ್ದಾರೆ. ಆ ಬಳಿಕ ಪ್ರಭಾಸ್ ಅವರು ನಿರ್ದೇಶಕ ಹನು ರಾಘವಪುಡಿ ಜೊತೆ ಕೈ ಜೋಡಿಸಲಿದ್ದಾರೆ. ಈ ಸಿನಿಮಾದ ಪಾತ್ರವರ್ಗದ ಬಗ್ಗೆ ಒಂದು ಅಚ್ಚರಿಯ ಮಾಹಿತಿ ಹರಿದಾಡುತ್ತಿದೆ. ಈ ಸಿನಿಮಾಗೆ ಪಾಕಿಸ್ತಾನದ ನಟಿಯನ್ನು ಆಯ್ಕೆ ಮಾಡಿಕೊಳ್ಳಲಾಗುವುದು ಎಂಬ ಸುದ್ದಿ ಕೇಳಿಬಂದಿದೆ.
ಪಾಕಿಸ್ತಾನದಲ್ಲಿ ನಟಿ ಸಜಲ್ ಅಲಿ ಅವರು ಫೇಮಸ್ ಆಗಿದ್ದಾರೆ. ಸೋಶಿಯಲ್ ಮೀಡಿಯಾದಲ್ಲಿ ಅವರನ್ನು 1 ಕೋಟಿಗೂ ಅಧಿಕ ಜನರು ಫಾಲೋ ಮಾಡುತ್ತಿದ್ದಾರೆ. ಅನೇಕ ಸಿನಿಮಾ, ಸೀರಿಯಲ್, ವೆಬ್ ಸಿರೀಸ್‌ಗಳಲ್ಲಿ ನಟಿಸಿದ ಅನುಭವ ಸಜಲ್ ಅಲಿಗೆ ಇದೆ. ಈ ಮೊದಲು ಬಾಲಿವುಡ್‌ನ ಮಾಮ್' ಸಿನಿಮಾದಲ್ಲಿ ಅವರು ನಟಿಸಿದ್ದರು.



# ನಿವೇದಿತಾ ಶಿವರಾಜ್‌ಕುಮಾರ್ ನಿರ್ಮಾಣದ ಸಿನಿಮಾದಲ್ಲಿ ರಚನಾ ಇಂದರ್ ನಾಯಕಿ

ಯುವ ಪ್ರತಿಭೆ ವಂಶಿ ನಟಿಸಿ, ನಿರ್ದೇಶಿಸುತ್ತಿರುವ ಬಹುನಿರೀಕ್ಷಿತ ಸಿನಿಮಾ 'ಫೈರ್ ಫ್ಲೈ'. ಈ ಚಿತ್ರ ನಾನಾ ಕಾರಣಗಳಿಂದ ನಿರೀಕ್ಷೆ ಹೆಚ್ಚಿಸಿದೆ. ಅದರಲ್ಲಿ ಪ್ರಮುಖವಾಗಿ ಹ್ಯಾಟ್ರಿಕ್ ಹೀರೋ ಶಿವರಾಜ್ ಕುಮಾರ್ ಪುತ್ರಿ ನಿವೇದಿತಾ ಶಿವರಾಜ್‌ಕುಮಾರ್ ಚಿತ್ರ ನಿರ್ಮಾಣ ಮಾಡುತ್ತಿರುವುದು ಒಂದು ವಿಷಯವಾದರೆ, ಮತ್ತೊಂದು ಕಾರಣ ಸಿನಿಮಾದ ತಾರಾಬಳಗ. ಈಗ ಈ ಚಿತ್ರಕ್ಕೆ 'ಲವ್ ಮಾಕ್ಟೈಲ್' ನಟಿ ಎಂಟ್ರಿ ಕೊಟ್ಟಿದ್ದಾರೆ.

ಈಗಾಗಲೇ ಫೈರ್ ಫ್ಲೈ ಸಿನಿತಂಡ ಸುಧಾರಾಣಿ, ಅಚ್ಯುತ್ ಕುಮಾರ್, ಶೀತಲ್ ಶೆಟ್ಟಿ ಸೇರಿದಂತೆ ಹಲವರನ್ನು ಪರಿಚಯಿಸಿದೆ. ಇದೀಗ ಚಿತ್ರದ ನಾಯಕಿ ಯಾರು ಅನ್ನೋದನ್ನು ಅನಾವರಣ ಮಾಡಿದೆ. ವಂಶಿಗೆ ನಾಯಕಿಯಾಗಿ ರಚನಾ ಇಂದರ್ ಸಾಥ್ ನೀಡಿದ್ದಾರೆ. ಲವ್ ಮಾಕ್ಟೈಲ್, ಹರಿಕಥೆ ಅಲ್ಲ ಗಿರಿಕಥೆ, ತ್ರಿಬಲ್ ರೈಡಿಂಗ್ ಸಿನಿಮಾಗಳಲ್ಲಿ ಬಬ್ಲಿ ಪಾತ್ರಗಳಲ್ಲಿ ಕಾಣಿಸಿಕೊಂಡಿರುವ ರಚನಾ ಇಂದರ್ ವಂಶಿಗೆ ಜೋಡಿಯಾಗಿ ಅಭಿನಯಿಸಿದ್ದಾರೆ. ನೇಹಾ ಎಂಬ ಪಾತ್ರದಲ್ಲಿ ರಚನಾ ಬಣ್ಣ ಹಚ್ಚಿದ್ದು, ತಮ್ಮ ಪಾತ್ರದ ಬಗ್ಗೆ ಮಾತನಾಡಿದ್ದಾರೆ. ನಿವೇದಿತಾ ಶಿವರಾಜ್‌ಕುಮಾರ್ ಅವರು ಅದ್ಭುತ ಕೆಲಸ ಮಾಡುತ್ತಿದ್ದಾರೆ. ಇಡೀ ತಂಡಕ್ಕೆ ಬೆನ್ನೆಲುಬಾಗಿ ನಿಂತಿದ್ದಾರೆ. ಸಿನಿಮಾದಲ್ಲಿ ನೇಹಾ ಎಂಬ ಪಾತ್ರ ಮಾಡಿದ್ದೇನೆ. ನೇಹಾ ಬದುಕನ್ನು ತುಂಬಾ ಇಷ್ಟಪಡುತ್ತಾಳೆ. ಎಂಜಾಯ್ ಮಾಡುತ್ತಾಳೆ. ಭವಿಷ್ಯದ ಬಗ್ಗೆ ಯೋಚನೆ ಮಾಡೋದಿಲ್ಲ.

ಸಿನಿಮಾವನ್ನು ನಾನು ನೋಡಲು ಕಾತರಳಾಗಿದ್ದಾನೆ. ಚಿತ್ರದ ಒಂದಷ್ಟು ಕ್ಲಿಪ್ ನೋಡಿದಾಗ ಮನರಂಜನೆ ನೀಡುವ ಸಿನಿಮಾ ಎನಿಸಿತು.

ವಂಶಿ ತುಂಬಾ ಹಾರ್ಡ್ ವರ್ಕ್ ಮಾಡಿದ್ದಾರೆ. ದೀಪಾವಳಿಗೆ ನಮ್ಮ ಚಿತ್ರ ತೆರೆಗೆ ಬರುತ್ತಿದೆ ಎಂದಿದ್ದಾರೆ. ಫೈರ್ ಫ್ಲೈ' ಸಿನಿಮಾವನ್ನು ಯುವ ನಟ ವಂಶಿ ಡೈರೆಕ್ಟ್ ಮಾಡುತ್ತಿದ್ದಾರೆ. ಪೂರ್ಣ ಪ್ರಮಾಣದ ನಾಯಕರಾಗಿಯೂ ಈ ಮೂಲಕ ವಂಶಿ ಕನ್ನಡಕ್ಕೆ ಪರಿಚಯ ಆಗುತ್ತಿದ್ದಾರೆ. ಚಿತ್ರಕ್ಕೆ ಅಭಿಲಾಷ್ ಕಳತ್ತಿ ಛಾಯಾಗ್ರಹಣ ಮಾಡುತ್ತಿದ್ದಾರೆ.

ಚರಣ್ ರಾಜ್ ಈ ಚಿತ್ರಕ್ಕೆ ಸಂಗೀತ ಸಂಯೋಜನೆ ಮಾಡಿದ್ದಾರೆ. ರಘು ನಿಡುವಳ್ಳಿ ಈ ಚಿತ್ರಕ್ಕೆ ಸಂಭಾಷಣೆ ಬರೆದಿದ್ದಾರೆ. ನಾಯಕ ಕಮ್ ನಿರ್ದೇಶಕ ವಂಶಿಗೆ ಇಲ್ಲಿ ಜಯ್ ರಾಮ್ ಸಹನಿರ್ದೇಶಕರಾಗಿ ಕೆಲಸ ಮಾಡುತ್ತಿದ್ದಾರೆ. ಸಿನಿಮಾ ನಿರ್ಮಾಣ ಸಂಸ್ಥೆ ಶ್ರೀಮುತ್ತು ಸಿನಿ ಸರ್ವಿಸ್ ಸಂಸ್ಥೆ ಈ ಮೂಲಕ ಯುವ ಪ್ರತಿಭೆಗಳಿಗೆ ಪ್ರೋತ್ಸಾಹ ಕೂಡ ಕೊಡುತ್ತಿದೆ. ಈ ಸಂಸ್ಥೆಯ ಮೊದಲ ಕೂಸು 'ಫೈರ್ ಫ್ಲೈ' ಸಿನಿಮಾ ದೀಪಾವಳಿಗೆ ತೆರೆಗೆ ಬರಲಿದೆ.



# ಎದೆಯ ಸೀಳು ಕಾಣುವಂತೆ ತುಂಡು ಬಟ್ಟೆ ತೊಟ್ಟ ಹೆಬ್ಬುಲಿ ನಟಿ ವಿರುದ್ಧ ನೆಟ್ಟಿಗರು ಗರಂ

ಕನ್ನಡದ 'ಹೆಬ್ಬುಲಿ' ನಟಿ ಅಮಲಾ ಪೌಲ್ ಇತ್ತೀಚೆಗೆ ಗಂಡು ಮಗುವಿಗೆ ಜನ್ಮ ನೀಡಿದ ಬೆನ್ನಲ್ಲೇ ಮತ್ತೆ ಸಿನಿಮಾ ಕೆಲಸದಲ್ಲಿ ಆಯಕ್ಟೀವ್ ಆಗಿದ್ದಾರೆ. ಕಾಲೇಜು ಕಾರ್ಯಕ್ರಮವೊಂದರಲ್ಲಿ ಎದೆಯ ಸೀಳು ಕಾಣುವಂತೆ ತುಂಡು ಬಟ್ಟೆ ಧರಿಸಿ ಬಂದ ಅಮಲಾ ವಿರುದ್ಧ ನೆಟ್ಟಿಗರು ರಾಂಗ್ ಆಗಿದ್ದಾರೆ. ತಾಯ್ತನದ ಖುಷಿ ಯಲ್ಲಿರುವ ಅಮಲಾ ಪೌಲ್ ಮತ್ತೆ ಸಿನಿಮಾ ಕೆಲಸದತ್ತ ಮುಖ ಮಾಡಿದ್ದಾರೆ. ಅಮಲಾ ನಟಿಸಿರುವ ಲೆವೆಲ್ ಕ್ರಾಸ್ ಎಂಬ ಮಲಯಾಳಂ ಸಿನಿಮಾ ಈಗ ರಿಲೀಸ್‌ಗೆ ಸಿದ್ಧವಾಗಿದೆ. ಇದರ ಪ್ರಚಾರ ಕಾರ್ಯ ಕೂಡ ಭರದಿಂದ ನಡೆಯುತ್ತಿದೆ. ಸಿನಿಮಾ ಪ್ರಮೋಷನ್ ಸಾಥ್ ಕೊಟ್ಟಿರುವ ಅಮಲಾ, ಕಾಲೇಜು ಫಂಕ್ಷನ್‌ವೊಂದಕ್ಕೆ ಹಾಟ್ ಆಗಿ ಕಾಣಿಸಿ ಕೊಂಡಿದಕ್ಕೆ ನೆಟ್ಟಿಗರು ಗರಂ ಆಗಿದ್ದಾರೆ. ಎದೆಯ ಸೀಳು ಕಾಣುವಂತೆ ಶಾರ್ಟ್ ಡ್ರೆಸ್ ಧರಿಸಿ ಯಾರಾದರೂ ಕಾಲೇಜು ಕಾರ್ಯಕ್ರಮಕ್ಕೆ ಹೀಗೆ ಬರುತ್ತಾರಾ. ನಟಿಯಾಗಿ ಗೌರವಯುತವಾಗಿ ನಡೆದುಕೊಳ್ಳಬೇಕು ಅಲ್ವಾ ಅಂತ ಅಮಲಾಗೆ ಸೋಷಿಯಲ್ ಮೀಡಿಯಾದಲ್ಲಿ ಫುಲ್ ಕ್ಲಾಸ್ ತೆಗೆದುಕೊಂಡಿದ್ದಾರೆ. ಮಾಲಿವುಡ್‌ನಲ್ಲಿ ಸ್ಟಾರ್ ನಟರಿಗೆ ಜೋಡಿಯಾಗಿ ನಟಿಸಿ ಸೈ ಎನಿಸಿಕೊಂಡಿರುವ ಅಮಲಾ ಪೌಲ್ ಅವರು ಕನ್ನಡದ ಹೆಬ್ಬುಲಿ' ಸಿನಿಮಾದಲ್ಲಿ ಸುದೀಪ್‌ಗೆ ನಾಯಕಿಯಾಗಿದ್ದರು.

**ಸಿನಿಮಾ ಈಗ ರಿಲೀಸ್‌ಗೆ ಸಿದ್ಧ**



# ಲೈಫ್ ಆಫ್ ಮೃದುಲ' ಚಿತ್ರದ ಸಾಂಗ್ ರಿ ಲೀಸ್



ಹೊಸಬರ ತಂಡ ಸೇರಿಕೊಂಡು ಸಿದ್ಧಪಡಿಸಿರುವ ಲೈಫ್ ಆಫ್ ಮೃದುಲ ಚಿತ್ರವನ್ನು ಮದನ್ ಮೂವೀಸ್ ಬ್ಯಾನರ್ ಅಡಿಯಲ್ಲಿ ನಿರ್ಮಿಸಿ, ನಾಯಕನಾಗಿ ಮದನ್ ಕುಮಾರ್ ಸಿ ನಟಿಸಿದ್ದಾರೆ. ಸಂಭಾಷಣೆ ಬರೆದಿರುವ ಯೋಗಿ ದೇವಗಂಗೆ ನಿರ್ಮಾಣದಲ್ಲಿಯೂ ಕೈ ಜೋಡಿಸಿದ್ದಾರೆ. ಹಲವು ನಿರ್ದೇಶಕರ ಬಳಿ ಕೆಲಸ ಕಲಿತಿರುವ ಕೋಲಾರದ ಚೇತನ್ ತ್ರಿವೇಣ್ ಈ ಸಿನಿಮಾಗೆ ಚಿತ್ರಕಥೆ ಬರೆದು ಆಯಕ್ಷನ್ ಕಟ್ ಹೇಳಿದ್ದಾರೆ.

ಪ್ರಚಾರದ ಮೊದಲ ಹಂತವಾಗಿ ಹಾಡು ಬಿಡುಗಡೆ ಸಮಾರಂಭವು ಚಾಮುಂ ಡೇಶ್ವರಿ ಸ್ಟುಡಿಯೋದಲ್ಲಿ ಅದ್ಧೂರಿಯಾಗಿ ನಡೆಯಿತು. ಯುವ ಮುಖಂಡ ಮೊಹಮ್ಮದ್ ನಲಪಾಡ್ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ನಂತರ ಮಾತನಾಡುತ್ತಾ, 'ಬಗ್ಗೋದೇ ಬಡಿಯೋದೆ' ಹಾಡಿನ ಸಾಲು ಯುವ ಜನಾಂಗಕ್ಕೆ ತಪ್ಪು ಸಂದೇಶ ಸಾರುತ್ತದೆ. ಇದನ್ನು ಯುವಕರಿಗೆ ತೋರಿಸಬಾರದು, ಮಾಡಬಾರದು. ಈಗಾಗಲೇ ಅದರ ಅನುಭವ ಪಡೆದಿದ್ದೇನೆ. ರಯಾಪ್ ಸಾಂಗ್ ಅಂದರೆ ತಕ್ಷಣ ವೈಯಲೆಂಟ್ ಆಗಿರಬೇಕು ಎಂದು ಯಾರೂ ಹೇಳಿಲ್ಲ. ಒಳ್ಳೆತನದಲ್ಲೂ ರಯಾಪ್ ಮಾಡಬಹುದು. ಇಂತಹ ಪದಗಳು ಬದಲಾದರೆ, ಮುಂದಿನ ತಲೆಮಾರು ಬದಲಾವಣೆ ಆಗಲು ಸಾಧ್ಯವಾಗುತ್ತದೆ. ಇದನ್ನು ಗಮನದಲ್ಲಿಟ್ಟುಕೊಂಡು ಒಳ್ಳೆತನ ಬೆಳೆಸೋಣ ಎಂದು ತಂಡಕ್ಕೆ ಶುಭ ಹಾರೈಸಿದರು. ಕಾಲ್ಪನಿಕ ಡಾರ್ಕ್ ಡ್ರಾಮಾ ಜಾನರ್‌ನ ಕಥೆಯಾಗಿದ್ದು, ಮೃದುಲ ಎಂಬುವಳ ಜೀವನದಲ್ಲಿ ಎದುರಾಗುವ ಮೂರು ವಿಭಿನ್ನ ಕಾಲ ಘಟ್ಟಗಳು ಬರುತ್ತದೆ. ಆಕೆಗೆ ಬದುಕಲ್ಲಿ ಅನಿರೀಕ್ಷಿತವಾಗಿ ಬರುವ ಸವಾಲನ್ನು ಯಾವ ರೀತಿ ಎದುರಿಸುತ್ತಾಳೆ ಎಂಬುದನ್ನು ಕುತೂಹಲ ತಿರುವುಗಳ ಮೂಲಕ ಥ್ರಿಲ್ಲರ್ ರೂಪದಲ್ಲಿ ತೋರಿಸಲಾಗಿದೆ. ನಾಯಕಿಯಾಗಿ ಪೂಜಾ ಲೋಕಾಪುರ ಜೊತೆ ಆಶಾ ಸುಜಯ್, ಶಶಾಂಕ್, ಕುಲದೀಪ್, ಯೋಗಿದೇವಗಂಗೆ, ಅನೂಪ್ ಥಾಮಸ್, ಪ್ರೀತಿ ಚಿದಾನಂದ್, ಶರೀಫ್ ಮುಂತಾದವರು ನಟಿಸಿದ್ದಾರೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966